ಬೆಂಗಳೂರು ಸಂಪುಟ: 16 ಸಂಚಿಕೆ: 54 ಪುಟ: 06 ಸೋಮವಾರ 20-01-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಯಕ್ಷಗಾನಕ್ಕೂ ಸೈ ಎಂದ ಉಮಾಶ್ರೀ

ಭಾರತಕ್ಕೆ ಖೋ-ಖೋ ವಿಶ್ವಕಪ್ ಡಬಲ್ ಸಂಭ್ರಮ

ಪುಟ 6

## ಪಕ್ಷ ಉಳಿಸುವುದು.. ಸರ್ಕಾರಭದ್ರವಾಗಿಡುವುದು ನನ್ನ ಕರ್ತವ್ಯ: ಡಿಕೆಶಿ

# ತ್ಯಾಗ ಹೊಸದೇನಲ್ಲ!

**ಬೆಳಗಾವಿ:** "ಪಕ್ಷವನ್ನು ಉಳಿಸುವುದು, ಸರ್ಕಾರವನ್ನು ಭದ್ರವಾಗಿಡುವುದೇ ನನ್ನ ಕರ್ತವ್ಯ. ಇದರ ಹೊರತಾಗಿ ನನಗೆ ಬೇರೆ ಯಾವುದೇ ಕರ್ತವ್ಯಗಳಿಲ್ಲ. ಬೇರೆ ಯಾವುದಕ್ಕೂ ನನ್ನ ಹೆಸರನ್ನು ಉಪಯೋಗಿಸಿಕೊಳ್ಳಬೇಡಿ. ನನಗೆ ಯಾರ ಜೊತೆಯೂ ಭಿನ್ನಾಭಿಪ್ರಾಯವಿಲ್ಲ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಬೆಳಗಾವಿಯ ಸರ್ಕಿಟ್ ಹೌಸ್ ಬಳಿ ಶಿವಕುಮಾರ್ ಅವರು ಮಾಧ್ಯಮಗಳಿಗೆ ಸೋಮವಾರ ಪ್ರತಿಕ್ರಿಯೆ ನೀಡಿದರು. "ಕಾರ್ಯಕರ್ತರ ರಕ್ಷಣೆ ಮಾಡುವುದು ನನ್ನ ಮೊದಲ ಕರ್ತವ್ಯ. ನಾನು ನನ್ನ ಕೆಲಸವನ್ನು ಮಾಡುತ್ತಿದ್ದೇನೆ. ನಾನು, ಪಕ್ಷ, ಹೈಕಮಾಂಡ್ ಉಂಟು. ಮಾಧ್ಯಮದವರು ಯಾರೋ ಹೇಳಿದ ಸುಳ್ಳನ್ನು ನಂಬಬೇಡಿ. ಶಿವಕುಮಾರ್ ಅವರಿವರನ್ನು ಭೇಟಿ ಮಾಡಿದರು, ಪಕ್ಷದಲ್ಲಿ ಬಂಡಾಯವಿದೆ ಎಂದೆಲ್ಲಾ ಹೇಳಬೇಡಿ" ಎಂದು ಕಿಡಿಯಾದರು.

ಕಾಂಗ್ರೆಸ್ ಪಕ್ಷದಲ್ಲಿ ಬಂಡಾಯ, ಆಂತರಿಕ ಬೇಗುದಿ ಇಲ್ಲವೇ ಎಂದು ಕೇಳಿದಾಗ, "ಯಾವ ಬಂಡಾಯವೂ ಇಲ್ಲ. ಯಾರ ಜೊತೆಯೂ ವೈಯಕ್ತಿಕ ಭಿನ್ನಾಭಿಪ್ರಾಯವಿಲ್ಲ. ನಾನು ಎಲ್ಲರನ್ನು ಸಮಾನವಾಗಿ ಕಾಣುವ ಅಧ್ಯಕ್ಷ ಸ್ಥಾನದಲ್ಲಿದ್ದು, ನನಗೆ ಎಲ್ಲರೂ ಒಂದೇ. ಎಲ್ಲರನ್ನು ಸರಿ ಸಮಾನವಾಗಿ ತೆಗೆದುಕೊಂಡು ಹೋಗುವುದು ನನ್ನ ಕರ್ತವ್ಯ" ಎಂದರು.

ಯಾರದ್ದೋ ಸುಳ್ಳನ್ನು ನಂಬಬೇಡಿ

ರಣದೀಪ್ ಸುರ್ಜೇವಾಲಾ ಅವರನ್ನೇ ಬದಲಾವಣೆ ಮಾಡಬೇಕು ಎಂದು ಕೆಲವು ಸಚಿವರು ರಾಹುಲ್ ಗಾಂಧಿ ಅವರಿಗೆ ದೂರು ನೀಡುತ್ತಿದ್ದಾರಂತೆ ಎಂಬ ಬಗ್ಗೆ ಕೇಳಿದಾಗ, "ಯಾರೋ ಸುಳ್ಳು ಮಾಹಿತಿ ನೀಡಿ ಮಾಧ್ಯಮಗಳ ಘನತೆಯನ್ನೇ ಹಾಳು ಮಾಡುತ್ತಿದ್ದಾರೆ.



ನಾನು ಭಾನುವಾರ ಹಿರಿಯ ಶಾಸಕರ ಮನೆಗೆ ಭೇಟಿ ನೀಡಿದ್ದೆ. ಅವರಿಗೆ ಯಾರ ಜೊತೆಯೋ ಜಗಳ ಇತ್ತಂತೆ ಎಂದು ಒಂದಷ್ಟು ಟಿವಿ ಮಾಧ್ಯಮಗಳು ನೂತನ ಕಥೆಯನ್ನು ಸೃಷ್ಟಿಸಿದ್ದವು. ಫಿರೋಜ್ ಸೇಠ್ ಅವರು ಪಕ್ಷದ ಹಿರಿಯ ನಾಯಕರು. ನನ್ನ ಜೊತೆ ಶಾಸಕರಾಗಿ ಕೆಲಸ ಮಾಡಿದ್ದಾರೆ. ಬೆಳಗಾವಿಯಲ್ಲಿ ಸಮಾವೇಶ ನಡೆಯುತ್ತಿದೆ. ಅವರನ್ನು ಈ ಸಮಾವೇಶದ ಸಮಿತಿಯ ಸದಸ್ಯರನ್ನಾಗಿ ಮಾಡಲಾಗಿದೆ. ಸಂಘಟನೆ ದೃಷ್ಟಿಯಿಂದ ಜಿಲ್ಲಾ ಅಧ್ಯಕ್ಷರ ಜೊತೆ ಹೋಗಿ ಭೇಟಿ ಮಾಡಿದ್ದೆ. ಆದರೆ, ಮಾಧ್ಯಮಗಳು ಏನೇನೋ ವರದಿ ಬಿತ್ತರ ಮಾಡಿದವು. ಯಾರೋ ಸ್ಟೋರಿ ಪ್ಲಾಂಟ್ ಮಾಡಿದ್ದನ್ನು ನಂಬಿ ಮಾಧ್ಯಮಗಳು ತಮ್ಮ ಘನತೆಯನ್ನು ಹಾಳು ಮಾಡಿಕೊಳ್ಳಬಾರದು" ಎಂದರು.

ಕಾಂಗ್ರೆಸ್ ನ 60 ಜನ ಶಾಸಕರು ಬಿಜೆಪಿಗೆ ಬರುತ್ತಾರೆ ಎನ್ನುವ ಯತ್ನಾಳ್ ಹೇಳಿಕೆ ಬಗ್ಗೆ ಕೇಳಿದಾಗ, "ಇಂತಹ ನೀಚ ರಾಜಕಾರಣದ ಬಗ್ಗೆ ನೀವು ಪ್ರಶ್ನೆ ಮಾಡಿದರೆ ಹೇಗೆ? ಇಂತಹ ಪ್ರಶ್ನೆಗಳಿಗೆ ನಾನು ಉತ್ತರಿಸುವುದಿಲ್ಲ. ಬೆಳಗಾವಿಯಲ್ಲಿ ನಡೆಯುತ್ತಿರುವ ರಾಷ್ಟ್ರ ಮಟ್ಟದ ಕಾರ್ಯಕ್ರಮದ ಬಗ್ಗೆ ಗಮನಹರಿಸಿ. ನಿಮಗೆ ಯಾರು ಏನೇ ಹೇಳಿದ್ದರೂ ಅದೆಲ್ಲಾ ಸುಳ್ಳಿನ ಕಂತೆ. ಕಾಂಗ್ರೆಸ್ ಗೆ ಶಕ್ತಿ ತುಂಬಲು ಅನೇಕ ಹೋರಾಟ, ತ್ಯಾಗ ಮಾಡಲಾಗಿದೆ. ಈ ಬೆಳಗಾವಿ ಭೂಮಿಯಿಂದಲೇ ಗಾಂಧಿ ಬಾವಿಯಿಂದ ನೀರು ತೆಗೆದು ಸ್ವಚ್ಚಗೊಳಿಸಿ ಪಕ್ಷವನ್ನು ಅಧಿಕಾರಕ್ಕೆ ತರಲಾಗಿದೆ" ಎಂದರು.

2023 ರ ಚುನಾವಣೆಯಲ್ಲಿ ಫಿರೋಜ್ ಸೇಠ್ ಅವರಿಗೆ ಟಿಕೆಟ್ ಸಿಗದಿದ್ದಕ್ಕೆ ಸತೀಶ್ ಜಾರಕಿಹೊಳಿ ಅವರು ಕಾರಣ ಎನ್ನುವ ಮಾತಿನ ಬಗ್ಗೆ ಕೇಳಿದಾಗ, "ನನಗೆ ಈ ವಿಚಾರದ ಬಗ್ಗೆ ಗೊತ್ತಿಲ್ಲ. ನನಗೆ ಎಲ್ಲರೂ ಒಂದೇ. ಕಾರ್ಯಕರ್ತರು, ಶಾಸಕರು, ಸಚಿವರು ಎಲ್ಲರೂ ಒಂದೇ. ನಮ್ಮ ಪಕ್ಷದ ಶಿಸ್ತಿನ ಚೌಕಟ್ಟಿನಲ್ಲಿ ಕೆಲಸ ಮಾಡುವವರ ಎದುರು ತಲೆಬಾಗಿ ಅವರ ಸೇವೆ ಮಾಡುತ್ತೇನೆ. ನನಗೆ ಪಕ್ಷವೇ ಮುಖ್ಯ. ನನಗೆ ಕೊಟ್ಟಿರುವ ಜವಾಬ್ದಾರಿಗಳನ್ನು ಪುಟ 2



ಬಿಜೆಪಿ ರಾಜ್ಯಧ್ಯಕ್ಷ ಬಿ ವೈ ವಿಜಯೇಂದ್ರ ಅವರು ಇಂದು ಮಹಾಲಕ್ಷ್ಮಿ ಪುರಂನ ಬಿ ಜಿ ಎಸ್ ಶಾಲೆಗೆ ಆಗಮಿಸಿ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷರಾದ ಜಗದ್ಗುರು ಶ್ರೀ ಶ್ರೀ ಶ್ರೀ ನಿರ್ಮಲಾನಂದ ನಾಥ ಸ್ವಾಮೀಜಿಗಳನ್ನು ಸೌಹಾರ್ದ ಭೇಟಿ ನೀಡಿ ಆಶೀರ್ವಾದ ಪಡೆದರು.ಈ ಸಂದರ್ಭದಲ್ಲಿ ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯ ಪಾಲಿಕೆ ಮಾಜಿ ಉಪಮೇಯ ಎಸ್ ಹರೀಶ್ ಬಿಜೆಪಿ ಸೆಂಟ್ರಲ್ ಅಧ್ಯಕ್ಷ ಸಪ್ತಗಿರಿ ಗೌಡ ಉತ್ತರ ಜಿಲ್ಲಾ ಘಟಕದ ಉಪ ಅಧ್ಯಕ್ಷ ಜಯರಾಮಯ್ಯ ಬಿಜೆಪಿ ಮುಖಂಡರುಗಳಾದ ವೆಂಕಟೇಶ್ ಮೂರ್ತಿ ರೈಲ್ವೆ ನಾರಾಯಣ ಶಿವಾನಂದಮೂರ್ತಿ ನಂದಿನಿ ಲೇಔಟ್ ವಾರ್ಡ್ ಅಧ್ಯಕ್ಷ ಲೋಕೇಶ್ ಸೇರಿದಂತೆ ಪ್ರಮುಖರು ಪಾಲ್ಗೊಂಡಿದ್ದರು.

## ನಾಳೆ ರಾಜ್ಯ ಕೋರ್ ಕಮಿಟಿ ಸಭೆ

ಬೆಂಗಳೂರು: ನಾಳೆ (ಜ.21) ಸಂಜೆ 7 ಗಂಟೆಗೆ ಬಿಜೆಪಿ ರಾಜ್ಯದ ಕೋರ್ ಕಮಿಟಿ ಸಭೆ ನಡೆಯಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ. ಇಂದು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ರಾಜ್ಯ ಬಿಜೆಪಿ ಉಸ್ತುವಾರಿ ಹಾಗೂ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಧಾಮೋಹನ್ ದಾಸ್ ಅಗರವಾಲ್, ತಮಿಳುನಾಡಿನಿಂದ ಪೊನ್ನು ರಾಧಾಕೃಷ್ಣನ್, ರಾಜ್ಯದ ಸಹ ಉಸ್ತುವಾರಿ ಸುಧಾಕರ ರೆಡ್ಡಿ ಅವರು ನಾಳೆ ಬೆಂಗಳೂರಿಗೆ ಬರಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಶಾಸಕರು, ಸಂಸದರು, ವಿಧಾನಪರಿಷತ್ ಸದಸ್ಯರನ್ನು ಪುಟ 2 ಒಳಗೊಂಡ ನಮ್ಮ ಚುನಾಯಿತ ಪ್ರತಿನಿಧಿಗಳ ಸಭೆ ನಡೆಯಲಿದೆ ಎಂದರು. ಅಲ್ಲಿ ಅವರ ಅಭಿಪ್ರಾಯ ಪಡೆಯಲಿದ್ದಾರೆ. ಸಂಘಟನೆ ಪುಟ 2

## ಮುಡಾ ಕುರಿತು ಇಡಿಯವರ ಪತ್ರಿಕಾ ಪ್ರಕಟಣೆ ರಾಜಕೀಯ ಪ್ರೇರಿತ

**ಬೆಂಗಳೂರು :** ಮುಡಾ ಕುರಿತು ಇಡಿಯವರ ಪತ್ರಿಕಾ ಪ್ರಕಟಣೆ ರಾಜಕೀಯ ಪ್ರೇರಿತವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಅವರು ಇಂದು ವಿಧಾನಸೌಧದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ಮುಡಾ ಹಗರಣದ ಬಗ್ಗೆ ಇಡಿಯವರು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಬಗ್ಗೆ ಪ್ರತಿಕ್ರಿಯೆ ವ್ಯಕ್ತಪಡಿಸುತ್ತಾ, ಇಡಿಯವರ ಪತ್ರಿಕಾ ಪ್ರಕಟಣೆಗೂ ನನಗೂ ಸಂಬಂಧವಿಲ್ಲ. ಬಿಜೆಪಿಯವರು ಈ ಪತ್ರಿಕಾ ಪ್ರಕಟಣೆಯನ್ನು ಅನಗತ್ಯವಾಗಿ ಇಡಿಯವರ ಮೂಲಕ ಬಿಡುಗಡೆ ಮಾಡಿಸಿದ್ದಾರೆ ಎಂದರು.

**ಹಣ ದುರುಪಯೋಗದ ಪ್ರಶ್ನೆ ಇಲ್ಲ:** ಮುಡಾ ಮತ್ತು ವಾಲ್ಮೀಕಿ ನಿಗಮದ ಹಗರಣದ ಪ್ರತಿಪಕ್ಷಗಳ ಆರೋಪ ಹಾಗೂ ರಾಜ್ಯದ ತೆರಿಗೆ ಹಣದಲ್ಲಿ ನಾಳಿನ ಸಮಾರಂಭ ನಡೆಸುತ್ತಿರುವ ಬಗ್ಗೆ ಆರೋಪಿಸುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಹಣ ದುರುಪಯೋಗ ಆಗಿರುವ ಪ್ರಶ್ನೆಯೇ ಇಲ್ಲ ಎಂದರು.

**ತಪ್ಪಿತಸ್ಥರ ವಿರುದ್ಧ ಕ್ರಮ:** ವಿಜಯಪುರದಲ್ಲಿ ಕಾರ್ಮಿಕರ ಮೇಲೆ ಹಲ್ಲೆ ನಡೆದಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು.

ಮೈಕ್ರೋ ಫೈನಾನ್ಸ್ ದಂಧೆ- ಕಾನೂನು ರೀತ್ಯ ಕ್ರಮ: ಮೈಸೂರು ಚಾಮರಾಜನಗರ ಜಿಲ್ಲೆಗಳ ಪುಟ 2

## ಹಾಡಹಗಲೇ ಕಾರು ಅಡ್ಡಗಟ್ಟಿ ದರೋಡೆ

**ಮೈಸೂರು:** ಕಳೆದ ಮೂರ್ನಾಲ್ಕು ದಿನಗಳಿಂದೀಚೆಗೆ ಬೀದರ್ ಮತ್ತು ಮಂಗಳೂರಿನಲ್ಲಿ ನಡೆದ ದರೋಡೆ ಪ್ರಕರಣ ಮಾಸುವ ಮುನ್ನವೇ ಇದೀಗ ಮೈಸೂರಿನಲ್ಲೂ ಹಾಡಹಗಲೇ ದುಷ್ಕರ್ಮಿಗಳು ದರೋಡೆ ನಡೆಸಿದ್ದಾರೆ. ಹೌದು, ರಾಜ್ಯದಲ್ಲಿ ಮತ್ತೊಂದು ಭೀಕರ ದರೋಡೆ ನಡೆದಿದ್ದು, ಮೈಸೂರು ಜಿಲ್ಲೆಯ ಜಯಪುರ ಹೋಬಳಿ ಹಾರೋಹಳ್ಳಿ ಬಳಿ ಮುಸುಕುದಾರಿಗಳು ಹಾಡು ಹಗಲೇ ಕಾರನ್ನು ಅಡ್ಡಗಟ್ಟಿ ಕಾರನ್ನೆ ಕದ್ದೊಯ್ದಿರುವ ಘಟನೆ ನಡೆದಿದೆ. ಪುಟ 2

## ಇಂದಿನಿಂದ ಮದ್ಯ ದರ ದುಬಾರಿ

**ಬೆಂಗಳೂರು:** ಮದ್ಯಪ್ರಿಯರಿಗೆ ಬಿಗ್ ಶಾಕ್. ಬಜೆಟ್‌ಗೆ ಮೊದಲೇ ಮದ್ಯದ ದರ ಏರಿಕೆಯಾಗಿದೆ. 10 ರೂಪಾಯಿಯಿಂದ 45 ರೂಪಾಯಿ ವರೆಗೂ ಬೆಲೆ ಏರಿಕೆಯಾಗಿದ್ದು ಇಂದಿನಿಂದಲೇ ಪರಿಷ್ಕೃತ ದರ ಜಾರಿಯಾಗಿದೆ. ಸಾಧಾರಣವಾಗಿ ಬಜೆಟ್‌ನಲ್ಲಿ ಮದ್ಯದ ಮೇಲೆ ಅಬಕಾರಿ ತೆರಿಗೆ ಹಾಕಲಾಗುತ್ತದೆ. ಆದರೆ ಈ ಬಾರಿ ಬಜೆಟ್ ಮಂಡನೆಯಾಗುವ ಮೊದಲೇ ದರ ಏರಿಕೆಯಾಗಿದೆ. ಪುಟ 2

## ಬಸ್ ಪಲ್ಟಿ: ಮೂವತ್ತು ಪ್ರಯಾಣಿಕರಿಗೆ ಗಾಯ

**ಮಂಡ್ಯ:** ಕೆಎಸ್‌ಆರ್‌ಟಿಸಿ ಬಸ್ ಪಲ್ಟಿಯಾಗಿ 30 ಪ್ರಯಾಣಿಕರು ಗಾಯಗೊಂಡಿರುವ ಘಟನೆ ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕಿನ ರುದ್ರಾಕ್ಷಿಪುರ ಗ್ರಾಮದಲ್ಲಿ ನಡೆದಿದೆ. ಕೊಳ್ಳೇಗಾಲದಿಂದ ಬೆಂಗಳೂರಿಗೆ ತೆರಳುತ್ತಿದ್ದ ಕೆಎಸ್ ಆರ್ ಟಿಸಿ ಬಸ್ ರುದ್ರಾಕ್ಷಿಪುರದ ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್ ದಾಟಿ ಪುಟ 2

## ಗೋವುಗಳ ಮೇಲೆ ದುಷ್ಕೃತ್ಯ ಕಡಿವಾಣಕ್ಕೆ ಆಗ್ರಹ

**ಬೆಂಗಳೂರು:** ರಾಜ್ಯದಲ್ಲಿ ಗೋವುಗಳ ಮೇಲೆ ನಡೆಯುತ್ತಿರುವ ದಾಳಿಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಈ ದುಷ್ಕೃತ್ಯಗಳಿಗೆ ಕಡಿವಾಣ ಹಾಕಬೇಕು. ಇಲ್ಲದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸುವ ಎಚ್ಚರಿಕೆಯನ್ನು ವಿಪಕ್ಷ ನಾಯಕ ಆರ್. ಅಶೋಕ್ ನೀಡಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ತುಷ್ಟೀಕರಣ, ಅರಾಜಕತೆಯಿಂದ ನಿಸ್ತೇಜವಾಗಿರುವ ರಾಜ್ಯ ಸರ್ಕಾರ ಬಲಹೀನತೆಯನ್ನೆ ಬಂಡವಾಳವಾಗಿಸಿಕೊಂಡಿರುವ ಮತಾಂಧ ಶಕ್ತಿಗಳು ಗೋವುಗಳ ಮೇಲೆ ಪ್ರಹಾರ ಮಾಡುವ ಮೂಲಕ ಹಿಂದೂಗಳಿಗೆ ಸವಾಲು ಹಾಕುತ್ತಿವೆ. ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿ ಪುಟ 2

# ಗೋಹಿಂಸೆ, ಗೋಹತ್ಯೆ ಪ್ರಕರಣಗಳ ತನಿಖೆಗೆ ಆದೇಶ

**ಬೆಂಗಳೂರು:** ರಾಜ್ಯದಲ್ಲಿ ನಡೆಯುತ್ತಿರುವ ಸರಣಿ ಗೋಹತ್ಯೆಗಳ ಹಿಂದೆ ಬೇರೆ ರೀತಿಯ ಪ್ರಚೋದನೆ ಇರುವುದನ್ನು ತನಿಖೆ ನಡೆಸಲು ಪೊಲೀಸರಿಗೆ ಆದೇಶಿಸಲಾಗಿದೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ನಡೆಯುತ್ತಿರುವ ಗೋಹತ್ಯೆ ಪ್ರಕರಣಗಳಿಗೆ ಪರಿಹಾರ ಕಂಡುಕೊಳ್ಳುವ ಅಗತ್ಯವಿದೆ. ಈ ಘಟನೆಗಳನ್ನು ಗಂಭೀರವಾಗಿ ತೆಗೆದುಕೊಳ್ಳುವಂತೆ ಇಂದು



ಬೆಳಿಗ್ಗೆ ಪೊಲೀಸರಿಗೆ ಮತ್ತೊಮ್ಮೆ ಸೂಚನೆ ನೀಡಿದ್ದೇನೆ.

ಈ ರೀತಿಯ ಮನಸ್ಥಿತಿ ಇರುವವರನ್ನು ಮೊದಲು ಗುರುತಿಸಬೇಕು. ಕೃತ್ಯದ ಹಿಂದೆ ಬೇರೆ ಯಾರಾದ್ದಾದರೂ ಪ್ರಚೋದನೆ ಇದೆಯೇ?, ವೈಯಕ್ತಿಕವಾಗಿ ಕೃತ್ಯ ಎಸಗುತ್ತಿದ್ದಾರೆಯೇ ಅಥವಾ ಸಂಘಟನೆಗಳಿವೆಯೇ ಎಂಬೆಲ್ಲಾ ವಿಚಾರಗಳನ್ನು ತನಿಖೆ ನಡೆಸುವಂತೆ ಪೊಲೀಸರಿಗೆ ಸೂಚನೆ ನೀಡಿದ್ದೇನೆ ಎಂದರು.

ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹವನ್ನು ವಿಭಾಗಿಸುವ ಯಾವುದೇ ಪ್ರಸ್ತಾವನೆಗಳು ಸದ್ಯಕ್ಕೆ ಸರ್ಕಾರದ ಮುಂದಿಲ್ಲ. ಆದರೆ ರಾಜ್ಯದ ಎಲ್ಲಾ ಜೈಲುಗಳಲ್ಲಿ ನಡೆಯುತ್ತಿರುವ ನಿಯಮ ಬಾಹಿರ ಚಟುವಟಿಕೆಗಳನ್ನು ಹತ್ತಿಕ್ಕಲು ಕಠಿಣ ಕ್ರಮ ಜರುಗಿಸಲಾಗುವುದು.

ಬಹಳ ವರ್ಷಗಳಿಂದಲೂ ಬಂಧೀಖಾನೆ ಇಲಾಖೆಗೆ ನೇಮಕಾತಿಗಳು ನಡೆದಿಲ್ಲ. ಹೀಗಾಗಿ ಮುಂದಿನ ದಿನಗಳಲ್ಲಿ ಸಿಬ್ಬಂದಿಗಳ ನೇಮಕಾತಿಗೆ ಅಗತ್ಯ ಪ್ರಸ್ತಾವನೆ ಸಲ್ಲಿಸಲಾಗಿದೆ. ನೇಮಕಾತಿ ಬಳಿಕ ವ್ಯವಸ್ಥೆ ಸುಧಾರಣೆಯಾಗಲಿದೆ ಎಂದರು.ಪುಟ 2

## ಮೆಟ್ರೋಗೆ ಹಾರಿ ಆತಹತ್ಯೆಗೆ ಯತ್ನಿಸಿದ ಏರ್‌ಫೋರ್ಸ್ ಮಾಜಿ ಅಧಿಕಾರಿ

**ಬೆಂಗಳೂರು:** ಏರ್‌ಫೋರ್ಸ್ ಮಾಜಿ ಅಧಿಕಾರಿಯೊಬ್ಬರು ಮೆಟ್ರೋ ಹಳಿಗೆ ಹಾರಿ ಆತಹತ್ಯೆ ಮಾಡಿಕೊಳ್ಳಲು ಯತ್ನಿಸಿದ ಘಟನೆ ಇಂದು ಬೆಳಿಗ್ಗೆ 10.30 ರ ಸಮಯದಲ್ಲಿ ಜಾಲಹಳ್ಳಿ ಮೆಟ್ರೋ ನಿಲ್ದಾಣದಲ್ಲಿ ಸಂಭವಿಸಿದೆ.

ಆತಹತ್ಯೆಗೆ ಯತ್ನಿಸಿದ ವ್ಯಕ್ತಿಯನ್ನು ಬಿಹಾರ ಮೂಲದ ಅನಿಲ್ ಕುಮಾರ್ ಪಾಂಡೆ (49) ಎಂದು ಗುರುತಿಸಲಾಗಿದೆ. ಮೆಟ್ರೋ ರೈಲು ಚಾಲಕನ ಸಮಯ ಪ್ರಜ್ಞೆಯಿಂದ ಪಾಂಡೆ ಅವರ ಪ್ರಾಣ ಉಳಿದಿದ್ದು, ಅವರನ್ನು ಪೊಲೀಸರ ವಶಕ್ಕೆ ಒಪ್ಪಿಸಲಾಗಿದೆ.

ಮೆಟ್ರೋ ಟ್ರೈನ್ ನಿಲ್ದಾಣಕ್ಕೆ ಆಗಮಿಸುತ್ತಿದ್ದಂತೆ ಏರ್‌ಫೋರ್ಸ್ ಮಾಜಿ ಅಧಿಕಾರಿ ಏಕಾಏಕಿ ಹಳಿಗೆ ಹಾರಿದರು. ತಕ್ಷಣ ಚಾಲಕ ರೈಲು ನಿಲ್ಲಿಸಿದ ಪರಿಣಾಮ ಅವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಹಳಿಗೆ ಹಾರಿದ ಅವರನ್ನು ತಕ್ಷಣ ರಕ್ಷಿಸಿದ ಸಿಬ್ಬಂದಿಗಳು ಪೊಲೀಸರ ವಶಕ್ಕೆ ಒಪ್ಪಿಸಿದ್ದಾರೆ. ಈ ಘಟನೆಯಲ್ಲಿ ಪಾಂಡೆ ಅವರಿಗೆ ಯಾವುದೇ ಗಾಯಗಳಾಗಿಲ್ಲ ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಘಟನೆಯಿಂದಾಗಿ ಸುಮಾರು 15 ನಿಮಿಷಗಳ ಕಾಲ ಮೆಟ್ರೊ ಸಂಚಾರದಲ್ಲಿ ವ್ಯತ್ಯಯವಾಗಿತ್ತು.ಇತ್ತೀಚೆಗೆ ಮೆಟ್ರೋ ಹಳಿಗೆ ಹಾರಿ ಆತಹತ್ಯೆ ಮಾಡಿಕೊಳ್ಳಲು ಯತ್ನಿಸುತ್ತಿರುವ ಘಟನೆಗಳು ಹೆಚ್ಚಾಗುತ್ತಿರುವುದು ಆತಂಕಕ್ಕೆ ಕಾರಣವಾಗಿದೆ.

## ರಾಹುಲ್ ಗಾಂಧಿ ವಿರುದ್ಧದ ವಿಚಾರಣೆಗೆ ಸುಪ್ರೀಂ ತಡೆ



**ನವದೆಹಲಿ:** ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ದಾಖಲಾದ ಕ್ರಿಮಿನಲ್ ಮಾನನಷ್ಟ ಮೊಕದ್ದಮೆಗೆ ಸಂಬಂಧಿಸಿದಂತೆ ವಿಚಾರಣಾ ನ್ಯಾಯಾಲಯದಲ್ಲಿನ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಸೋಮವಾರ ತಡೆಹಿಡಿದಿದೆ.

ಬಿಜೆಪಿ ಸದಸ್ಯರು ಸುಳ್ಳುಗಾರರು ಮತ್ತು ಅವರು ಅಧಿಕಾರದ ಅಮಲಿನಲ್ಲಿದ್ದಾರೆ ಎಂಬ ಆರೋಪ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು 'ಕೊಲೆ ಆರೋಪಿ' ಎಂದು ಕರೆದಿದ್ದಾರೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ರಾಹುಲ್ ಗಾಂಧಿ ವಿರುದ್ಧ ಕ್ರಿಮಿನಲ್ ಮಾನನಷ್ಟ ಮೊಕದ್ದಮೆ ದಾಖಲಾಗಿದೆ. 2018 ರಲ್ಲಿ ಬಿಜೆಪಿ ಕಾರ್ಯಕರ್ತ ನವೀನ್ ಝಾ ಎಂಬುವರು ತಮ್ಮ ವಿರುದ್ಧ ದಾಖಲಿಸಿದ್ದ ಮಾನನಷ್ಟ ಮೊಕದ್ದಮೆಯನ್ನು ರದ್ದುಗೊಳಿಸುವಂತೆ ಕೋರಿ ರಾಹುಲ್ ಗಾಂಧಿ ಜಾರ್ಖಂಡ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಆದರೆ ಜಾರ್ಖಂಡ್ ಹೈಕೋರ್ಟ್ ಅವರ ಅರ್ಜಿಯನ್ನು ತಿರಸ್ಕರಿಸಿತ್ತು. ಪುಟ 2

## ಹೈಕಮಾಂಡ್ ಸೂಚನೆ ಎಲ್ಲರೂ ಪಾಲಿಸಬೇಕು

**ಬೆಳಗಾವಿ:** ಹೈಕಮಾಂಡ್ ಸೂಚನೆಯನ್ನು ಎಲ್ಲ ನಾಯಕರು ಪಾಲಿಸಬೇಕು. ಅನಗತ್ಯ ಹೇಳಿಕೆಗಳನ್ನು ಕೊಡದೆ ಪಕ್ಷದ ಸೂಚನೆಯನ್ನು ಪಾಲಿಸಬೇಕಾಗುತ್ತದೆ ಎಂದು ಆಹಾರ ಸಚಿವ ಕೆ.ಎಚ್. ಮುನಿಯಪ್ಪ ಹೇಳಿದರು.

ಬೆಳಗಾವಿಯ ಪುರಾತನ ಕಪಿಲೇಶ್ವರ ಸ್ವಾಮಿಯ ದೇವಸ್ಥಾನಕ್ಕೆ ಭೇಟಿ ನೀಡಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಿದ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿ ಕೆಲಸ ಮಾಡುತ್ತಿದ್ದಾರೆ. ಯಾವುದೇ ಹುದ್ದೆ ಖಾಲಿ ಇಲ್ಲ. ಈಗ ಈ ಬಗ್ಗೆ ಮಾತನಾಡುವುದು ಅಪ್ರಸ್ತುತ ಎಂದರು.



ದಲಿತ ಮುಖ್ಯಮಂತ್ರಿ ವಿಚಾರ ಯಾವುದನ್ನು ಮಾತನಾಡುವುದು ಸರಿಯಲ್ಲ. ಹೈಕಮಾಂಡ್ ಸೂಚನೆಯನ್ನು ಎಲ್ಲ ನಾಯಕರು ಪಾಲಿಸಬೇಕು ಎಂದು ಅವರು ಹೇಳಿದರು. ನಮ್ಮ ಸರ್ಕಾರ ಜನಪರವಾಗಿದ್ದು,ಪುಟ 2

ಮುಸ್ಸಂಜೆ

ಸೋಮವಾರ
20-01-2025

ಮೊದಲ ಪುಟದಿಂದ

## ನಾಳೆ ರಾಜ್ಯ ಕೋರ್ ಕಮಿಟಿ ಸಭೆ

ಸಂಬಂಧ ಚರ್ಚಿಸಲಿದ್ದಾರೆ. 4 ಗಂಟೆಗೆ ರಾಜ್ಯದಲ್ಲಿ ನಡೆಯುತ್ತಿರುವ ಸಂಘಟನಾ ಪರ್ವದ ಕುರಿತು ಚರ್ಚೆ ನಡೆಸಲಿದ್ದಾರೆ. ಮಂಡಲ ಅಧ್ಯಕ್ಷರ ಚುನಾವಣೆ ನಡೆದಿದೆ. ಜಿಲ್ಲಾಧ್ಯಕ್ಷರ ನಿಯೋಜನೆ ಪ್ರಕ್ರಿಯೆ ನಡೆಯುತ್ತಿದೆ. ರಾಜ್ಯಾಧ್ಯಕ್ಷರ ಚುನಾವಣೆ ಬಗ್ಗೆ ಕೂಡ ಚರ್ಚೆ ನಡೆಯಲಿದೆ ಎಂದು ವಿವರಿಸಿದರು. ಪಕ್ಷದ ಚುನಾವಣಾ ಅಧಿಕಾರಿಗಳು, ಸಹ ಅಧಿಕಾರಿಗಳು, 13 ಜನ ಮೇಲ್ವಿಚಾರಕರ ಸಭೆಯೂ ನಡೆಯಲಿದೆ ಎಂದು ತಿಳಿಸಿದರು. ಈ 3 ಸಭೆಗಳಲ್ಲಿ ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು ಭಾಗವಸಲಿದ್ದಾರೆ. ರಾಜ್ಯದ ಪರಿಸ್ಥಿತಿ, ಸಂಘಟನಾ ವಿಚಾರವಾಗಿ, ರಾಜ್ಯದ ಅಧ್ಯಕ್ಷರ ವಿಚಾರವಾಗಿ ಎಲ್ಲವೂ ಕೂಡ ಸಮಗ್ರವಾಗಿ ನಾಳೆ ಚರ್ಚೆ ಆಗಲಿದೆ ಎಂದು ಪ್ರಕಟಿಸಿದರು.

## ರಾಜಕೀಯ ಪ್ರೇರಿತ

ಗ್ರಾಮೀಣ ಭಾಗದಲ್ಲಿ ಮೈಕ್ರೋ ಫೈನಾನ್ಸ್ ದಂಧೆ ಹೆಚ್ಚಿದ್ದು, ಜನರಿಗೆ ಕಿರುಕುಳ ನೀಡುತ್ತಿರುವ ಬಗ್ಗೆ, ಜನರಿಗೆ ಕಿರುಕುಳ ನೀಡುವ ಮೈಕ್ರೋ ಫೈನಾನ್ಸ್ ದಂಧೆ ನಡೆಸುತ್ತಿರುವ ಸಂಸ್ಥೆಯ ವಿರುದ್ಧ ಕಾನೂನು ರೀತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು. 1924ರ ಬೆಳಗಾವಿ ಕಾಂಗ್ರೆಸ್ ಸಮಾವೇಶದ ಶತಮಾನೋತ್ಸವ ಸ್ಮರಣಾರ್ಥವಾಗಿ ಮಹಾತ್ಮಾ ಗಾಂಧೀಜಿ ಪ್ರತಿಮೆ ಅನಾವರಣ ನಂತರ ಸಾರ್ವಜನಿಕ ಸಭೆ ನಡೆಸಲಾಗುವುದು ಎಂದರು.

## ಪ್ರಕರಣಗಳ ತನಿಖೆಗೆ ಆದೇಶ

ಬೀದರ್‌ನಲ್ಲಿ ಎಟಿಎಂ ವಾಹನದ ಮೇಲೆ ದಾಳಿ ನಡೆಸಿ ಒಬ್ಬರನ್ನು ಹತ್ಯೆಗೈದು, ಮತ್ತೊಬ್ಬರನ್ನು ಗಾಯಗೊಳಿಸಿ 83 ಲಕ್ಷ ದರೋಡೆ ಮಾಡಿದ ಪ್ರಕರಣದಲ್ಲಿ ಮಾಹಿತಿಗಳನ್ನು ಕಲೆಹಾಕಲಾಗಿದೆ. ಶೀಘ್ರವಾಗಿ ಆರೋಪಿಗಳನ್ನು ಬಂಧಿಸಲಾಗುವುದು. ಮಂಗಳೂರಿನ ಬ್ಯಾಂಕ್ ದರೋಡೆಯಲ್ಲಿ 2 ಕಾರುಗಳನ್ನು ಬಳಸಿರುವುದು ಸೇರಿದಂತೆ ಇತರ ಮಾಹಿತಿಗಳು ದೊರೆತಿವೆ. ಈ ಎರಡೂ ಘಟನೆಗಳಿಗೆ ತಂಡವನ್ನು ರಚನೆ ಮಾಡಿ ಆರೋಪಿಗಳ ಹುಡುಕಾಟದಲ್ಲಿ ತೊಡಗಿದ್ದಾರೆ.

ಆರೋಪಿಗಳು ಬೇರೆ ರಾಜ್ಯದವರೋ ಅಥವಾ ಎಲ್ಲಿಯವರು ಎಂಬುದು ಸೇರಿದಂತೆ ಹಲವಾರು ಮಾಹಿತಿಗಳು ನಮ ಬಳಿ ಇವೆ. ಆದರೆ ಸದ್ಯಕ್ಕೆ ಯಾವುದನ್ನೂ ಬಹಿರಂಗಪಡಿಸಲು ಸಾಧ್ಯವಿಲ್ಲ. ಬೀದರ್‌ನ ಘಟನೆಯಲ್ಲಿ ಶಸ್ತ್ರ ಸಜ್ಜಿತ ಸಿಬ್ಬಂದಿ ಇಲ್ಲದೇ ಇರುವುದನ್ನು ನೋಡಿಕೊಂಡು ಕೃತ್ಯ ಎಸಗಲಾಗಿದೆ. ಮಂಗಳೂರಿನ ಘಟನೆಯಲ್ಲೂ ಭದ್ರತಾ ಸಿಬ್ಬಂದಿ ಇಲ್ಲದ ಸಂದರ್ಭವನ್ನು ಉಪಯೋಗಿಸಿಕೊಳ್ಳಲಾಗಿದೆ ಎಂದು ಹೇಳಿದರು.

ಈ ರೀತಿಯ ಲೋಪಗಳಾಗಬಾರದು. ಸರ್ಕಾರ ಈಗಾಗಲೇ ಬ್ಯಾಂಕ್‌ಗಳಿಗೆ ಭದ್ರತೆಗೆ ಸಂಬಂಧಪಟ್ಟಂತೆ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಸ್ಪಷ್ಟ ಸೂಚನೆ ನೀಡಿದೆ. ಬ್ಯಾಂಕ್‌ನವರು ಇದನ್ನು ಗಂಭೀರವಾಗಿ ತೆಗೆದುಕೊಂಡು ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು ಎಂದು ಸಲಹೆ ನೀಡಿದರು. ಕಿರು ಸಾಲ ನೀಡಿ ಅದರ ವಸೂಲಿಗೆ ಕಿರುಕುಳ ನೀಡುತ್ತಿರುವವರಿಗೆ ಕಡಿವಾಣ ಹಾಕಲು ಪ್ರತ್ಯೇಕ ಕಾಯ್ದೆ ತರುವುದು ಹಣಕಾಸು ಇಲಾಖೆಯ ಜವಾಬ್ದಾರಿ. ದೂರುಗಳು ಬಂದರೆ ಕ್ರಮ ಕೈಗೊಳ್ಳುವುದಷ್ಟೇ ಪೊಲೀಸ್ ಇಲಾಖೆಯ ಕೆಲಸ ಎಂದರು.

ದರೋಡೆಕೋರರ ಬಗ್ಗೆ ನಿಖರವಾದ ಮಾಹಿತಿ ಲಭ್ಯವಾಗಿದೆ, ಶೀಘ್ರದಲ್ಲಿ ಬಂಧಿಸಲಿದ್ದೇವೆ ಮಂಗಳೂರು ಕೋಟೆಕಾರ್ ಬ್ಯಾಂಕ್ ದರೋಡೆ ಮತ್ತು ಬೀದರ್‌ನಲ್ಲಿ ಎಟಿಎಂಗೆ ಕ್ಯಾಶ್ ತುಂಬುವ ವ್ಯಾನ್ ದರೋಡೆ ಮತ್ತು ಇಬ್ಬರು ಗಾರ್ಡ್‌ಗಳ ಕೊಲೆಗೆ ಸಂಬಂಧಿಸಿದಂತೆ ಖಚಿತವಾದ ಮಾಹಿತಿ ಲಭ್ಯವಾಗಿದೆ ಎಂದು ಅವರು ತಿಳಿಸಿದರು. ಆರೋಪಿಗಳ ಬಗೆಗಿನ ಮಾಹಿತಿಯನ್ನು ಮಾಧ್ಯಮಗಳ ಜೊತೆ ಶೇರ್ ಮಾಡಲಾಗಲ್ಲ, ಆದಷ್ಟು ಬೇಗ ಅಪರಾಧಿಗಳನ್ನು ವಶಕ್ಕೆ ಪಡೆಯುತ್ತೇವೆ ಎಂದು ಗೃಹ ಸಚಿವ ಜಿ ಪರಮೇಶ್ವರ್ ಹೇಳಿದರು. ದರೋಡೆಕೋರರು ಬೇರೆ ರಾಜ್ಯದವರು ಎಂಬ ಪೂರ್ವಭಾವಿ ಮಾಹಿತಿ ಇದೆ, ಅಪರಾಧಿಗಳನ್ನು ಬಂಧಿಸಲು ಎರಡೂ ತಂಡಗಳ ಹಿಂದೆ 4–6 ಪೊಲೀಸ್ ತಂಡಗಳು ತೆರಳಿವೆ ಎಂದು ಹೇಳಿದರು.

## ಕಡಿವಾಣಕ್ಕೆ ಆಗ್ರಹ

ಇದಕ್ಕೆಲ್ಲಾ ಕಡಿವಾಣ ಹಾಕಬೇಕು ಎಂದು ಅವರು ಒತ್ತಾಯಿಸಿದ್ದಾರೆ. ರಾಜ್ಯದಲ್ಲಿ ಗೋವುಗಳ ಮೇಲೆ ಪದೇ ಪದೇ ನಡೆಯುತ್ತಿರುವ ಈ ದಾಳಿಗಳನ್ನು ಗಮನಿಸಿದರೆ ಇದರ ಹಿಂದೆ ದೊಡ್ಡ ಜಾಲವೇ ಅಡಗಿದಂತಿದೆ. ಮತಾಂಧ ಶಕ್ತಿಗಳು, ಮೂಲಭೂತವಾದಿ ಶಕ್ತಿಗಳ ದೊಡ್ಡ ಜಿಹಾದಿ ಷಡ್ಯಂತ್ರವೇ ಇದ್ದಂತಿದೆ ಎಂದು ಅವರು ಟ್ವೀಟ್‌ನಲ್ಲಿ ಹೇಳಿದ್ದಾರೆ.
ಚಾಮರಾಜಪೇಟೆಯಲ್ಲಿ ಗೋಮಾತೆಯ ಕೆಚ್ಚಲು ಕೊಯ್ದು ಅಮಾನುಷ ಘಟನೆ ಮಾಸುವ ಮುನ್ನವೇ ಹೊನ್ನಾವರ ತಾಲ್ಲೂಕಿನ ಸಾಲ್ಕೊಡ ಗ್ರಾಮದಲ್ಲಿ ಗಬ್ಬದ ಆಕಳು ಕಡಿದು ಗರ್ಭದಿಂದ ಕರು ತೆಗೆದು ಬಿಸಾಡಿ ಮಾಂಸ ಹೊತ್ತೊಯ್ಯುವ ಮೂಲಕ ಕಿಡಿಗೇಡಿಗಳು ಮತ್ತೊಮ್ಮೆ ಕ್ರೌರ್ಯ ಮೆರೆದಿದ್ದಾರೆ. ಇದನ್ನು ಸಹಿಸಲ್ಲ. ಇದಕ್ಕೆಲ್ಲ ಕಡಿವಾಣ ಹಾಕಬೇಕು. ಇಲ್ಲದಿದ್ದರೆ ಹೋರಾಟ ಮಾಡುತ್ತೇವೆ ಎಂದು ಅವರು ಹೇಳಿದ್ದಾರೆ.
ರಾಜ್ಯ ಸರ್ಕಾರ ಪರಿಶಿಷ್ಟರು, ಹಿಂದುಳಿದ ಸಮುದಾಯಗಳ ಕಲ್ಯಾಣಕ್ಕೆ ಸ್ಥಾಪಿಸಲಾಗಿರುವ ಹಲವು ನಿಗಮಗಳಿಗೆ ಬಿಡಿಗಾಸು ಅನುದಾನವನ್ನು ಬಿಡುಗಡೆ ಮಾಡಿಲ್ಲ. ಅಹಿಂದ ಹೆಸರಿನಲ್ಲಿ ಜನರಿಗೆ ವಿಶ್ವಾಸ ದ್ರೋಹ ಮಾಡಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಪಕ್ಷಕ್ಕೆ ಜನ ಮುಂದಿನ ದಿನಗಳಲ್ಲಿ ಪಾಠ ಕಲಿಸಲಿದ್ದಾರೆ ಎಂದು ಅವರು ಮತ್ತೊಂದು ಪ್ರತ್ಯೇಕ ಟ್ವೀಟ್‌ನಲ್ಲಿ ಹೇಳಿದ್ದಾರೆ.
ನಿಗಮಗಳಿಗೆ ಅನುದಾನ ಬಿಡುಗಡೆ ಮಾಡದೆ ಇರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧವೂ ಕಿಡಿಕಾರಿರುವ ಅವರು, ಮುಖ್ಯಮಂತ್ರಿಗಳೇ ಇದೇನಾ ನಿಮ್ಮ ಸಾಮಾಜಿಕ ನ್ಯಾಯ. ಬಡವರು, ಪರಿಶಿಷ್ಟರು, ಹಿಂದುಳಿದವರ ಬಗ್ಗೆ ಇದೇನಾ ತಮಗಿರುವ ಕಾಳಜಿ, ಇದೇನಾ ಗಾಂಧಿ ಭಾರತ ನಿರ್ಮಿಸುವ ಪರಿ ಎಂದು ಪ್ರಶ್ನಿಸಿದ್ದಾರೆ.

## ಅಡ್ಡಗಟ್ಟಿ ದರೋಡೆ

ಕೇರಳ ಉದ್ಯಮಿ ಸೂಫಿ ಎಂಬುವವರ ಮೇಲೆ ದಾಳಿ ನಡೆಸಿರುವ ದುಷ್ಕರ್ಮಿಗಳು ಕಾರನ್ನೇ ತೆಗೆದುಕೊಂಡು ಹೋಗಿದ್ದಾರೆ ಎನ್ನಲಾಗಿದೆ. ದರೋಡೆ ನಡೆಸುತ್ತಿರುವ ದೃಶ್ಯ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ
ಘಟನಾ ಸ್ಥಳಕ್ಕೆ ಡಿವೈಎಸ್ ಪಿ ರಘು ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಜಯಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

## ಇಂದಿನಿಂದ ಮದ್ಯ ದರ ದುಬಾರಿ

ಕಳೆದ 6 ತಿಂಗಳ ಹಿಂದೆ ಆಮದು ವಸ್ತುಗಳ ಮೇಲೆ ಬೆಲೆ ಏರಿಕೆ ಮಾಡಲಾಗಿತ್ತು. ಇದೀಗ ಸುಂಕವನ್ನು ಸರ್ಕಾರ ಹೆಚ್ಚಳ ಮಾಡಿದೆ. ದುಬಾರಿ ಬೆಲೆಯ ಬಿಯರ್ ದರ ಏರಿಕೆಯಾಗಿಲ್ಲ. ಬದಲಾಗಿ 300 ರೂ. ಒಳಗಡೆ ಇರುವ ಮದ್ಯದ ದರವನ್ನು ಅಬಕಾರಿ ಇಲಾಖೆ ಏರಿಸಿದೆ. ಪುಟ 2
**ಬೀಯರ್ ದರ ಎಷ್ಟು ಏರಿಕೆ?:** ಲೆಜೆಂಡ್ 145(100),ಪವರ್ ಕೂಲ್ –155(130),ಬ್ಲ್ಯಾಕ್ ಫೋರ್ಟ್ –160(145),ಹಂಟರ್ –190 (180),ವುಡ್‌ಪೆಕರ್ ಕ್ರೆಸ್ಟ್

## ಪ್ರಯಾಣಿಕರಿಗೆ ಗಾಯ

ಪಲ್ಟಿಯಾಗಿದೆ. ಈ ವೇಳೆ ಬಸ್ ನಲ್ಲಿದ್ದ ಸುಮಾರು 30 ಪ್ರಯಾಣಿಕರಿಗೆ ಗಾಯಗಳಾಗಿದ್ದು ಗಾಯಾಳುಗಳನ್ನ ಮದ್ದೂರು ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಕುರಿತು ಮದ್ದೂರಿ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಎಲ್ಲರೂ ಪಾಲಿಸಬೇಕು

ನಾವು ಕೊಟ್ಟಿರುವ ಗ್ಯಾರಂಟಿ ಯೋಜನೆಗಳನ್ನು ಪ್ರಧಾನಿ ಮೋದಿಯವರು ಬೇರೆ ಬೇರೆ ರಾಜ್ಯಗಳಲ್ಲಿ ಜಾರಿಗೊಳಿಸುತ್ತಿದ್ದಾರೆ. ಇದನ್ನು ನೋಡಿದರೆ ನಮ್ಮ ಗ್ಯಾರಂಟಿಗಳ ಲಾಭ ಜನರಿಗೆ ತಲುಪಿರುವುದು ಸ್ಪಷ್ಟ ಎಂದರು. ಬೆಳಗಾವಿಯಲ್ಲಿ ನಡೆಯಲಿರುವ ಗಾಂಧಿ ಭಾರತ ಸಮಾವೇಶಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಭಾಗಿಯಾಗಲಿದ್ದಾರೆ. ಸಮಾವೇಶಕ್ಕೆ ಬರುವ ಎಲ್ಲರಿಗೂ ಕ್ಯಾಟಲ್ ಕ್ರೀಡಾಂಗಣದಲ್ಲಿ ಊಟದ ವ್ಯವಸ್ಥೆಯನ್ನು ಮಾಡಲಾಗಿದೆ ಎಂದು ಅವರು ಹೇಳಿದರು.

# ವೇಮನರು ಅಪರೂಪದ ಸಮಾಜ ಸುಧಾರಕ: ಶಿವರಾಜ್ ತಂಗಡಗಿ

**ಬೆಂಗಳೂರು:** ಜನಸಾಮಾನ್ಯರ ಕವಿಯಾದ ವೇಮನರು ಸಾಮಾಜಿಕ ಪಿಡುಗುಗಳಾದ ಜಾತೀಯತೆ, ಅಂಧಶ್ರದ್ಧೆ, ಮೇಲು– ಕೀಲುಗಳನ್ನು ತಮ್ಮ ಕಾವ್ಯದ ಮೂಲಕ ಧಿಕ್ಕರಿಸಿದ ಒಬ್ಬ ಅಪರೂಪದ ಸಮಾಜ ಸುಧಾರಕ ಎಂದು ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ಎಸ್. ತಂಗಡಗಿ ಅವರು ಅಭಿಪ್ರಾಯಪಟ್ಟರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ರವೀಂದ್ರ ಕಲಾಕ್ಷೇತ್ರದಲ್ಲಿ ಶ್ರೀ ವೇಮನಾಂದ ಮಹಾಸ್ವಾಮೀಜಿ ಅವರ ದಿವ್ಯ ಸಾನಿಧ್ಯದಲ್ಲಿ ಭಾನುವಾರ ನಡೆದ ಶ್ರೀ ಮಹಾಯೋಗಿ ವೇಮನ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಕನ್ನಡದ ಸರ್ವಜ್ಞ ಯಾರಿಗೆ ತಾನೇ ತಿಳಿದಿಲ್ಲ, ಅಂತೆಯೇ ತಮಿಳಿನ ತಿರುವಳ್ಳವರ್ ಅವರನ್ನು ಅರಿಯದವರು ಯಾರಿದ್ದಾರೆ? ಇವರಿಬ್ಬರಂತೆಯೇ ಜನಸಾಮಾನ್ಯರ ಕವಿ ಎನಿಸಿದವರು ತೆಲುಗಿನ ವೇಮನರು. ಆಂಧ್ರಪ್ರದೇಶದ ಗುಂಟೂರು ಜಿಲ್ಲೆಯ ಕೊಂಡವೀಡು ಗ್ರಾಮದಲ್ಲಿ ಜನಿಸಿದ ವೇಮನರು ಆ ಪ್ರಾಂತ್ಯದ ಆಳರಸರ ಸುಕುಮಾರ. ಅಹಮಿಕೆಯನ್ನು ತಲೆಗೇರಿಸಿಕೊಳ್ಳದೆ, ತನ್ನ ಎಲ್ಲ ಸುಖ– ಸಂಪತ್ತನ್ನು ತ್ಯಜಿಸಿ ಸಮಾಜ ಸೇವೆಗೆ ಧಾವಿಸಿದ ಮಹಾನ್ ವ್ಯಕ್ತಿ ಎಂದು ಇತಿಹಾಸವನ್ನು ಮೆಲುಕು ಹಾಕಿದರು.

ಇಂತಹ ಜನಸಾಮಾನ್ಯರಂತೆ ಬಾಳಿದ ನಿಜವಾದ ಜನಪರ ಮತ್ತು ಶ್ರೇಷ್ಠ ವ್ಯಕ್ತಿಯ ಜಯಂತಿಯನ್ನು ನಾವು ಸರ್ಕಾರದ ವತಿಯಿಂದ ಆಚರಣೆ ಮಾಡುತ್ತಿರುವುದು




ನಮ್ಮ ಹೆಮ್ಮೆ ಎಂದರು.

ವೇಮನರು ತಮ್ಮ ಕಣ್ಣಿಗೆ ಕಂಡದ್ದನ್ನೆಲ್ಲಾ ಪದ್ಯಗಳನ್ನಾಗಿ ರಚಿಸಿ ಹಾಡುತ್ತಾ ಸಾಗಿ ಮಹಾ ದಾರ್ಶನಿಕರಾದರು. ಸಮಾಜದಲ್ಲಿನ ಅಂಕುಡೊಂಕುಗಳನ್ನು ಕಂಡು ಮರುಗುತ್ತಾ, ಅಲ್ಲಲ್ಲೇ ಮೊನಚು ಮಾತುಗಳಿಂದ ಅವುಗಳನ್ನು ತಿದ್ದುತ್ತಾ ತಮ್ಮ ಸಂದೇಶಗಳನ್ನು ಹೇಳುತ್ತಾ ನಿಂತಲ್ಲಿ ನಿಲ್ಲದೇ, ಪರ್ಯಾಟನೆ ಮಾಡುತ್ತಿದ್ದರು. ಇನ್ನು ತಮ್ಮ ಗುರುಗಳ ನೆನಪಿಗಾಗಿ ವಿಶ್ವದಾಭಿರಾಮ ಕೇಳು ವೇಮ ಎಂಬ ಅಂಕಿತದಲ್ಲೇ ಪದ್ಯರಚನೆ ಮಾಡಿದರು ಮಹಾನ್ ಪುರುಷರು ಎಂದು ತಿಳಿಸಿದರು.

ಬ್ರಿಟಿಷ್ ಅಧಿಕಾರಿ ಸಿ.ಪಿ.ಬ್ರೌನ್ ಅವರು ಕನ್ನಡದ ಕಿಟೆಲ್ ತೆಲುಗಿನ ವೇಮನ ಪದ್ಯಗಳನ್ನು ಇಂಗ್ಲಿಷ್ ಗೆ ಭಾಷಾಂತರಿಸಿ, ವೇಮನರನ್ನು ಜಗತ್ತಿಗೆ ಪರಿಚಯಿಸಿದರು. ಇವರ ಅನುವಾದಗಳ ಮೂಲಕ ವೇಮನ ಪದ್ಯಗಳು ಜಗತ್ತಿನಾದ್ಯಂತ ಪ್ರಖ್ಯಾತವಾದವು ಎಂದರು.

ನನಗೆ ಚಿಕ್ಕವಯಸ್ಸಿನಿಂದ ರೆಡ್ಡಿ ಸಮುದಾಯದ ಜತೆ ಆತ್ಮೀಯವಾದ ಒಡನಾಟವಿದೆ. ನನ್ನ ಕ್ಷೇತ್ರದಲ್ಲಿ ಹೆಚ್ಚಿನ ಸ್ನೇಹಿತರು ರೆಡ್ಡಿ ಸಮುದಾಯದವರಿದ್ದಾರೆ. ರೆಡ್ಡಿ ಎಂದರೇ ಹೆಚ್ಚು ಉದಾರತೆ ಇರುವ ಸಮುದಾಯ. ಕಷ್ಟ ಎಂದು ಹೇಳಿಕೊಂಡು ಯಾರಾದರೂ ರೆಡ್ಡಿ ಸಮುದಾಯದ ಬಳಿ ಹೋದರೆ ಅವರನ್ನು ಹಾಗೆಯೇ ಕಳಿಸುವುದಿಲ್ಲ ಆ ಸಮುದಾಯದ ಉದಾರತೆಯ ಬಗ್ಗೆ ಸಸಿವರು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಮುದಾಯಕ್ಕೆ ಉದಾರತೆ ಜತೆಗೆ ಎಲ್ಲರನ್ನು ಒಟ್ಟಿಗೆ ಕರೆದೊಯ್ಯುವ ಶಕ್ತಿ ಇದೆ ಎಂದರು.

ಮಹಾನ್ ಪುರುಷರ ಇತಿಹಾಸ ತಿಳಿಯಬೇಕಿದ್ದು, ಈ ಹಿನ್ನೆಲೆಯಲ್ಲಿ ಇಂತಹ ಜಯಂತಿ ಕಾರ್ಯಕ್ರಮವನ್ನು ಆಚರಣೆ ಮಾಡಲಾಗುತ್ತಿದೆ. ಜಯಂತಿ ಆಚರಣೆಯಿಂದ ಮಹಾನ್ ಪುರುಷರ ಇತಿಹಾಸವನ್ನು ಮೆಲುಕು ಹಾಕುವ ಕೆಲಸ ಆಗುತ್ತಿದೆ. ಈ ಮಹನೀಯರು ಯಾವುದೇ ಒಂದು ಸಮಾಜಕ್ಕೆ ಸೇರಿದವರಲ್ಲ. ಪ್ರತಿಯೊಂದು ಸಮುದಾಯಕ್ಕೆ ಸೇರಿದವರು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರಾಜ್ಯಸಭಾ ಮಾಜಿ ಸದಸ್ಯ ಶ್ರೀ ಕೆ.ಸಿ.ರಾಮಮೂರ್ತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕರಾದ ಶ್ರೀಮತಿ ಡಾ. ಧರಣಿ ದೇವಿ ಮಾಲಗತ್ತಿ, ಜಂಟಿ ನಿರ್ದೇಶಕ ಶ್ರೀ ಬಲವಂತರಾಯ ಪಾಟೀಲ್, ಸಮುದಾಯದ ಅಧ್ಯಕ್ಷ ಶ್ರೀ ಜಯರಾಮ ರೆಡ್ಡಿ, ಶ್ರೀ ಎನ್.ಶೇಖರ್ ರೆಡ್ಡಿ, ಶ್ರೀ ಕಂಚೀವರದಯ್ಯ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಅಸಮಾಧಾನ ಏನೇ ಇರಲಿ, ವರಿಷ್ಠರ ಗಮನಕ್ಕೆ ತನ್ನಿ, ಬಹಿರಂಗ ಹೇಳಿಕೆ ಬೇಡ: ಪ್ರಹ್ಲಾದ್ ಜೋಶಿ

**ಹುಬ್ಬಳ್ಳಿ:** ಬಿಜೆಪಿ ರಾಜ್ಯಾಧ್ಯಕ್ಷರ ಬದಲಾವಣೆ ಬಗ್ಗೆ ನನಗೆ ಗೊತ್ತಿಲ್ಲ, ಅದು ನನಗೆ ಸಂಬಂಧಿಸಿದ ವಿಚಾರ ಅಲ್ಲ, ಆದರೆ ದೇಶಾದ್ಯಂತ ಪಕ್ಷದ ಚುನಾವಣೆ ನಡೆಯುತ್ತದೆ. ನಮ್ಮ ಪಕ್ಷದ ನಾಯಕರು ಬಹಿರಂಗವಾಗಿ ಹೇಳಿಕೆ ನೀಡೋದು ಬೇಡ, ನಿಮ್ಮ ಅಸಮಾಧಾನ ಏನೆ ಇರಲಿ ಅದನ್ನು ಪಕ್ಷದ ವರಿಷ್ಠರ ಗಮನಕ್ಕೆ ತನ್ನಿ. ಈ ರೀತಿ ಬಹಿರಂಗ ಹೇಳಿಕೆ ನೀಡೋದು ಸರಿಯಲ್ಲ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದರು.

ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಜಗಳ ಜೋರಾಗಿದೆ. ಅದರಲ್ಲಿ ಬಿಜೆಪಿ ಯಾಕೆ ತರ್ತೀರಿ. ಹತಾಶೆ, ನಿರಾಸೆಯಲ್ಲಿ ಬಿಜೆಪಿ ಬಿಜೆಪಿ ಅಂತ ಮಾತನಾಡುತ್ತಿದ್ದಾರೆ.

ಇದು ಓರಿಜನಲ್ ಕಾಂಗ್ರೆಸ್ ಅಲ್ಲ. ನಕಲಿ ಗಾಂಧಿಗಳ ನಕಲಿ ಕಾಂಗ್ರೆಸ್, ಕಾಂಗ್ರೆಸ್ ಪಕ್ಷಕ್ಕೆ, ಮಿಸ್ಟರ್ ರಾಹುಲ್ ಗಾಂಧಿಗೆ ನನ್ನದೊಂದು ಪ್ರಶ್ನೆ ನೀವು ಅಂಬೇಡ್ಕರ್ ಘನಘೋರ ಅಪಮಾನ ಮಾಡಿದ್ದೀರಿ.. ಲೋಕಸಭೆಯಲ್ಲಿ ಚುನಾವಣೆಗೆ ನಿಂತಾಗ ಸೋಲಿಸಿದ್ದೀರಿ,



ನೀವು ಅವರ ಸ್ಮಾರಕ ಮಾಡಿಲ್ಲ, ಅವರ ಅಂತ್ಯಕಿಯೆಗೆ ಜಾಗ ಕೊಡಲಿಲ್ಲ. ಪಂಡಿತ ನೆಹರೂ ಸ್ಮಾರಕಕ್ಕೆ ಅವಕಾಶ ಕೊಟ್ಟಿಲ್ಲ. ಅವರನ್ನು ಎರಡು ಬಾರಿ ಸೋಲಿಸಿ ಅಪಮಾನ ಮಾಡಿದ್ದಾರೆ.. ವಿಪಿ ಸಿಂಗ್ ಬರೋ ತನಕ ಭಾರತ ರತ್ನ ಕೊಟ್ಟಿಲ್ಲ. ಇಂದಿರಾಗಾಂಧಿ, ನೆಹರೂ, ಸಂವಿಧಾನ ಮನ ಬಂದಂತೆ ತಿರುಚಿದ್ದಾರೆ.. ನಾವು ಅಂಬೇಡ್ಕರ್‌ಗೆ ಅಪಮಾನ ಮಾಡಿದ್ದೇವೆಂದು ಕ್ಷಮೆ ಕೇಳುತ್ತೀರಾ ಎಂದು ಸವಾಲ್ ಹಾಕಿದರು.


ಭಾರತ ಸರ್ಕಾರ ಐದು ಕೆಜಿ ಅಕ್ಕಿ, ಕೆಲ ಕಡೆ ಜೋಳ ಕೊಡುತ್ತಿದೆ. ಕರ್ನಾಟಕ ಸರ್ಕಾರ ಹತ್ತು ಕೆಜಿ ಅಕ್ಕಿ ಕೊಡಬೇಕು. ಅವರು ಕೊಡುತ್ತಿಲ್ಲ, ಮೋದಿ ಮಾರ್ಗದರ್ಶನದಲ್ಲಿ

ಅಕ್ಕಿ ದರ ಕಡಿಮೆ ಮಾಡಲಾಗಿದೆ. ಪ್ರತಿ ಕೆಜಿಗೆ 22.50 ಪೈಸೆ ಮಾಡಿದ್ದೇವೆ. ಕರ್ನಾಟಕ ಸರ್ಕಾರ ಐದು ಕೆಜಿ ಅಕ್ಕಿಯ ಹಣ ಕೊಡ್ತಿನಿ ಅಂದರೂ ಅದು ಕೊಡುತ್ತಿಲ್ಲ,

ಮುನಿಯಪ್ಪ ಬಗ್ಗೆ ಗೌರವ ಇದೆ, ಅವರು ಅಕ್ಕಿ ಕೊಡಿ ಅಂತಾ ಕೇಳಿದ್ರು. ನಮ್ಮ ಕಡೆ ಅಕ್ಕಿ ಇದೆ, ದರ ಕಡಿಮೆ ಮಾಡಿಕೊಡ್ತೀವಿ ಅಂದರೂ ಯಾವುದೇ ಆರ್ಡರ್ ಬಂದಿಲ್ಲ. ನಿಜಕ್ಕೂ ಹತ್ತು ಕೆಜಿ ಅಕ್ಕಿ ಕೊಡೋ ಮನಸ್ಸಿದ್ರೆ ಅಕ್ಕಿ ಖರೀದಿ ಮಾಡಬಹುದು. ಗೋಡೌನ್ ಅಲ್ಲಿ ಅಕ್ಕಿ ಸ್ಟಾಕ್ ಇದೆ, ಮೋದಿ ಅವರು ಅನುಮತಿ ಕೊಟ್ಟಿರೋದಕ್ಕೆ ಅಭಿನಂದನೆಗಳು ಎಂದು ಹೇಳಿದರು.

## ಹೈಕಮಾಂಡ್ ಹಾಕಿದ ಗೆರೆಯನ್ನು ನಾನು ದಾಟಲ್ಲ

**ಹುಬ್ಬಳ್ಳಿ:** ಸದ್ಯಕ್ಕೆ ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರ ಕುರ್ಚಿಗಳೆರಡೂ ಖಾಲಿ ಇಲ್ಲ. ಏನೇ ಇದ್ದರೂ ಅದನ್ನು ಪಕ್ಷದ ಹೈಕಮಾಂಡ್ ತೀರ್ಮಾನ ಮಾಡುತ್ತದೆ. ನಮ್ಮದು ಹೈಕಮಾಂಡ್ ಪಕ್ಷ, ಹೈಕಮಾಂಡ್ ಹಾಕಿದ ಗೆರೆಯನ್ನು ನಾವ್ಯಾರೂ ದಾಟಲ್ಲ ಎಂದು ಸಚಿವ ಜಮೀರ್ ಅಹಮದ್ ತಿಳಿಸಿದರು.ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಯಾಕೆ ರಾಜೀನಾಮೆ ನೀಡಬೇಕು?, ಇದರಲ್ಲಿ ಅವರ ಪಾತ್ರ ಏನೂ ಇಲ್ಲ.



ಈಗಾಗಲೇ ಅವರು ನಿವೇಶನ ವಾಪಸ್ ನೀಡಿದ್ದಾರೆ' ಎಂದರು. ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸಿದರೆ ಕಾಂಗ್ರೆಸ್ ಮುಳುಗುತ್ತದೆಂದು ತಿಳಿದು ಆರೋಪ ಮಾಡಲಾಗುತ್ತಿದೆ.
ಅವರ ಪ್ರಖ್ಯಾತಿ ಸಹಿಲಾಗದೆ ಅಪಪ್ರಚಾರ ಮಾಡಲಾಗುತ್ತಿದ್ದು, ರಾಜ್ಯದ ಜನರಿಗೆ ಎಲ್ಲವೂ ಗೊತ್ತಿದೆ ಎಂದು ಹೇಳಿದರು. ಬಿಜೆಪಿ ಯಾವತ್ತೂ ಗಾಂಧಿ ಪರ ಇಲ್ಲ. ಅದು ಎಂದಿಗೂ ಗಾಂಧಿ ವಿರೋಧಿ' 'ಕಾಂಗ್ರೆಸ್‌ನವರು ನಕಲಿ ಗಾಂಧಿಗಳು' ಎಂಬ ಬಿಜೆಪಿ ಆರೋಪಕ್ಕೆ ತಿರುಗೇಟು ನೀಡಿದರು.

## ವಿಚಾರಣೆಗೆ ಸುಪ್ರೀಂ ತಡೆ

ಮೊದಲ ಪುಟದಿಂದ

ಜಾರ್ಖಂಡ್ ಹೈಕೋರ್ಟ್‌ನ ಈ ಆದೇಶ ಪ್ರಶ್ನಿಸಿ ರಾಹುಲ್ ಗಾಂಧಿ ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿದ್ದ ವಿಶೇಷ ರಿಟ್ ಅರ್ಜಿಯನ್ನು ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಸಂದೀಪ್ ಮೆಹ್ತಾ ಅವರ ನ್ಯಾಯಪೀಠ ವಿಚಾರಣೆ ನಡೆಸಿತು.
ರಾಹುಲ್ ಪರ ಅಭಿಷೇಕ್ ಮನು ಸಿಂಘ್ವಿ ವಾದ ಮಂಡನೆ: ರಾಹುಲ್ ಗಾಂಧಿ ಪರ ಹಾಜರಾದ ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ, ಅನ್ಯಾಯಕ್ಕೊಳಗಾದ ವ್ಯಕ್ತಿ ಮಾತ್ರ ಕ್ರಿಮಿನಲ್ ಮಾನನಷ್ಟ ಮೊಕದ್ದಮೆ ಹೂಡಬಹುದು ಮತ್ತು ವಿಷಯಕ್ಕೆ ಸಂಬಂಧಪಡದವರು ದೂರು ದಾಖಲಿಸಲು ಸಾಧ್ಯವಿಲ್ಲ ಎಂದು ಹಲವಾರು ಬಾರಿ ನ್ಯಾಯಾಲಯಗಳು ತೀರ್ಪು ನೀಡಿವೆ ಎಂದು ಹೇಳಿದರು. ಸಿಂಘ್ವಿ ವಾದಕ್ಕೆ ಉತ್ತರ ನೀಡಲು ನಾಲ್ಕು ವಾರಗಳ ಕಾಲಾವಕಾಶ: ಸಿಂಘ್ವಿಯವರ ವಾದಕ್ಕೆ ಉತ್ತರಿಸಲು ನ್ಯಾಯಾಲಯವು ದೂರುದಾರ ನವೀನ್ ಝಾ ಮತ್ತು ಜಾರ್ಖಂಡ್ ಸರ್ಕಾರಕ್ಕೆ ನಾಲ್ಕು ವಾರಗಳ ಕಾಲಾವಕಾಶ ನೀಡಿತು. ಅಲ್ಲದೆ ಮುಂದಿನ ಆದೇಶದವರೆಗೆ ರಾಹುಲ್ ಗಾಂಧಿ ವಿರುದ್ಧ ಈ ಪ್ರಕರಣದಲ್ಲಿ ಯಾವುದೇ ವಿಚಾರಣೆ ನಡೆಸುವಂತಿಲ್ಲ ಎಂದು ಆದೇಶಿಸಿತು. ಕಳೆದ ವರ್ಷ ಫೆಬ್ರವರಿಯಲ್ಲಿ ಜಾರ್ಖಂಡ್ ಹೈಕೋರ್ಟ್ ರಾಹುಲ್ ಗಾಂಧಿ ಅವರ ವಿರುದ್ಧ ದಾಖಲಿಸಲಾದ ಮಾನನಷ್ಟ ಮೊಕದ್ದಮೆಯನ್ನು ರದ್ದುಗೊಳಿಸುವಂತೆ ಕೋರಿ ಸಲ್ಲಿಸಿದ್ದ ಮನವಿಯನ್ನು ತಿರಸ್ಕರಿಸಿತ್ತು. 2018ರಲ್ಲಿ ರಾಹುಲ್ ಗಾಂಧಿ ವಿರುದ್ಧ ನವೀನ್ ಝಾ ಎಂಬುವರು ಪ್ರಕರಣ ದಾಖಲಿಸಿದ್ದರು. ರಾಹುಲ್ ಗಾಂಧಿ ಬಿಜೆಪಿ ಕಾರ್ಯಕರ್ತರನ್ನು ಸುಳ್ಳುಗಾರರು ಮತ್ತು ಅವರು ಅಧಿಕಾರದ ಅಮಲಿನಲ್ಲಿದ್ದಾರೆ ಎಂಬ ಹೇಳಿಕೆ ನೀಡಿದ್ದಾರೆ ಎಂದು ಝಾ ಆರೋಪಿಸಿದ್ದಾರೆ.

## ವೈಟ್ ಟೀ ಶರ್ಟ್ ಚಳವಳಿ

**ನವದೆಹಲಿ:** ವರ್ಷದ 365 ದಿನವೂ ಬಿಳಿ ಟೀ ಶರ್ಟ್ ಧರಿಸಿರುವ ಲೋಕಸಭೆಯ ವಿರೋಧ ಪಕ್ಷ ನಾಯಕ ರಾಹುಲ್ ಗಾಂಧಿ ವೈಟ್ ಟೀ ಶರ್ಟ್ ಎಂಬ ಅಭಿಯಾನವನ್ನೇ ಆರಂಭಿಸಿದ್ದಾರೆ.

ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ದೇಶದಲ್ಲಿ ಆಯ್ದ ಕೆಲವು ಬಂಡವಾಳ ಶಾಹಿಗಳನ್ನು ಮಾತ್ರ ಶ್ರೀಮಂತಗೊಳಿಸುವಲ್ಲಿ ನಿರತವಾಗಿದೆ ಎಂದು ಆರೋಪಿಸಿರುವ ಅವರು, ದೇಶದಲ್ಲಿ ಅಸಮಾನತೆ ನಿರಂತರವಾಗಿ ಹೆಚ್ಚುತ್ತಿದೆ ಎಂದಿದ್ದಾರೆ.ಆರ್ಥಿಕ ಸಮಾನತೆ ತಂದು ಸಾಮಾಜಿಕ ನ್ಯಾಯವನ್ನು ಒದಗಿಸುವ ಸಲುವಾಗಿ ಈ ಬಿಳಿ ಟಿ ಶರ್ಟ್ ಅಭಿಯಾನವನ್ನು ಆರಂಭಿಸಲಾಗುತ್ತಿದೆ ಎಂದು ರಾಹುಲ್ ಗಾಂಧಿ ತಿಳಿಸಿದ್ದಾರೆ.



ತಮ್ಮ ರಕ್ತ ಮತ್ತು ಬೆವರಿನಿಂದ ದೇಶಕ್ಕೆ ನೀರುಣಿಸುವ ಕಾರ್ಮಿಕರ ಸ್ಥಿತಿ ಹದಗೆಡುತ್ತಿದೆ. ಜನರು ವಿವಿಧ ರೀತಿಯ ಅನ್ಯಾಯ ಮತ್ತು ದೌರ್ಜನ್ಯಗಳನ್ನು ಎದುರಿಸಬೇಕಾದ ಅನಿವಾರ್ಯತೆ ಇದೆ ಎಂದು ಹೇಳಿದರು.

ಅವರಿಗೆ ನ್ಯಾಯ ಮತ್ತು ಹಕ್ಕುಗಳನ್ನು ಒದಗಿಸಲು ಬಲವಾಗಿ ಧ್ವನಿ ಎತ್ತುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ರಾಹುಲ್ ಗಾಂಧಿ ತಮ್ಮ ಪೋಸ್ಟ್‌ನಲ್ಲಿ ಹೇಳಿದ್ದಾರೆ. ಈ ಆಲೋಚನೆಯೊಂದಿಗೆ, ನಾವು #ಘಿಹಿಣಜಖಿಜಿಡಿಣಒಠತಜಟಜಟಣ ಅನ್ನು ಪ್ರಾರಂಭಿಸುತ್ತಿದ್ದೇವೆ ಎಂದರು.

ಈ ಆಂದೋಲನದಲ್ಲಿ ಉತ್ಸಾಹದಿಂದ ಭಾಗವಹಿಸುವಂತೆ ನನ್ನ ಯುವ ಮತ್ತು ಕಾರ್ಮಿಕ ವರ್ಗದ ಸಹೋದ್ಯೋಗಿಗಳಿಗೆ ನಾನು ಮನವಿ ಮಾಡುತ್ತೇನೆ ಎಂದು ಅವರು ಹೇಳಿದ್ದಾರೆ. ಈ ಅಭಿಯಾನಕ್ಕೆ ಸೇರಲು ಮತ್ತು ಅದಕ್ಕೆ ಸಂಬಂಧಿಸಿದ ವಿವರವಾದ ಮಾಹಿತಿಗಾಗಿ, ಈ ಲಿಂಕ್‌ಗೆ ಭೇಟಿ ನೀಡಿ.


ಬಿಳಿ ಟೀ–ಶರ್ಟ್ ಎರಡು ಯಾತ್ರೆಗಳ ಗುರಿಗಳನ್ನು ಪ್ರತಿಧ್ವನಿಸುತ್ತದೆ. ಅದುವೇ ವಿಭಜನೆಗಳನ್ನು ನಿವಾರಿಸುವುದು ಮತ್ತು ಭಾರತವನ್ನು ಒಗ್ಗಟ್ಟು ಹಾಗೂ ಸಮಾನತೆಯ ರಾಷ್ಟ್ರವನ್ನಾಗಿ ಮಾಡುವುದು.

ಭಾರತ್ ಜೋಡೋ ಯಾತ್ರೆಯ ವೇಳೆ ರಾಹುಲ್ ಗಾಂಧಿ ಬಿಳಿ ಟೀ ಶರ್ಟ್‌ನಿಂದ ಸುದ್ದಿಯಾಗಿದ್ದರು. ಭಾರತ್ ಜೋಡೋ ಯಾತ್ರೆಯಲ್ಲಿ, ರಾಹುಲ್ ಗಾಂಧಿ ಬೇಸಿಗೆ, ಮಳೆ ಮತ್ತು ಚಳಿ ಎಲ್ಲಾ ಮೂರು ಋತುಗಳಲ್ಲಿ ಹೆಚ್ಚಿನ ಸಮಯ ಟಿ–ಶರ್ಟ್ ಧರಿಸಿದ್ದರು.ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಯಾವಾಗಲೂ ಬಿಳಿ ಬಣ್ಣದ ಟಿ ಶರ್ಟ್ ಧರಿಸುವುದೇಕೆ? ರಾಹುಲ್ ಗಾಂಧಿ ಸದಾ ಬಿಳಿ ಬಣ್ಣದ ಟಿ ಶರ್ಟ್ ಧರಿಸುವುದೇಕೆ ಎನ್ನುವ ಕುತೂಹಲ ಒಂದಿಷ್ಟು ಮಂದಿಯಲ್ಲಿ ಇರಬಹುದು. ಇದಕ್ಕೆ ಖುದ್ದಾಗಿ ರಾಹುಲ್ ಗಾಂಧಿಯೇ ಉತ್ತರ ನೀಡಿದ್ದರು. ಈ ಟಿ ಶರ್ಟ್ ನನಗೆ ಪಾರದರ್ಶಕತೆ, ಸ್ಥಿರತೆ ಮತ್ತು ಸರಳತೆಯನ್ನು ಪ್ರತಿನಿಧಿಸುತ್ತದೆ ಎಂದು ಹೇಳಿದ್ದರು.

## ಹಣ ವಾಪಸ್ ಕೊಡಿಸಿ: ದರ್ಶನ್

**ಬೆಂಗಳೂರು:** ರೇಣುಕಾ ಸ್ವಾಮಿ ಕೊಲೆ ಪ್ರಕರಣದಲ್ಲಿ ನ್ಯಾಯಾಲಯದಲ್ಲಿ ಹೋರಾಡಿ ಮೊದಲಿಗೆ ಮಧ್ಯಂತರ ಜಾಮೀನು ಆ ನಂತರ ನಿಯಮಿತ ಜಾಮೀನು ಪಡೆದಿರುವ ನಟ ದರ್ಶನ್, ಇದೀಗ ಮತ್ತೊಮ್ಮೆ ನ್ಯಾಯಾಲಯದ ಮೊರೆ ಹೋಗಿದ್ದಾರೆ.

ರೇಣುಕಾ ಸ್ವಾಮಿ ಕೊಲೆ ಪ್ರಕರಣದ ತನಿಖೆ ವೇಳೆ ದರ್ಶನ್ ಅವರನ್ನು ಬಂಧಿಸಿದ್ದ ಪೊಲೀಸರು ದರ್ಶನ್ ಇಂದ ದೊಡ್ಡ ಮೊತ್ತದ ಹಣವನ್ನು ವಶಪಡಿಸಿಕೊಂಡಿದ್ದರು. ಆ ಹಣವನ್ನು ಮರಳಿ ಕೊಡಿಸುವಂತೆ ನಟ ದರ್ಶನ್ ಇದೀಗ ನ್ಯಾಯಾಲಯದ ಮೊರೆ ಹೋಗಿದ್ದಾರೆ.



ರೇಣುಕಾ ಸ್ವಾಮಿ ಕೊಲೆ ಪ್ರಕರಣದಲ್ಲಿ ದರ್ಶನ್ ಬಂಧನದ ಬಳಿಕ ಅವರಿಂದ ಬರೋಬ್ಬರಿ 37 ಲಕ್ಷ ರೂಪಾಯಿ ಹಣವನ್ನು ಪೊಲೀಸರು ವಶಪಡಿಸಿಕೊಂಡಿದ್ದರು. ಈ ಹಣವನ್ನು ರೇಣುಕಾ ಸ್ವಾಮಿ ಕೊಲೆ ಪ್ರಕರಣವನ್ನು ಮುಚ್ಚಿ ಹಾಕಲು ಬಳಸಲಾಗಿತ್ತು ಎಂದು ಪೊಲೀಸರು ಆರೋಪ ಮಾಡಿದ್ದರು. ರೇಣುಕಾ ಸ್ವಾಮಿ ಕೊಲೆಯನ್ನು ತಾವು ಮಾಡಿದ್ದಾಗಿ ಒಪ್ಪಿಕೊಳ್ಳಲು ಹೊರಗಡೆಯಿಂದ ಕರೆಸಲಾಗಿದ್ದ ಮೂವರಿಗೆ ಅದಾಗಲೇ ಒಂದಿಷ್ಟು ಹಣವನ್ನು ಸಹ ನೀಡಲಾಗಿತ್ತು. ಹಣ ವಶಪಡಿಸಿಕೊಂಡಿದ್ದ ಪೊಲೀಸರು ಆದಾಯ ತೆರಿಗೆ ಇಲಾಖೆಗೆ ಈ ಬಗ್ಗೆ ಮಾಹಿತಿ ನೀಡಿದ್ದರು.

ಆದರೆ ನ್ಯಾಯಾಲಯದಲ್ಲಿ ದರ್ಶನ್ ಪರ ವಕೀಲರು, ವಶಪಡಿಸಿಕೊಂಡ ಹಣ, ಸಾಲವಾಗಿ ನೀಡಲಾಗಿದ್ದ ಹಣ ಅದು ಎಂದು ವಾದಿಸಿದ್ದರು. ಮೋಹನ್ ರಾಜ್ ಎಂಬುವರಿಗೆ ಸಾಲದ ರೂಪದಲ್ಲಿ ನಟ ದರ್ಶನ್ ಹಣ ನೀಡಿದ್ದರು. ಆ ಹಣವನ್ನು ಮೋಹನ್ ರಾಜ್, ದರ್ಶನ್‌ಗೆ ಮರಳಿದ್ದರು. ಆ ಹಣವನ್ನು ದರ್ಶನ್ ತಮ್ಮ ನಿವಾಸದಲ್ಲಿ ಇರಿಸಿಕೊಂಡಿದ್ದರು. ಆ ಹಣ ಕೊಲೆ ಮುಚ್ಚಿಹಾಕಲು ಬಳಸಲೆಂದು ಇರಿಸಿಕೊಂಡಿದ್ದ ಹಣ ಅಲ್ಲ ಎಂದು ವಾದ ಮಾಡಿದ್ದರು.

ಇದೀಗ 57ನೇ ಸಿಸಿಎಚ್ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿರುವ ದರ್ಶನ್, ತಮ್ಮ ಹಣವನ್ನು ಮರಳಿ ಕೊಡಿಸುವಂತೆ ಮನವಿ ಮಾಡಿದ್ದಾರೆ. ನ್ಯಾಯಾಲಯವು ಆದಾಯ ತೆರಿಗೆ ಇಲಾಖೆಗೆ ಆಕ್ಷೇಪಣೆ ಸಲ್ಲಿಸಲು ಸೂಚಿಸಿದೆ. ಒಂದೊಮ್ಮೆ ಪೊಲೀಸರು ಅಥವಾ ಆದಾಯ ತೆರಿಗೆ ಇಲಾಖೆ ಆಕ್ಷೇಪಣೆ ಸಲ್ಲಿಸಿದಲ್ಲಿ ಮತ್ತೊಂದು ಸುತ್ತು ವಾದ, ವಿಚಾರಣೆಗಳು ನಡೆದ ಬಳಿಕ ಆ ಹಣ ದರ್ಶನ್‌ಗೆ ಸೇರಲಿದೆಯೇ ಅಥವಾ ಪೊಲೀಸರ ಬಳಿ ಸಾಕ್ಷಿಯಾಗಿಯೇ ಉಳಿದುಕೊಳ್ಳಲಿದೆಯೇ ತಿಳಿಯಲಿದೆ.
ರೇಣುಕಾ ಸ್ವಾಮಿ ಕೊಲೆ ಪ್ರಕರಣದ ಆರೋಪಿಯಾಗಿರುವ ದರ್ಶನ್‌ಗೆ ಕಳೆದ ತಿಂಗಳು ನಿಯಮಿತ ಜಾಮೀನು ದೊರೆತಿದೆ. ದರ್ಶನ್‌ಗೆ ಮಾತ್ರವೇ ಅಲ್ಲದೆ ಪ್ರಕರಣದ ಎಲ್ಲ ಆರೋಪಿಗಳಿಗೂ ಜಾಮೀನು ದೊರೆತಿದೆ.

## ತ್ಯಾಗ ಹೊಸದೇನಲ್ಲ!

ಮೊದಲ ಪುಟದಿಂದ

ಪ್ರಾಮಾಣಿಕವಾಗಿ ಕಾಲ, ಕಾಲದಿಂದಲೂ ನಿರ್ವಹಿಸಿಕೊಂಡು ಬಂದಿದ್ದೇನೆ" ಎಂದರು.

ಪಕ್ಷಕ್ಕಾಗಿ ತ್ಯಾಗ ಮಾಡಿಕೊಂಡು ಬಂದಿದ್ದೇನೆ


"ಪಕ್ಷಕ್ಕಾಗಿ ಮೊದಲಿನಿಂದಲೂ ಹಲವಾರು ತ್ಯಾಗಗಳನ್ನು ಮಾಡಿದ್ದೇನೆ. ಧರಂಸಿಂಗ್ ಅವರ ನೇತೃತ್ವದ ಸಮ್ಮಿಶ್ರ ಸರ್ಕಾರ ಹಾಗೂ ಸಿದ್ದರಾಮಯ್ಯ ಅವರ ಹಿಂದಿನ ಸರ್ಕಾರದಲ್ಲಿಯೂ ಉಸಿರು ಬಿಗಿ ಹಿಡಿದುಕೊಂಡು ತ್ಯಾಗ ಮಾಡಿದ್ದೇನೆ. ನನಗೆ ಪಕ್ಷವೇ ಮುಖ್ಯ. ನಾನು ಪಕ್ಷದಿಂದ ಬೆಳೆದವನು. ವಿದ್ಯಾರ್ಥಿ ನಾಯಕನಾಗಿದ್ದ ನನ್ನನ್ನು ಗುರುತಿಸಿ ಪಕ್ಷ ಟಿಕೆಟ್ ನೀಡಿತ್ತು. ಮಾಧ್ಯಮದವರು ಯಾರ ಮಾತನ್ನೋ ಕೇಳಬೇಡಿ" ಎಂದರು.

ಎಷ್ಟು ದಿನ ಶಿವಕುಮಾರ್ ತ್ಯಾಗ ಮಾಡುತ್ತಾರೆ, ತ್ಯಾಗಕ್ಕೆ ಫಲ ಯಾವಾಗ ಸಿಗುತ್ತದೆ ಎಂದು ಕೇಳಿದಾಗ, "ನಾನು ತ್ಯಾಗ ಮಾಡಿಕೊಂಡೆ ಬರುತ್ತೇನೆ. ನನಗೆ ಫಲದ ಅವಶ್ಯಕತೆಯೇ ಇಲ್ಲ. ಜನಕ್ಕೆ ಒಳೆಯದಾಗುತ್ತಿದೆಯಲ್ಲ, ಅಷ್ಟು ಸಾಕು ನನಗೆ" ಎಂದು ಹೇಳಿದರು.

ಸಾಮಾಜಿಕ ನ್ಯಾಯ, ಸಂವಿಧಾನ ಉಳಿಸುವುದು ನಮ್ಮ ಮೂಲ ಮಂತ್ರ

"ಮಹಾತ್ಮ ಗಾಂಧಿ ಅವರ ಹಾಗೂ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸ್ಮರಣೆ, ಸಂವಿಧಾನ ರಕ್ಷಣೆಯೇ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಸಮಾವೇಶದ ಉದ್ದೇಶ. ಸಾಮಾಜಿಕ ನ್ಯಾಯವನ್ನು ಉಳಿಸುವುದೇ ನಮ್ಮ ಮೂಲ ಮಂತ್ರ. ಕಳೆದ ಬಾರಿ ರೂಪಿಸಿದ ಕಾರ್ಯಕ್ರಮಗಳನ್ನು ಈ ಬಾರಿಯೂ ಮುಂದಿವರೆಸಲಾಗುವುದು" ಎಂದು ಹೇಳಿದರು.

"ಸುಮಾರು 60 ಕ್ಕೂ ಹೆಚ್ಚು ರಾಷ್ಟ್ರೀಯ ಮಟ್ಟದ ನಾಯಕರು, ಅತಿಥಿಗಳು, ಸಂಸದರು, ಕಾರ್ಯಕಾರಿ



ಸಮಿತಿ ಸದಸ್ಯರು ಬೆಳಗಾವಿ ಸಮಾವೇಶಕ್ಕೆ ಆಗಮಿಸುತ್ತಿದ್ದಾರೆ. ಸಚಿವರು, ಶಾಸಕರು, ಹಿರಿಯ ನಾಯಕರು ಕಾರ್ಯಕ್ರದಲ್ಲಿ ಭಾಗವಹಿಸಲಿದ್ದು, ಒಂದಷ್ಟು ನಾಯಕರಿಗೆ ಮುಖ್ಯ ವೇದಿಕೆಯಲ್ಲಿ ಅವಕಾಶ ಮಾಡಿಕೊಡಲಾಗಿದೆ" ಎಂದು ಹೇಳಿದರು.

ದೆಹಲಿ ಸ್ಟಾರ್ ಪ್ರಚಾರಕರ ಪಟ್ಟಿಯಲ್ಲಿ ನಿಮ್ಮ ಹೆಸರಿದೆ ಎಂದು ಕೇಳಿದಾಗ, "ನಾನೇ ಖುದ್ದಾಗಿ ದೆಹಲಿಗೆ ಹೋಗಿ ಮಹಿಳೆಯರಿಗೆ ತಿಂಗಳಿಗೆ 2,500 ರೂಪಾಯಿ ನೀಡುವ ಪ್ಯಾರಿ ದೀದಿ ಯೋಜನೆ ಪ್ರಕಟಣೆ ಮಾಡಿದ್ದೆ" ಎಂದರು.

ಎಲ್ಲಾ ರಾಜ್ಯಗಳ ಸಿಎಂಗಳಿದ್ದು ಸಿದ್ದರಾಮಯ್ಯ ಅವರನ್ನು ಕೈ ಬಿಟ್ಟಿರುವ ಬಗ್ಗೆ ಕೇಳಿದಾಗ, "ಸಿದ್ದರಾಮಯ್ಯ ಅವರು ಬಜೆಟ್ ತಯಾರಿಯಲ್ಲಿದ್ದಾರೆ. ಎಲ್ಲಾ ಮಂತ್ರಿಗಳು, ಇಲಾಖಾ ಅಧಿಕಾರಿಗಳ ಜೊತೆ ಚರ್ಚೆ ನಡೆಸಬೇಕಿದೆ.

ಈ ಹಿನ್ನೆಲೆಯಲ್ಲಿ ಅವರಿಗೆ ಎಐಸಿಸಿ ಸಮಯ ನೀಡಿದೆ" ಎಂದರು.

ಸುವರ್ಣಸೌಧದ ಗಾಂಧಿ ಪ್ರತಿಮೆಯನ್ನು ಶಿಲ್ಪಿ ಅರುಣ್ ಯೋಗಿರಾಜ್ ಕೆತ್ತನೆ ಮಾಡಿದ್ದಾರೆಯೇ ಎನ್ನುವ ಬಗ್ಗೆ ಕೇಳಿದಾಗ, "ಇದನ್ನು ನಿರ್ವಹಿಸಿದ್ದು ಲೋಕೋಪಯೋಗಿ ಇಲಾಖೆ, ಶಿಲ್ಪಿ ಯಾರು ಎಂದು ನಾನು ಬಹಿರಂಗಪಡಿಸಲು ಆಗುವುದಿಲ್ಲ" ಎಂದರು.

# ಖೋ ಖೋ ವಿಶ್ವಕಪ್ ಗೆದ್ದ ತಂಡದಲ್ಲಿ ಮೈಸೂರಿನ ಪ್ರತಿಭೆ

**ಮೈಸೂರು:** ಚೊಚ್ಚಲ ಖೋ ಖೋ ವಿಶ್ವಕಪ್ ನಲ್ಲಿ ಗೆದ್ದು ಪ್ರಶಸ್ತಿ ಮುಡಿಗೇರಿಸಿಕೊಂಡ ಭಾರತ ತಂಡದಲ್ಲಿ ಭಾಗಿಯಾಗಿದ್ದ ಮೈಸೂರು ಜಿಲ್ಲೆಯ ನರಸೀಪುರ ತಾಲೂಕಿನ ಕುರುಬೂರು ಗ್ರಾಮದ ಪ್ರತಿಭೆ ಚೈತ್ರ ಮನೆಯಲ್ಲಿ ಇದೀಗ ಸಂಭ್ರಮ ಮನೆ ಮಾಡಿದೆ.

ಕುರುಬೂರು ಗ್ರಾಮ ಆಟಗಾರ್ತಿ ಚೈತ್ರ ಭಾರತದ ಸಾಧನೆಯಲ್ಲಿ ಮಹೋನ್ನತ ಸೇವೆ ಸಲ್ಲಿಸಿದ್ದು ಚೈತ್ರಾ ಮನೆಯಲ್ಲಿ ಪೋಷಕರು ಮಗಳ ಟ್ರೋಫಿಗಳನ್ನು ಒಂದೆಡೆ ಇಟ್ಟು, ಪ್ರದರ್ಶನ ಮಾಡಿ ಸಂಭ್ರಮಿಸಿದ್ದಾರೆ.






ಮಗಳ ಸಾಧನೆ ಕಂಡು ಗದ್ಗತಿರಾದ ಚೈತ್ರ ತಂದೆ ಬಸವಣ್ಣ, ತಾಯಿ ನಾಗರತ್ನ ಸಂತಸ ವ್ಯಕ್ತಪಡಿಸಿದ್ದಾರೆ. ನನ್ನ ಮಗಳಿಗೆ ಶಿಕ್ಷಕ ಮಂಜುನಾಥ್ ಎರಡನೇ ತಂದೆಯಂತೆ. ನಾವು ಜನ್ಮ ಕೊಟ್ಟ ತಂದೆ, ಅವರು ನಮ್ಮ ಹುಡುಗಿಗೆ ಒಳ್ಳೆಯ ದಾರಿ ತೋರಿಸಿದ್ದಾರೆ. ಮಗಳ ಸಾಧನೆ ನೋಡಿ ತುಂಬಾ ಖುಷಿ ಆಗುತ್ತಿದೆ. ನನ್ನ ಮಗಳು ಟೂರ್ನಿಗೆ ಹೋಗುವಾಗಲೇ ನಾನು ವಿಶ್ವಕಪ್ ಗೆದ್ದೇ ಬರುತ್ತೇನೆ ಎಂದಿದ್ದಳು. ಅದರಂತೆ ಗೆದ್ದು ಬಂದಿದ್ದಾಳೆ ಎಂದು ತಂದೆ ಬಸವರಾಜು ಹರ್ಷ ವ್ಯಕ್ತಪಡಿಸಿದ್ದಾರೆ.

ಹಳ್ಳಿಯ ಮಗಳು ಇಂತಹ ಸಾಧನೆ ಮಾಡಿರೋದು ನಮಗೆ ಹೆಮ್ಮೆ. ನನ್ನ ತಂದೆ ನನ್ನನ್ನ 9 ನೇ ತರಗತಿ ವರೆಗೆ ಓದಿಸಿದ್ದರು. ನನ್ನ ಮಗಳು ಓದುವಾಗ ಅವಳ ಇಷ್ಟದಂತೆ ನಾವು ಸಪೋರ್ಟ್ ಮಾಡಿದ್ದೇವೆ. ನನ್ನ ಮಗಳು ಓದುವುದು, ಆಟ ಎರಡರಲ್ಲೂ ಮುಂದು. ಹಳ್ಳಿಯಲ್ಲಿ ಜನ ಸಾಕಷ್ಟು ಮಾತನಾಡಿದರು. ಆದರೆ ಅದನ್ನ ನಾವು ತಲೆಗೆ ಹಾಕಿಕೊಳ್ಳಲಿಲ್ಲ. ಈಗ ಮಗಳ ಸಾಧನೆ ನೋಡಿದಾಗ ಜನರ ಮಾತನ್ನ ನಾನು ಆಶಿರ್ವಾದ ಅಂತ ತಿಳಿದುಕೊಂಡೆ. ಮುಂದೆ ನಮ್ಮ ಮಗಳು ಏನು ಸಾಧನೆ ಮಾಡಬೇಕು ಅಂದುಕೊಂಡಿದ್ದಾಳೆ ಅದಕ್ಕೆ ಮುಕ್ತ ಅವಕಾಶ ಕೊಡುತ್ತೇವೆ. ಮಗಳಿಗೆ ಆಲ್ ದಿ ಬೆಸ್ಟ್ ಹೇಳುತ್ತೇನೆ ಎಂದ ತಾಯಿ ನಾಗರತ್ನ ಸಂತಸಪಟ್ಟಿದ್ದಾರೆ.

ಆಟಗಾರ್ತಿ ಚೈತ್ರಾ ಸಾಧನೆ ಕೊಂಡಾಡಿದ ತರಬೇತುದಾರ ಮಂಜುನಾಥ್

ಚೈತ್ರಾ 4 ನೇ ತರಗತಿಯಲ್ಲಿ ಇದ್ದಾಗಿನಿಂದ ಖೋಖೋ ಹೇಳಿಕೊಟ್ಟಿದ್ದ ಶಿಕ್ಷಕ ಹಾಗೂ ತರಬೇತುದಾರ ಮಂಜುನಾಥ್ ಇದೀಗ ಆಟಗಾರ್ತಿ ಚೈತ್ರಾ ಸಾಧನೆ ಕೊಂಡಾಡಿದ್ದಾರೆ. ಚೈತ್ರಾ ಸಾಧನೆ ಇತರ ಮಕ್ಕಳಿಗೂ ಸ್ಪೂರ್ತಿ ಆಗಬೇಕು. ಆ ಮಗು ಕೂಡ ಇದೇ ಗ್ರಾಮದ ಖೋಖೋ ಆಟಗಾರ್ತಿ ವೀಣಾ ಅವರನ್ನು ಸ್ಪೂರ್ತಿಯಾಗಿ ತೆಗೆದುಕೊಂಡಿದ್ದರು. ಫೈನಲ್ ಪಂದ್ಯ ನೋಡಿ ಬಹಳ ಖುಷಿ ಆಗಿದೆ. ಕಣ್ಣು ತುಂಬಿ ಬಂತು. ಹೂವಿನಿಂದಿಗೆ ನಾರು ಸ್ವರ್ಗ ಸೇರಿತು ಎಂಬಂತೆ ನನ್ನ ಬದುಕು ಆಗಿದೆ. ಗಣಿತ ಶಿಕ್ಷಕನಾಗಿ ಬಂದವನು ಮಕ್ಕಳ ಸಾಮರ್ಥ್ಯ ನೋಡಿ ಖೋಖೋ ಕಲಿಸಿದೆ. ಇಂದು ಇದೇ ಶಾಲೆಯಲ್ಲಿ ಖಾಯಂ ಶಿಕ್ಷಕನೂ ಆದೆ. ಚೈತ್ರಾ ಯಾವಾಗಲೂ ಕುರುಬೂರು ಶಾಲಾ ಕ್ರೀಡಾಂಗಣದಲ್ಲೇ ಪ್ರಾಕ್ಟೀಸ್ ಮಾಡುತ್ತಿದ್ದಳು. ವಿಶ್ವಕಪ್ ಆಯ್ಕೆ ನಂತರ ದಿನಕ್ಕೆ ಮೂರು ಬಾರಿ ಅಭ್ಯಾಸ ಮಾಡುತ್ತಿದ್ದಳು. ಪಂದ್ಯಕ್ಕಾಗಿ ಸಾಕಷ್ಟು ಅಭ್ಯಾಸ ಮಾಡಿದ್ದಳು. ಆ ಮಗುವಿಗೆ ಆಲ್ ದಿ ಬೆಸ್ಟ್ ಎಂದು ಹೇಳುವ ಮೂಲಕ ತರಬೇತುದಾರ ಮಂಜುನಾಥ್ ಚೈತ್ರ ಸಾಧನೆಗೆ ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

# ಮೆದುಳಿನ ವಿಷಯಗಳ ಕುರಿತು ಕಾರ್ಯಾಗಾರ

**ಬೆಂಗಳೂರು:** ನಿಮಾನ್ಸ್ ಆಸ್ಪತ್ರೆಯ ತಂಡದಿಂದ ಮೆದುಳಿಗೆ ಸಂಬಂಧಪಟ್ಟ ವಿಷಯಗಳ ಬಗ್ಗೆ ತಜ್ಞರಿಂದ ಹಾಗೂ ನಮ್ಮ ಪೊಲೀಸ್ ನ್ಯೂಸ್ ಸಹಯೋಗದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.



ಸ್ವಾಮಿ ವಿವೇಕಾನಂದ ವಿದ್ಯಾಶಾಲಾ ಪ್ರಾಢ ಶಾಲೆಯಲಿರೀ ಕಾರ್ಯಕ್ರಮವನ್ನು ಶನಿವಾರ ನಡೆಸಲಾಯಿತು. ಶಾಲಾ ಮಕ್ಕಳಿಗೆ ಮೆದುಳಿನ ಮಹತ್ವ ಹಾಗೂ ಮೆದುಳು ಯಾವ ರೀತಿಯಲ್ಲಿ ಕಾರ್ಯ ನಿರ್ವಹಿಸುತ್ತೆ ಎಂಬುದರ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದರು.

ಮೆದುಳಿನ ಕಾರ್ಯಗಳು ಮತ್ತು ಮೆದುಳು ಹೇಗೆ ಕೆಲಸ ಮಾಡುತ್ತದೆ. ದೇಹವನ್ನು ನಿಯಂತ್ರಿಸುವ ಕಾರ್ಯಗಳು ಮತ್ತು ಪ್ರಕ್ರಿಯೆಗಳನ್ನು ನಿಯಂತ್ರಿಸುತ್ತದೆ.ಮೆದುಳು ಅತ್ಯಗತ್ಯ, ಸಂಕೀರ್ಣ ಅಂಗವಾಗಿದ್ದು ಅದು ದೇಹದ ಕಾರ್ಯಗಳು ಮತ್ತು ಪ್ರಕ್ರಿಯೆಗಳನ್ನು ನಿಯಂತ್ರಿಸುತ್ತದೆ. ಇದು ಐದು ಇಂದ್ರಿಯಗಳಿಂದ ಮತ್ತು ಅಂಗಗಳಿಂದ ಸ್ವನಿಯಂತ್ರಿತ (ಅನೈಚ್ಛಿಕ) ಇನ್‌ಪುಟ್‌ನಂತಹ ದೇಹದ ಉಳಿದ ಭಾಗಗಳಿಂದ ಇನ್‌ಪುಟ್ ಅನ್ನು ಪಡೆಯುತ್ತದೆ ಮತ್ತು ಈ ಮಾಹಿತಿಯನ್ನು ಅರ್ಥೈಸುತ್ತದೆ.

ಮೆದುಳು ಆಲೋಚನೆಗಳು, ಭಾವನೆಗಳು, ಮೋಟಾರು ಕೌಶಲ್ಯಗಳು ಮತ್ತು ಸಂವೇದನೆಗಳ ಗ್ರಹಿಕೆಗಳನ್ನು ಶಕ್ತಗೊಳಿಸುತ್ತದೆ ಮತ್ತು ಹೃದಯ ಬಡಿತ, ರಕ್ತದೊತ್ತಡ ಮತ್ತು ಉಸಿರಾಟ, ಹಾರ್ಮೋನುಗಳ ಬಿಡುಗಡೆ ಮತ್ತು ಸಂವೇದನಾ ಮಾಹಿತಿಯ ಸಂಸ್ಕರಣೆಯನ್ನು ಇತರ ಕಾರ್ಯಗಳ ನಡುವೆ ನಿಯಂತ್ರಿಸುತ್ತದೆ.

ಮೆದುಳಿನ ಮುಖ್ಯ ಭಾಗಗಳು ಮತ್ತು ಅವುಗಳ ಕಾರ್ಯಗಳು. ಮೆದುಳು ನರ ಅಂಗಾಂಶದ ದೊಡ್ಡ ದ್ರವ್ಯರಾಶಿಯಿಂದ ಮಾಡಲ್ಪಟ್ಟಿದೆ ಮತ್ತು ಒಟ್ಟಿಗೆ ಕೆಲಸ ಮಾಡುವ ಅನೇಕ ವಿಶೇಷ ಪ್ರದೇಶಗಳನ್ನು ಒಳಗೊಂಡಿದೆ. ಇದು ಸ್ನಾಯು ಅಲ್ಲ.

ಮೆದುಳಿನ ಮುಖ್ಯ ಭಾಗಗಳು ಸೆರೆಬ್ರಮ್, ಮೆದುಳಿನ ಕಾಂಡ ಮತ್ತು ಸೆರೆಬೆಲ್ಲಮ್. ಇದು ಮೆನಿಂಜಸ್ ಎಂಬ ಅಂಗಾಂಶದ ಪದರದಿಂದ ಸುತ್ತುವರಿದಿದೆ ಮತ್ತು ತಲೆಬುರುಡೆಯೊಳಗೆ (ಕ್ರೇನಿಯಮ್) ಇರುತ್ತದೆ, ಇದು ಗಾಯದಿಂದ ರಕ್ಷಿಸಲು ಸಹಾಯ ಮಾಡುತ್ತದೆ.

ಮೆದುಳು ಹೇಗೆ ಕೆಲಸ ಮಾಡುತ್ತದೆ? ಮೆದುಳು ಬೆನ್ನುಹುರಿಗೆ ಸಂಪರ್ಕ ಹೊಂದಿದೆ; ಒಟ್ಟಾಗಿ ಅವರು ಕೇಂದ್ರ ನರಮಂಡಲವನ್ನು ರೂಪಿಸುತ್ತಾರೆ. ಕೇಂದ್ರ ನರಮಂಡಲವು ಲಕ್ಷಾಂತರ ನ್ಯೂರಾನ್‌ಗಳನ್ನು (ನರ ಕೋಶಗಳು) ಹೊಂದಿದೆ, ಅದು ಪ್ರತಿಯೊಂದು ಅಂಗ ಮತ್ತು ದೇಹದ ಭಾಗಕ್ಕೆ ಕವಲೊಡೆಯುತ್ತದೆ. ನರಕೋಶಗಳು ಸಿನಾಪ್ಸೆಸ್ ಎಂದು ಕರೆಯಲ್ಪಡುವ ಜಂಕ್ಷನ್‌ಗಳಲ್ಲಿ ಪರಸ್ಪರ ಸಂಪರ್ಕಿಸುತ್ತವೆ ಮತ್ತು ಸಂವಹನ ನಡೆಸುತ್ತವೆ.

ಮೆದುಳು ಮತ್ತು ಹೃದಯದ ನಡುವಿನ ಸಂಪರ್ಕ. ಮೆದುಳು ಮತ್ತು ರಕ್ತದೊತ್ತಡದ ನಡುವಿನ ಸಂಪರ್ಕ.

ಮೆದುಳಿನ ಪರಿಸ್ಥಿತಿಗಳು. ನಮ್ಮ ದೇಹಕ್ಕೆ ಹೇಗೆ ವಯಸ್ಸು ಆಗುತ್ತದೆಯೋ ಅದೇ ರೀತಿ ವಯಸ್ಸಾದಂತೆ ಮೆದುಳಿನ ಗಾತ್ರವು ಕುಗ್ಗುತ್ತದೆ. ಹೀಗಾಗಿ ದೇಹದ ಪ್ರಮುಖ ಅಂಗವಾದ ಮೆದುಳಿನ ಆರೋಗ್ಯವನ್ನು ಕಾಪಾಡಿಕೊಳ್ಳದೇ ಹೋದರೆ ಅನೇಕ ರೀತಿಯ ರೋಗಗಳು ಬಾಧಿಸಬಹುದು. ಮೆದುಳಿನ ಆರೋಗ್ಯ ಹಾಗೂ ನರ ವೈಜ್ಞಾನಿಕ ಅಸ್ವಸ್ಥತೆಗಳ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಪ್ರತಿ ವರ್ಷ ಜುಲೈ 22 ರಂದು ವಿಶ್ವ ಮೆದುಳು ದಿನವನ್ನು ಆಚರಿಸಲಾಗುತ್ತದೆ.

ನಮ್ಮ ದೇಹದ ಪ್ರಮುಖ ಅಂಗವೇ ಮೆದುಳು. ದೇಹದ ಸಂಪೂರ್ಣ ಅಂಗಾಂಗಗಳಿಗೆ ಸಂದೇಶಗಳನ್ನು ಈ ಮೆದುಳೇ ಕಳುಹಿಸುತ್ತದೆ. ಒಂದು ವೇಳೆ ಈ ಅಂಗವು ಸರಿಯಾಗಿ ಕೆಲಸವು ನಡೆಸಿದ್ದರೆ ದೇಹದ ಉಳಿದ ಅಂಗಗಳ ಕಾರ್ಯಕ್ಕೂ ಅಡ್ಡಿಯಾಗುತ್ತದೆ. ಹೀಗಾಗಿ ಮೆದುಳಿನ ಆರೋಗ್ಯ ಕಾಪಾಡಿಕೊಳ್ಳುವುದು ಬಹಳ ಮುಖ್ಯವಾದ ಕಾರಣ ಈ ಮೆದುಳಿನ ಆರೋಗ್ಯ ಹಾಗೂ ನರ ವೈಜ್ಞಾನಿಕ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಪ್ರತಿ ವರ್ಷ ವಿಶ್ವ ಮೆದುಳಿನ ದಿನವನ್ನು ಆಚರಿಸುತ್ತ ಬರಲಾಗುತ್ತಿದೆ.

ಮೆದುಳಿನ ಆರೋಗ್ಯವನ್ನು ಕಾಪಾಡಿಕೊಳ್ಳಲು ಈ ಆಹಾರ ಸೇವಿಸಿ

ಇಡೀ ದೇಹದ ಚಲನೆಯನ್ನು ನಿಯಂತ್ರಿಸುವ ಅಂಗವಾದ ಮೆದುಳನ್ನು ಆರೋಗ್ಯಯುತವಾಗಿರುವುದು ಬಹುಮುಖ್ಯ. ಹೀಗಾಗಿ ಉತ್ತಮ ಜೀವನಶೈಲಿ ಮತ್ತು ಆಹಾರ ಪದ್ಧತಿಯಿಂದ ಇದು ಸಾಧ್ಯ.

ಕೇಸುಗಡ್ಡೆಯು ವಿಟಮಿನ್ ಕೆ ಪೋಷಕಾಂಶಗಳು ಹಾಗೂ ಉತ್ಕರ್ಷಣ ನಿರೋಧಕಗಳು ಸಮೃದ್ಧವಾಗಿದ್ದು ಇದು ಮೆದುಳಿನ ಕೋಶಗಳನ್ನು ಆರೋಗ್ಯವಾಗಿರಿಸುತ್ತದೆ. ಮೆದುಳಿನ ಕಾಯಿಲೆಯ ಅಪಾಯವನ್ನು ಕಡಿಮೆ ಮಾಡುತ್ತದೆ.

ಆಹಾರ ಪದ್ಧತಿಯಲ್ಲಿ ಮೀನುಗಳ ಸೇವನೆಯನ್ನು ಮಾಡುವುದು ಉತ್ತಮ. ಮೀನುಗಳಲ್ಲಿ ಒಮೆಗಾ–3 ಕೊಬ್ಬಿನಾಮ್ಲಗಳು ಸಮೃದ್ಧವಾಗಿದೆ. ಇದು ನಿಮ್ಮ ಮೆದುಳನ್ನು ಆರೋಗ್ಯರಕವಾಗಿರುವಂತೆ ಮಾಡುತ್ತದೆ.

ಅರಶಿನವು ಕರ್ಕ್ಯುಮಿನ್ ಎಂಬ ಅಂಶವನ್ನು ಹೊಂದಿದ್ದು, ಮೆದುಳಿನ ಜೀವಕೋಶಗಳಿಗೆ ಅತ್ಯಂತ ಉಪಯೋಗಕಾರಿಯಾಗಿದೆ. ಈ ಅರಶಿನ ಉತ್ಕರ್ಷಣ ನಿರೋಧಕವಾಗಿ ಕಾರ್ಯನಿರ್ವಹಿಸುವ ಕಾರಣ ನೆನಪಿನ ಶಕ್ತಿ ಕಡಿಮೆಯಾಗುವುದು ಸೇರಿದಂತೆ ಇನ್ನಿತ್ತರ ಮೆದುಳಿಗೆ ಸಂಬಂಧಪಟ್ಟ ರೋಗಗಳ ಅಪಾಯವನ್ನು ಕಡಿಮೆ ಮಾಡುತ್ತದೆ. ಇನ್ನು ಹೆಚ್ಚು ಮಾಹಿತಿ ನೀಡಿದ್ದಾರೆ. ಈ ಕಾರ್ಯಕ್ರಮಕ್ಕೆ ನಮ್ಮ ಪೊಲೀಸ್ ನ್ಯೂಸ್‌ಪ್ರಧಾನ ಸಂಪಾದಕ ಜಾನ್ ಪ್ರೇಮ್. ಜೆ ರವರು, ನಿಮಾನ್ಸ್ ಡಾಕ್ಟರ್ಸ್ ಹಾಗೂ ಸ್ವಾಮಿ ವಿವೇಕಾನಂದ ವಿದ್ಯಾಶಾಲಾ ಶಿಕ್ಷಕರು, ಮಕ್ಕಳು ಈ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

# ದೇಶದ ಆಚಾರ ವಿಚಾರ ಬೆಳೆ ಸಂಸ್ಕೃತಿ ತೋರುವುದೆ ಸಂಕ್ರಾಂತಿ ಸಂಕೇತ: ಡಾ.ಕೋಡಿರಂಗಪ್ಪ

**ಚಿಕ್ಕಬಳ್ಳಾಪುರ:** ದೇಶ ಮತ್ತು ನಾಡಿನಾದ್ಯಂತ ನಮ್ಮ ಹಿರಿಯರ ಕಾಲದಿಂದಲೂ ಆಚರಿಸಿಕೊಂಡು ಬರುತ್ತಿರುವ ಸಂಸ್ಕೃತಿ ಹಬ್ಬ ಆಚಾರ ವಿಚಾರಗಳ ಮಿಲನ ರೈತರು ಬೆಳೆಯುವ ಬೆಳೆ ಪ್ರಕೃತಿ ನಮಗೆ ನೀಡುತ್ತಿರುವ ಸುಂದರ ಗಿಡಮರಗಳಿಂದ ಹೊರಡುವ ಹೂವುಗಳ ಸೊಬಗನ್ನ ಬಿಂಬಿಸುವ ಸಂಕೇತವನ್ನೆ ಸಂಕ್ರಾಂತಿ ಸುಗ್ಗಿಯಾಗಿ ಹೊರಹೊಮ್ಮುತ್ತದೆ ಅದನ್ನ ಶಾಲಾ ಕಾಲೇಜುಗಳಲ್ಲೂ ಆಚರಿಸಿ ಮುಂದಿನ ಪೀಳಿಗೆಗೆ ಕಲಿಸಿಕೊಡುವ ಹಬ್ಬವಾಗಬೇಕಿದೆ ಎಂದು ಕಸಾಪ ಜಿಲ್ಲಾದ್ಯಕ್ಷ ಡಾ.ಕೋಡಿರಂಗಪ್ಪ ಕರೆ ನೀಡಿದರು.




ನಗರದ ಸೆಂಟ್ ಜಾನ್ಸ್ ಇಂಗ್ಲೀಷ್ ಶಾಲೆಯಲ್ಲಿಂದು ಸಂಕ್ರಾತಿ ಸುಗ್ಗಿಯ ಅನಾವರಣ ಗೊಳಿಸಲಾಯಿತು ಗ್ರಾಮೀಣ ಸೊಗಡನ್ನ ಬಿಂಬಿಸುವ ರೈತರು ಬೆಳೆಯುವ ತರಕಾರಿಗಳು ಕಬ್ಬು ಕೃಷಿಗೆ ಬಳಸುವ ಸಲಕರಣೆಗಳು ಮನೆ ಬಳಕೆ ವಸ್ತುಗಳ ಪ್ರದರ್ಶನ ಮಾಡಲಾಗಿತ್ತು ಪುಟಾಣಿ ಮಕ್ಕಳಿಂದ ಪ್ಯಾಷನ್ ಶೋ, ಸಂಕ್ರಾಂತಿ ಸುಗ್ಗಿಯ ಸೊಬಗನ್ನು ಬಿಂಬಿಸುವ ಗೀತೆಗಳಿಗೆ ನೃತ್ಯ ಸಂಯೋಜನೆ ಆಕರ್ಷಕವಾಗಿತ್ತು.

ಕಾರ್ಯಕ್ರಮಕ್ಕೆ ಮುಖ್ಯ ಅಥತಿಯಾಗಿ ಬಾಗವಹಿಸಿ ಮಾತನಾಡಿದ ಕಸಾಪ ಜಿಲ್ಲಾಧ್ಯಕ್ಷ ಡಾ.ಕೋಡಿರಂಗಪ್ಪ ಚಿಕ್ಕಬಳ್ಳಾಪುರ ನಗರದ ಹೃದಯ ಬಾಗದಲ್ಲಿ ಶಾಲೆಯನ್ನ ತೆರೆದು ನೂರಾರು ವಿದ್ಯಾರ್ಥಿಗಳಿಗೆ ವಿದ್ಯಾಬ್ಯಾಸ ಮಾಡುತ್ತಿರುವ ಹೆನ್ರಿ ಪ್ರಸನ್ನ ಕುಮಾರ್ ತಮ್ಮ ಶಾಲೆಯಲ್ಲಿ ಸಂಕ್ರಾಂತಿ ಸುದ್ದಿಯನ್ನ ಅನಾವರಣಗೊಳಿಸಿ ಎಲ್ಲ ಮಕ್ಕಳು ಮತ್ತು ಪೋಷಕರಿಗೆ ಸಂಕ್ರಾಂತಿಯ ಸೊಗಡನ್ನ ಪರಿಚಯಿಸುತಿದ್ದಾರೆ. ಸಂಕ್ರಾಂತಿ ಹೊಸ ಶಕೆಯನ್ನ ಉಂಟುಮಾಡುತ್ತದೆ ರೈತರು ಬೆಳೆದ ಬೆಳೆಗಳೆ ಈ ಹಬ್ಬ ಸೊಬಗು ನೀಡುತ್ತದೆ ಎಳ್ಳು ಬೆಲ್ಲದ ಜತೆ ಕೊಬ್ಬು ಗೆಣಸು ಸಿಹಿ ಹಂಚಿ ದೇಶದ ಸಂಪ್ರಧಾಯ ಉಳಿಸುವ ಎಲ್ಲ ಆಚಾರ ವಿಚಾರಗಳನ್ನ ನಾವೆಲ್ಲ ತಿಳಿಯೋಣ ಮುಂದಿನ ಪೀಳಿಗೆಗೂ ತಿಳಿಸೋಣ ಎಂದು ಶುಭ ಹಾರೈಸಿದರು.

ವೇದಿಕೆಯಲ್ಲಿ ಕೆಜೆವಿಎಸ್ ಜಿಲ್ಲಾಧ್ಯಕ್ಷ ಕೆ.ಎಂ. ರೆಡ್ಡಪ್ಪ, ಹೋಟೆಲ್ ರಾಮಣ್ಣ,ಶಿಕ್ಷಣ ಇಲಾಖೆಯ ಮುರುಳಿ,ಶಾಲೆಯ ಅಧ್ಯಕ್ಷ ಹೆನ್ರಿ ಪ್ರಸನ್ನ ಕುಮಾರ್, ಪ್ರಾಂಶುಪಾಲೆ ಭಾಗ್ಯ ಮೇರಿ, ಸಿ.ಆರ್.ಪಿ ನಾಗೇಶ್ ಶಾಲಾ ಸಿಬ್ಬಂದಿ ಪೋಷಕರು ಮತ್ತು ಇತರರು ಉಪಸ್ಥಿತರಿದ್ದರು.

# ಮೈಸೂರು ಕೇಂದ್ರ ಕಾರಾಗೃಹಕ್ಕೆ ಡಾ.ಟಿ.ಶ್ಯಾಮ್ ಭಟ್ ಭೇಟಿ

**ಮೈಸೂರು:** ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷ ಡಾ.ಟಿ ಶ್ಯಾಮ್ ಭಟ್ ಅವರು ಇಂದು ಮೈಸೂರಿನ ಕೇಂದ್ರ ಕಾರಾಗೃಹಕ್ಕೆ ಭೇಟಿ ನೀಡಿ ಕೈದಿಗಳ ಜೊತೆ ಸಂವಾದ ನಡೆಸಿದರು.

ಇತ್ತೀಚೆಗೆ ಮೈಸೂರಿನ ಕಾರಾಗೃಹದಲ್ಲಿ ಎಸೆನ್ಸ್ ಸೇವನೆ ಮಾಡಿ ಮೂರು ಜನ ಕೈದಿಗಳು ಸಾವನ್ನಪ್ಪಿದ್ದರು. ಈ ಪ್ರಕರಣ ಸಂಬಂಧ ಇಂದು ಮೈಸೂರಿನ ಕೇಂದ್ರ ಕಾರಾಗೃಹಕ್ಕೆ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷ ಡಾ.ಟಿ ಶ್ಯಾಮ್ ಭಟ್ ಭೇಟಿ ನೀಡಿದ್ದಾರೆ.

ಅಧ್ಯಕ್ಷ ಶ್ಯಾಮ್ ಭಟ್ ಗೆ ಸದಸ್ಯ ಎಸ್.ಕೆ. ವೆಂಟಿಗೋಡಿ ಸಾಥ್ ನೀಡಿದ್ದು ಕಾರಾಗೃಹದ ಅಧೀಕ್ಷಕ ಪಿಎಸ್ ರಮೇಶ್ ಮತ್ತು ಸಿಬ್ಬಂದಿಗಳು ಅವರನ್ನು ಸ್ವಾಗತಿಸಿದರು. ಕಾರಾಗೃಹದಲ್ಲಿ ಜೈಲಿನ ಕುಂದುಕೊರತೆಗಳ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಡಾ.ಟಿ.ಶ್ಯಾಮ್ ಭಟ್ ಕೈದಿಗಳ ಜೊತೆ ಸಂವಾದ ನಡೆಸಿದರು. ಇನ್ನು ಜೈಲಿನ ಒಳಗಡೆಗೆ ಮಾಧ್ಯಮ ಪ್ರತಿನಿಧಿಗಳ ಒಳ ಪ್ರವೇಶಕ್ಕೆ ಅಧಿಕಾರಿಗಳು ಅವಕಾಶ ಮಾಡಿಕೊಡಲಿಲ್ಲ ಎನ್ನಲಾಗಿದೆ.








ವಿಜಯಪುರಜಿಲ್ಲೆಕೊಲ್ಹಾರ ಪಟ್ಟಣದಲ್ಲಿ ಶ್ರೀ ಸಿದ್ದು ನ್ಯಾಮಗೌಡ ಸೌಹಾರ್ದ ಸಹಕಾರಿ ಸಂಘದ 5ನೇ ಶಾಖೆಯನ್ನು ಸಚಿವ ಶಿವಾನಂದ ಎಸ್ ಪಾಟೀಲ್ಅವರುಉದ್ಘಾಟನೆ ಮಾಡಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕರಾದಆನಂದ ನ್ಯಾಮಗೌಡ ಮಾಜಿ ಸಚಿವಎಸ್. ಕೆ. ಬೆಳ್ಳುಬ್ಬಿ ಹಾಗೂ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯಕಲ್ಲುದೇಸಾಯಿಕಾಂಗ್ರೆಸ್ ಬ್ಲಾಕ್ಅಧ್ಯಕ್ಷರಫೀಕ್ ಪಕಾಲಿ ಎಮ್. ಆರ್. ಕಲಾದಗಿ ಹಾಗೂ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಪುಟಾಣಿ ಮಕ್ಕಳಿಂದ ನೃತ್ಯ, ಫ್ಯಾಷನ್ ಶೋ ಪ್ರದರ್ಶನ

**ಚಿಕ್ಕಬಳ್ಳಾಪುರ:** ನಗರದ ಪ್ರತಿಷ್ಠಿತ ಶಾಲೆಗಳಲ್ಲಿ ಒಂದಾದ ಪ್ರೆಸಿಡೆನ್ಸಿ ಶಾಲೆಯ ವಾರ್ಷಿಕ ಸಾಲ್ಸಾ ನೃತ್ಯ ಕಾರ್ಯಕ್ರಮ ಭಾನುವಾರ ನಗರದ ಹರ್ಷೋದಯ ಕಲ್ಯಾಣ ಮಂಟಪದಲ್ಲಿ ನಡೆಯಿತು.

ಶಾಲೆಯ ಮಕ್ಕಳು ವಿವಿಧ ರೀತಿಯ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದರು. ಇದಲ್ಲದೇ ಶಾಲೆಯ ಪುಟಾಣಿ ಮಕ್ಕಳು ಹಾಡುಗಳಿಗೆ ನೃತ್ಯ,ಫ್ಯಾಷನ್ ಶೋ ಪ್ರದರ್ಶಿಸಿ ಎಲ್ಲರ ಮನ ಗೆದ್ದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ರಯಾನ್ ಫೌಂಡೇಶನ್ ಅಧ್ಯಕ್ಷ ಬಿ.ಎಸ್. ರಫೀ ಉಲ್ಲಾ, ವಕೀಲ ಸುಬ್ರಹ್ಮಣಿ, ಸಿ.ಆರ್.ಪಿ ಶ್ರೀನಿವಾಸ್ ಹಾಗೂ ಶಾಲೆಯ ಹಳೆ ವಿದ್ಯಾರ್ಥಿನಿ ಯಶಸ್ವಿನಿ ಭಾಗವಹಿಸಿದ್ದರು.

ಶಾಲೆಯ ವತಿಯಿಂದ ಅಥಿತಿಗಳಿಗೆ ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು.

ಈ ವೇಳೆ ಬಿ.ಎಸ್.ರಫೀ ಉಲ್ಲಾ ಮಾತನಾಡಿ ಮೂವತ್ತು ವರ್ಷಗಳ ಇತಿಹಾಸ ಹೊಂದಿರುವ ಈ ಶಾಲೆಯಲ್ಲಿ ಹಲವಾರು ಮಕ್ಕಳು ಶಿಕ್ಷಣ ಪಡೆದು ಉನ್ನತ ಹುದ್ದೆಗಳನ್ನು ಅಲಂಕರಿಸಿದ್ದಾರೆ,ನಾನು ಕೂಡ ಇದೇ ಶಾಲೆಯಲ್ಲಿ ಶಿಕ್ಷಣ ಪಡೆದಿದ್ದೇನೆ,ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ಜತೆಗೆ ಪಠ್ಯೇತರ ಚಟುವಟಿಕೆಗಳು ಕೂಡ ನಿರಂತರವಾಗಿ ಆಯೋಜಿಸಿ ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆ ಹೊರತರಲಾಗುತ್ತಿದೆ ಎಂದು ತಿಳಿಸಿದರು.ಶಾಲೆಯ ಅಧ್ಯಕ್ಷೆ ನ್ಯಾಮತ್.ಬಿ ತಮ್ಮ ಜೀವನವನ್ನು ಶಿಕ್ಷಣಕ್ಕಾಗೆ ಮುಡಿಪಾಗಿಟ್ಟಿದ್ದಾರೆ.

ಶಾಲೆಯಲ್ಲಿ ಮಕ್ಕಳಿಗಾಗಿ ಹತ್ತು ಹಲವು ಕಾರ್ಯಕ್ರಮಗಳನ್ನು ರೂಪಿಸುತ್ತಿದ್ದು ಮಕ್ಕಳಿಗೆ ವ್ಯಕ್ತಿತ್ವ ರೂಪಿಸಿಕೊಳ್ಳಲು ಸಹಕಾರಿಯಾಗಲಿದೆ.ಪ್ರತಿ ವರ್ಷ ಶಾಲೆಯಲ್ಲಿ ಉತ್ತಮ ಫಲಿತಾಂಶ ಬರುತ್ತಿದೆ ಆಡಳಿತ ಮಂಡಳಿಗೆ ಅಭಿನಂದನೆ ತಿಳಿಸುತ್ತೇನೆ ಎಂದರು.




ಶಾಲೆಯ ಅಧ್ಯಕ್ಷೆ ನ್ಯಾಮತ್.ಬಿ ಮಾತನಾಡಿ ಮಕ್ಕಳ ಉತ್ತಮ ಬೆಳವಣಿಗೆಯಲ್ಲಿ ಶಿಕ್ಷಕರ ಜತೆ ಪೋಷಕರ ಪಾತ್ರ ಮುಖ್ಯ, ಪೋಷಕರು ತಮ್ಮ ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಹೊರ ತರಲು ಸಹಕಾರ ನೀಡಬೇಕು. ಶಾಲೆಯಲ್ಲಿ ಮಕ್ಕಳಿಗಾಗಿ ವಿಶೇಷ ಕಾರ್ಯಕ್ರಮಗಳು ಆಯೋಜಿಸಿಲಾಗುತ್ತಿದ್ದು ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ ಎಂದರು.

ಹಿರಿಯ ವಕೀಲರಾದ ಸುಬ್ರಹ್ಮಣಿ, ಸಿ.ಆರ್.ಪಿ ಶ್ರೀನಿವಾಸ್ ಶಿಕ್ಷಣದ ಹಾಗೂ ಮಕ್ಕಳ ಉತ್ತಮ ಬೆಳವಣಿಗೆಯಲ್ಲಿ ಶಿಕ್ಷಕರ ಪಾತ್ರ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಳ ಪ್ರಭಾವ ಸಂಭಂದಪಟ್ಟಾಗಿ ವಿವರಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಆಡಳಿತ ಸಿಬ್ಬಂದಿಗಳಾದ,ಮುಖ್ತಾರ್ ಅಹ್ಮದ್,ಹರೀಶ್,ರಮೇಶ್ ಬಾಬು, ಅರ್ಷಿಯಾ, ಅತಿಯಾ, ರುಖಿಯಾ,ಮೋಹನ್ ಬಾಬು, ಚಂದ್ರಶೇಖರ್, ಹೇಮಾವತಿ, ಅನಿತ,ಸಬೀಹಾ, ರಮನಮ್ಮ, ಜಬೀನ,ಪಾಷ ಮತ್ತು ಇತರರು ಉಪಸ್ಥಿತರಿದ್ದರು.

# ದೆಹಲಿ ರೈತರ ಹೋರಾಟ ಬೆಂಬಲಿಸಿ ಜ.26 ರಂದು ಟ್ರ್ಯಾಕ್ಟರ್ ರ್‍ಯಾಲಿ: ಕುರುಬೂರು ಶಾಂತಕುಮಾರ್

**ಮೈಸೂರು:** ದೆಹಲಿಯಲ್ಲಿ ನಡೆಯುತ್ತಿರುವ ಹೋರಾಟ ಬೆಂಬಲಿಸಿ ಜನವರಿ 26 ರಂದು ದೇಶಾದ್ಯಂತ ಜಿಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಟ್ರ್ಯಾಕ್ಟರ್ ರ್‍ಯಾಲಿ ನಡೆಸಲು ಕರೆ ನೀಡಲಾಗಿದೆ. ಅದರಂತೆ ರಾಜ್ಯದಲ್ಲಿಯೂ ತಾಲ್ಲೂಕು ಜಿಲ್ಲಾ ಮಟ್ಟದಲ್ಲಿ ಟ್ರ್ಯಾಕ್ಟರ್ ರ್‍ಯಾಲಿ ನಡೆಸಲಾಗುವುದು ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ತಿಳಿಸಿದರು.

ಸೋಮವಾರ ಮೈಸೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಕುರುಬೂರು ಶಾಂತಕುಮಾರ್, ದೆಹಲಿ ಗಡಿಯಲ್ಲಿ ದೇಶದ ರೈತರ ಹಿತಕ್ಕಾಗಿ ಹೋರಾಡುತ್ತಿದ್ದ ದಲ್ಲೆವಾಲಾ 53 ದಿನಗಳ ಉಪವಾಸ ಕೈ ಬಿಟ್ಟು ವೈದ್ಯಕೀಯ ಚಿಕಿತ್ಸೆಗೆ ಒಪ್ಪಿಗೆ ನೀಡಿರುವುದು ಸ್ವಾಗತಾರ್ಹ ಬೆಳವಣಿಗೆ. ದೇಶದ ರೈತರೆಲ್ಲ ಅವರ ಪ್ರಾಣದ ಬಗ್ಗೆ ಆತಂಕಗೊಂಡಿದ್ದರು. ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತ್ರಿ, ಕಾನೂನು ಜಾರಿಗಾಗಿ ಒತ್ತಾಯಿಸಿ ಸಂಯುಕ್ತ ಕಿಸಾನ್ ಮೋರ್ಚ ರಾಜಕೀಯೇತರ ಸಂಘಟನೆ ರಾಷ್ಟ್ರೀಯ ಸಂಚಾಲಕ ಜಗಜಿತ್ ಸಿಂಗ್ ಧಲ್ಲೆವಾಲಾ 53 ದಿನದ ಉಪವಾಸ ಸತ್ಯಾಗ್ರಹ ನಿಲ್ಲಿಸಿ ವೈದ್ಯಕೀಯ ಚಿಕಿತ್ಸೆಗೆ ಸಮ್ಮತಿ ಸೂಚಿಸಿದ್ದಾರೆ. ಆದರೆ ಬೇಡಿಕೆ ಈಡೆರುವ ತನಕ ಚಳುವಳಿ ಮುಂದುವರಿಯುತ್ತದೆ ಎಂದು ತಿಳಿಸಿದ್ದಾರೆ ಎಂದರು.

ಕೇಂದ್ರ ಸರ್ಕಾರದ ಕೃಷಿ ಇಲಾಖೆಯ ಜಂಟಿ ಕಾರ್ಯದರ್ಶಿ ಹಾಗೂ ಪಂಜಾಬ್ ಸರ್ಕಾರದ ಮುಖ್ಯ ಕಾರ್ಯದರ್ಶಿ, ಪೊಲೀಸ್ ಮಹಾ ನಿರ್ದೇಶಕರು ಅಧಿಕಾರಿಗಳ ತಂಡ ಚಳುವಳಿ ನಡೆಯುತ್ತಿರುವ ಕನೋರಿ ಬಾರ್ಡರ್ ಗೆ ಮೂರು ದಿನಗಳ ಹಿಂದೆ ಭೇಟಿ ನೀಡಿದ್ದರು. ಫೆಬ್ರವರಿ 14 ರಂದು ಚಂಡಿಗಢದಲ್ಲಿ ರೈತರ ಸಮಸ್ಯೆಗಳಿಗೆ ಸಭೆ ನಡೆಸಿ ಸಮಸ್ಯೆ ಬಗೆಹರಿಸುವ ಭರವಸೆಯ ಕೇಂದ್ರ ಸರ್ಕಾರದ ಲಿಖಿತ ಪತ್ರ ನೀಡಿ 3 ಗಂಟೆಗಳ ಕಾಲ ಚರ್ಚಿಸಿದ ನಂತರ ತೀರ್ಮಾನ ಕೈಗೊಳ್ಳಲಾಗಿದೆ. ಉಪವಾಸನಿರತ ದಲ್ಲೆವಾಲಾ ನಿರ್ಧಾರ ರೈತರ ಹೋರಾಟದ ಶಕ್ತಿ ಹೆಚ್ಚಿಸಿದೆ. ಕಳೆದ ಮೂರು ದಿನಗಳಿಂದ 124 ರೈತರು ದಲ್ಲೆವಾಲಾ ಉಪವಾಸ ಬೆಂಬಲಿಸಿ ನಾವು ಪ್ರಾಣ ತ್ಯಾಗಕ್ಕೆ ಸಿದ್ದ ಎಂದು ಉಪವಾಸ ಆರಂಭಿಸಿದರು. ಅವರು ಸಹ ಉಪವಾಸವನ್ನು ನಿನ್ನೆಯಿಂದ ಕೈಬಿಟ್ಟಿದ್ದಾರೆ. ಆದರೆ ಸಮಸ್ಯೆ ಬಗೆಹರಿಯುವ ತನಕ ಹೋರಾಟ ಮುಂದುವರಿಯುತ್ತದೆ.



ಜನವರಿ 26 ರಂದು ದೇಶಾದ್ಯಂತ ಜಿಲ್ಲಾ ತಾಲೂಕು ಕೇಂದ್ರಗಳಲ್ಲಿ ಟ್ರ್ಯಾಕ್ಟರ್ ರಾಲಿ ನಡೆಸಲು ಕರೆ ನೀಡಲಾಗಿದೆ. ಅದರಂತೆ ರಾಜ್ಯದಲ್ಲಿಯೂ ತಾಲೂಕು ಜಿಲ್ಲಾ ಮಟ್ಟದಲ್ಲಿ ಟ್ರ್ಯಾಕ್ಟರ್ ರ್‍ಯಾಲಿ ನಡೆಸಲಾಗುವುದು ಎಂದು ಕುರುಬೂರು ಶಾಂತಕುಮಾರ್.

ವಿಶ್ವಕಪ್ ಖೋ ಖೋ ಪಂದ್ಯದಲ್ಲಿ ವಿಶ್ವ ಕಪ್ ಗೆದ್ದು ಜಯಭೇರಿ ಬಾರಿಸಿದ ಪುರುಷ ಮಹಿಳೆಯರ ತಂಡಕ್ಕೆ ಅಭಿನಂದನೆ ಸಲ್ಲಿಸುತ್ತೇವೆ. ಮಹಿಳೆಯರ ಭಾರತ ತಂಡದಲ್ಲಿ ಉತ್ತಮ ಆಟ ಆಡುವ ಮೂಲಕ ಪ್ರಶಸ್ತಿಗೆ ಭಾಜನರಾಗಿರುವ ನಮ್ಮ ರಾಜ್ಯದ ಹಿರಿಮೆ ಹೆಚ್ಚಿಸಿದ ನಮ್ಮ ಊರಿನ ಕು ಚೈತ್ರಳಿಗೆ ಅಭಿನಂದನೆ ಸಲ್ಲಿಸುತ್ತೇನೆ. ರಾಜ್ಯ ಸರ್ಕಾರ ಅಭಿನಂದನೆ ಹೇಳಿದರೆ ಸಾಲದು. ಇಂಥಹ ಕ್ರೀಡಾಪಟುಗಳಿಗೆ ವಿಶೇಷ ಪ್ರೋತ್ಸಾಹ ನೀಡಲು ಮುಂದಾಗಬೇಕು. ಈಗಾಗಲೇ ಮಹಾರಾಷ್ಟ್ರ ಸರ್ಕಾರ ಅಲ್ಲಿನ ಕ್ರೀಡಾಪಟುಗೆ 3 ಕೋಟಿ ರೂಪಾಯಿ ಪ್ರೋತ್ಸಾಹ ಧನ ನೀಡುವ ಘೋಷಣೆ ಮಾಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈ ಬಗ್ಗೆ ವಿಶೇಷ ಗಮನ ಹರಿಸಬೇಕು ಎಂದು ಒತ್ತಾಯಿಸುತ್ತೇನೆ. ಟಿ ನರಸೀಪುರ ತಾಲೂಕಿನ ಸರ್ವ ಸಂಘ ಸಂಸ್ಥೆಗಳು ಸಾರ್ವಜನಿಕರಿಂದ ನಾಳೆ ಕು ಚೈತ್ರಳನ್ನು ಅಭೂತಪೂರ್ವ ಸ್ವಾಗತ ನೀಡಿ ಅಭಿನಂದನಾ ಸಮಾರಂಭ ನಡೆಸಲಾಗುತಿದೆ ಎಂದು ಕುರುಬೂರು ಶಾಂತಕುಮಾರ್ ತಿಳಿಸಿದರು.

ಪತ್ರಿಕಾ ಗೋಷ್ಠಿಯಲ್ಲಿ ದೇವನೂರು ವಿಜಯೇಂದ್ರ ಸಾತಗಳ್ಳಿ ಬಸವರಾಜು, ಹಳ್ಳಿಕೆರೆಹುಂಡಿ ಪ್ರಭುಸ್ವಾಮಿ, ಕುರುಬೂರ್ ಪ್ರದೀಪ್, ವಾಜಮಂಗಲ ನಾಗೇಂದ್ರ ಇದ್ದರು.

# ಜೆಡಿಎಸ್ ಬೆಂಬಲಿತ ನಿರ್ದೇಶಕರಿಗೆ ಜಯ

**ಶಿಡ್ಲಘಟ್ಟ:** ತಾಲ್ಲೂಕು ಪ್ರಾಥಮಿಕ ಕೃಷಿ ಮತ್ತು ಗ್ರಾಮೀಣ ಅಭಿವೃದ್ದಿ ಬ್ಯಾಂಕ್(ಪಿ.ಎಲ್.ಡಿ ಬ್ಯಾಂಕ್)ನ ಆಡಳಿತ ಮಂಡಳಿಗೆ ಐದು ವರ್ಷಗಳ ಅವದಿಗೆ ನಿರ್ದೇಶಕರ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ 9 ಮಂದಿ ಜೆಡಿಎಸ್ ಬೆಂಬಲಿತ ನಿರ್ದೇಶಕರು ಗೆದ್ದು ಬೀಗಿದ್ದಾರೆ. 5 ಸ್ಥಾನಗಳಿಗೆ ಕಾಂಗ್ರೆಸ್ ತೃಪ್ತಿಪಡುವಂತಾಗಿದೆ.




ಆನೂರು ಪರಿಶಿಷ್ಟ ಪಂಗಡ ಮೀಸಲು ಕ್ಷೇತ್ರದಿಂದ ಅವಿರೋಧ ಆಯ್ಕೆಯಾಗಿದ್ದ ಬಂಕ್ ಮುನಿಯಪ್ಪ ಸೇರಿದಂತೆ 9 ಕ್ಷೇತ್ರಗಳಲ್ಲಿ ಜೆಡಿಎಸ್ ಬೆಂಬಲಿತರು ವಿಜಯ ಸಾಧಿಸುವ ಮೂಲಕ ಪಿ.ಎಲ್.ಡಿ. ಬ್ಯಾಂಕ್‌ನ ಅಧಿಕಾರ ಹಿಡಿಯುವಷ್ಟು ಸಂಖ್ಯಾಬಲವನ್ನು ಜೆಡಿಎಸ್ ದಕ್ಕಿಸಿಕೊಂಡಿದೆ.

ಶಿಡ್ಲಘಟ್ಟ ನಗರ ಬಿಸಿಎಂ ಬಿ ವರ್ಗ ಮೀಸಲು ಕ್ಷೇತ್ರ–ಎಂ.ಮುರಳಿ, ಆನೂರು ಪರಿಶಿಷ್ಟ ಪಂಗಡ ಮೀಸಲು ಕ್ಷೇತ್ರ–ಬಂಕ್ ಮುನಿಯಪ್ಪ, ಅಬ್ಲೂಡು ಸಾಮಾನ್ಯ ಕ್ಷೇತ್ರ–ಚಂದ್ರನಾಥ್, ಮೇಲೂರು ಸಾಮಾನ್ಯ ಕ್ಷೇತ್ರ–ಎಂ.ಜಿ.ಸುರೇಶ್, ಜಂಗಮಕೋಟೆ ಸಾಮಾನ್ಯ ಕ್ಷೇತ್ರ–ಕಾಳನಾಯಕನಹಳ್ಳಿ ಕೆ,ಎಂ, ಭಿಮೇಶ್ ಗೆದ್ದು ಬೀಗಿದ್ದಾರೆ.

ದಿಬ್ಬೂರಹಳ್ಳಿ ಸಾಮಾನ್ಯ ಕ್ಷೇತ್ರ–ಡಿ.ಶ್ರೀನಿವಾಸ್, ದೊಡ್ಡತೇಕಹಳ್ಳಿ ಸಾಮಾನ್ಯ ಕ್ಷೇತ್ರ–ಡಿ.ಎನ್.ರಾಮಚಂದ್ರ, ವೈ.ಹುಣಸೇನಹಳ್ಳಿ ಮಹಿಳಾ ಮೀಸಲು ಕ್ಷೇತ್ರ–ಭಾಗ್ಯಮ್ಮ, ಗಂಜಿಗುಂಟೆ ಸಾಮಾನ್ಯ ಕ್ಷೇತ್ರ–ಎಂ.ಪಿ.ರವಿ, ಸಾದಲಿ ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರ–ನರಸಿಂಹಪ್ಪ ವಿಜಯದ ಮಾಲೆ ಧರಿಸಿದ್ದಾರೆ.

ಇನ್ನು ಚೀಮಂಗಲ ಮಹಿಳಾ ಮೀಸಲು ಕ್ಷೇತ್ರ–ಸುನಂದಮ್ಮ, ಪಲಿಚೇರ್ಲು ಹಿಂದುಳಿದ ವರ್ಗ ಎ ಮೀಸಲು ಕ್ಷೇತ್ರ–ಡಿ.ವಿ.ವೆಂಕಟೇಶ್, ಮಳಮಾಚನಹಳ್ಳಿ ಸಾಮಾನ್ಯ ಕ್ಷೇತ್ರ–ಎಚ್.ಕೆ.ಮಂಜುನಾಥ್ ಹಾಗೂ ಸಾಲ ಪಡೆಯದ ಮತ ಕ್ಷೇತ್ರದಿಂದ ಕೆ.ಪಿ.ಕಿಶೋರ್ ಜಯಗಳಿಸಿದ್ದಾರೆ.

ಲಾಟರಿಯ ಗೆಲುವು ,ವೈ.ಹುಣಸೇನಹಳ್ಳಿ ಮಹಿಳಾ ಮೀಸಲು ಕ್ಷೇತ್ರದಿಂದ ಸ್ಪರ್ದಿಸಿದ್ದ ಭಾಗ್ಯಮ್ಮ ಹಾಗೂ ಅನುಸೂಯಮ್ಮ ತಲಾ 50 ಮತಗಳನ್ನು ಪಡೆದಿದ್ದರಿಂದ ಲಾಟರಿ ಹಾಕಿದ್ದು ಲಾಟರಿಯಲ್ಲಿ ಜೆಡಿಎಸ್‌ನ ಭಾಗ್ಯಮ್ಮಗೆ ವಿಜಯ ಒಲಿದು ಬಂದಿದೆ. ಇನ್ನು ಆನೂರು ಪರಿಶಿಷ್ಟ ಪಂಗಡ ಮೀಸಲು ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದಿಂದ ಅಭ್ಯರ್ಥಿಗಳನ್ನೆ ಹಾಕದ್ದರಿಂದ ಜಯದ ಮಾಲೆ ಜೆಡಿಎಸ್ ಬೆಂಬಲಿತ ಅಭ್ಯರ್ಥಿಬಂಕ್ ಮುನಿಯಪ್ಪಗೆ ಬಿದ್ದಿದ್ದು ಅವಿರೋಧ ಆಯ್ಕೆಯಾಗುವಂತಾಯಿತು.

ಒಂದು ಮತದ ಅಂತರ

ಸಾದಲಿ ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರದಿಂದ ಸ್ಪರ್ಧಿಸಿದ್ದ ಜೆಡಿಎಸ್ ಬೆಂಬಲಿತ ನರಸಿಂಹಪ್ಪ ತನ್ನ ಎದುರಾಳಿ ಚಿಕ್ಕವೆಂಕಟಪ್ಪ ವಿರುದ್ದ ಕೇವಲ 1 ಮತದ ಅಂತರದಿಂದ ವಿಜಯದ ಮಾಲೆ ಧರಿಸಿದ್ದಾರೆ.

ಇನ್ನು ಮತ್ತೊಮ್ಮೆ ಅದೃಷ್ಟ ಪರೀಕ್ಷೆ ನಡೆಸಿ ಚುನಾವಣೆಗೆ ಇಳಿದಿದ್ದವರ ಪೈಕಿ ಬ್ಯಾಂಕ್‌ನ ಮಾಜಿ ಅಧ್ಯಕ್ಷ ಭೀಮೇಶ್, ದೊಗರನಾಯಕನಹಳ್ಳಿ ವೆಂಕಟೇಶ್, ಮಾದೇನಹಳ್ಳಿ ರವಿ, ಜೆಡಿಎಸ್ ಬೆಂಬಲಿತ ಆನೂರು ಕ್ಷೇತ್ರದ ಬಂಕ್ ಮುನಿಯಪ್ಪ, ಮೇಲೂರು ಕ್ಷೇತ್ರದ ಸುರೇಶ್ ಗೆಲುವು ಸಾದಿಸಿದ್ದಾರೆ.

# ಚಿತ್ರಾವತಿ ಜಾತ್ರೆ: ಅಂಗಡಿಗಳ ಸುಂಕ ವಸೂಲಾತಿ ಹಕ್ಕು ಅಧಿಕಾರಿಗಳಿಗೆ

**ಚಿಕ್ಕಬಳ್ಳಾಪುರ:** ಇದೇ ತಿಂಗಳ 28 ರಿಂದ ಫೆಬ್ರವರಿ 6ರವರಿಗೆ ಚಿತ್ರಾವತಿ ಶ್ರೀ ಸುಬ್ರಮಣೇಶ್ವರಸ್ವಾಮಿ ಜಾತ್ರಾ ಮಹೋತ್ಸವ ನಡೆಯಲಿದೆ 2024–25ನೇ ಸಾಲಿನಲ್ಲಿ 8–10 ದಿನಗಳ ಕಾಲ ನಡೆಯುವ ಚಿತ್ರಾವತಿ ಜಾತ್ರೆ ಕಾಲದಲ್ಲಿ ಸೇರುವ ಅಂಗಡಿ, ವಗ್ಯೆರೆಗಳ ಮೇಲೆ ಕೆಳಗಿನ ಷೆಡ್ಯೂಲ್ 'ಬಿ'ನ ರೀತಿಯಲ್ಲಿ ಸುಂಕವನ್ನು ವಸೂಲಿ ಮಾಡುವ ಹಕ್ಕನ್ನು ಚಿಕ್ಕಬಳ್ಳಾಪುರ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನೀಡಲಾಗಿದೆ.

ಅದರ ಪ್ರಕಾರ ನಡೆದ ಹರಾಜಿನಲ್ಲಿ ಸವಾಲುದಾರರು ಕ್ಲುಪ್ತ ಸಮಯದಲ್ಲಿ ಹಾಜರಿದ್ದು ಹರಾಜಿನಲ್ಲಿ ಭಾಗವಹಿಸಿದ ಹರಾಜುದಾರರು ಸದರಿ ಹಕ್ಕನ್ನು ಪಡೆಯತಕ್ಕದ್ದು, ಸದರಿ ಹಕ್ಕನ್ನು ಪಡೆದುಕೊಳ್ಳುವಅಂತಿಮ ಸವಾಲುದಾರರನ್ನು ಹರಾಜಿನ ನಂತರ ಕೂಡಲೇ ಪೂರ್ತಿ ಮೊಬಲಗನ್ನು ಪಾವತಿ ಮಾಡತಕ್ಕದ್ದು.ತಪ್ಪಿದಲ್ಲಿ ಸದರಿಯವರ ಮುಂಗಡ ಹಣವನ್ನು ತಾಲ್ಲೂಕು ಪಂಚಾಯಿತಿಗೆ ಮುಟ್ಟುಗೋಲು ಹಾಕಿಕೊಂಡು ಸದರಿ ಹಕ್ಕನ್ನು ಮರು ಹರಾಜು ಮಾಡಿ ಅದರಿಂದ ಉಂಟಾಗುವ ನಷ್ಟಕ್ಕೆ ಮೊದಲನೇ ಸವಾಲುದಾರರನ್ನು ಗುರಿ ಮಾಡಲಾಗುತ್ತದೆ ಎಂದು ಇಒ ಮಂಜುನಾಥ್ ತಿಳಿಸದರು.

ಸದರಿ ಸವಾಲುದಾರರಿಗೆ ಜಾತ್ರೆ ಸಮಯದಲ್ಲಿ ಯಾವುದೇ ಕಾರಣದಿಂದ ನಷ್ಟ ಉಂಟಾದಲ್ಲಿ ಯಾವ ಪರಿಹಾರವೂ ನೀಡಲಾಗುವುದಿಲ್ಲ. ಜಾತ್ರೆಯ ಕಾಲದಲ್ಲಿ ಸುಂಕವನ್ನು ವಸೂಲು ಮಾಡುವ ಬಗ್ಗೆ ಇಲಾಖೆಯವರು ತನಿಖೆ ಮಾಡುವ ಸಂಪೂರ್ಣಅಧಿಕಾರವನ್ನು ಹೊಂದಿರುತ್ತಾರೆ.

ಅಂತಿಮ ಸವಾಲುದಾರರು ಷೆಡ್ಯೂಲ್–'ಬಿ'ನಲ್ಲಿ ಕಾಣಿಸಿರುವ ದರಗಳಿಗಿಂತಲೂ ಹೆಚ್ಚು ಸುಂಕ ವಸೂಲು ಮಾಡುವ ಹಕ್ಕಿರುವುದಿಲ್ಲ. ಹಾಗೇನಾದರೂ ವಸೂಲುಮಾಡಿದ ಸಂದರ್ಭದಲ್ಲಿ ಹರಾಜಿನಲ್ಲಿ ನೀಡಿರುವ ಹಕ್ಕು ಸಂಪೂರ್ಣವಾಗಿ ಕೂಡಲೇ ರದ್ದು ಮಾಡಲು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಅಧಿಕಾರ ಹೊಂದಿರುತ್ತಾರೆ. ಸದರಿ ಸವಾಲುದಾರರು ಹರಾಜು ನಿಯಮಗಳಿಗೆ ಬದ್ಧರಾಗಲು ಒಪ್ಪಂದಕ್ಕೆ ಸವಾಲು ಹಣ ರೂ. 50/– ರೂಪಾಯಿಗಳ ಮೌಲ್ಯದಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ಬರೆದುಕೊಡುವುದು,ಮತ್ತು ಚುನಾವಣಾ ಗುರುತಿನ ಚೀಟಿ/ಆಧಾರ್‌ನ ನಕಲು ನೀಡುವುದು, ತಪ್ಪಿದಲ್ಲಿ ಸವಾಲುದಾರರಿಗೆ ಯಾವ ಸೂಚನೆಯನ್ನು ನೀಡದೆ,ಹರಾಜನ್ನು ವಜಾ ಮಾಡಿ ಮತ್ತೊಮ್ಮೆ ಹರಾಜನ್ನು ಮಾಡಲಾಗುವುದು ಎಂದು ತಿಳಿಸಿದ್ದಾರೆ.

ದಿನಾಂಕ 03–02–2025 ಸೋಮವಾರ ಷಷ್ಠಿಯಂದು ಶ್ರೀ ಸುಬ್ರಮಣೇಶ್ವರ ಸ್ವಾಮಿಯವರ ಬ್ರಹ್ಮರಥೋತ್ಸವ ಏರ್ಪಡಿಸಲಾಗಿದ್ದು, ತಾಲ್ಲೂಕು ಪಂಚಾಯಿತಿಯಿಂದ ಪೂಜೆಗೆ ಒಡೆಯುವ ತೆಂಗಿನ ಕಾಯಿಗೆ ಜಾತ್ರೆಯಲ್ಲಿ ಸೇರುವ ವಿವಿಧ ಅಂಗಡಿಗಳ ಹಾಗೂ ಹೊಟೇಲ್‌ಗಳ ಮೇಲೆ ಸುಂಕ ವಸೂಲಿ ಹಕ್ಕು, ದೇವಸ್ಥಾನದ ಆವರಣದಲ್ಲಿ ಜಾತ್ರೆ ಕಾಲದಲ್ಲಿ ತಲೆ ಕೂದಲು ತಗೆಯುವುದರ ಸುಂಕ ವಸೂಲಿಹಕ್ಕು, ರಂಗಿನರಾಟೆ ಸುಂಕ ವಸೂಲಿ ಹಕ್ಕು, ವಾಹನಗಳ ಮೇಲಿನ ಸುಂಕ ವಸೂಲಿ ಹಕ್ಕು, ಎತ್ತಿನಗಾಡಿ (ರಾಸುಗಳ) ಮೇಲಿನ ಸುಂಕ ವಸೂಲಿ ಹಕ್ಕುಗಳನ್ನುಹರಾಜಿನಲ್ಲಿ ಪಡೆದ ಹಕ್ಕುದಾರರಿಗೆ ನೀಡಲಾಗುತ್ತದೆ ಎಂದು ತಿಳಿಸಿದರು.

# ಓಂ ಶಕ್ತಿ ಯತ್ರಾರ್ಥಿಗಳಿಗೆ ಉಚಿತ ಬಸ್ ಸೇವೆ




**ಆನೇಕಲ್:** ತಮಿಳುನಾಡಿನ ಮೆಲ್ ಮರವತ್ತೂರು ಓಂ ಶಕ್ತಿ ಅಮ್ಮನ್ನು ನಮ್ಮ ಸಂಸ್ಕೃತಿಯ ಪ್ರತಿಕವಾಗಿದ್ದು, ಓಂ ಶಕ್ತಿ ಮಾಲಧಾರಿ ವ್ರತಾಚರಣೆ ಮಾಡುವಂತ ಭಕ್ತರನ್ನು ಪಕ್ಷ ಜಾತಿ ಬೇದ ಭಾವವಿಲ್ಲದೆ ಲೋಕಕಲ್ಯಾಣಾರ್ಥವಾಗಿ ಪ್ರತಿಯೊಬ್ಬರಿಗೂ ತಾಯಿಯ ದರ್ಶನ ಭಾಗ್ಯವು ಕರುಣಿಸಬೇಕೆಂಬ ಸಂಕಲ್ಪವನ್ನು ಮಾಡಿಕೊಂಡಿದ್ದು ಅದರಂತೆ ಉಚಿತ ಬಸ್ ಸೇವೆಯನ್ನು ನೀಡಿದ್ದೇವೆ ಎಂದು ಸರ್ಜಾಪುರ ಗ್ರಾಮ ಪಂಚಾಯಿತಿ ಸದಸ್ಯ ಡಾ.ಎಸ್. ಮಂಜುನಾಥ್ ಸರ್ಜಾ ತಿಳಿಸಿದರು.

ಅವರು ಸರ್ಜಾಪುರ ಬಸ್ ನಿಲ್ದಾಣದಲ್ಲಿ ತಮಿಳುನಾಡಿನ ಮೇಲ್ ಮರವತ್ತೂರು ಓಂ ಶಕ್ತಿ ದೇವಲಾಯಕ್ಕೆ ತೆರಳುತಿರುವ ಯಾತ್ರಿಕರಿಗೆ ಶುಭ ಹಾರೈಸಿ ಮಾತನಾಡಿದರು.

ತಮಿಳುನಾಡಿನ ಮೆಲ್ ಮರವತ್ತೂರು ಓಂ ಶಕ್ತಿ ದೇವಲಯಕ್ಕೆ ಪ್ರತಿನಿತ್ಯ ಲಕ್ಷಾಂತರ ಸಂಖ್ಯೆಯಲ್ಲಿ ಭಕ್ತಾದಿಗಳು ತೆರಳಿ, ದೇವರನ್ನು ಕಾಣಿ ಪುನೀತರಾಗುತ್ತಾರೆ. ಭಕ್ತಿ ಪೂರ್ವಕವಗಿ ನಮಿಸಿದ್ದಲ್ಲಿ ಭಕ್ತಾರ ಇಷ್ಟರ್ಥಗಳನ್ನು ಈಡೇರಿಸುತ್ತಾಳೆ ಎಂಬ ಪ್ರತೀತಿಯು ಇದೆ. ಡಿಸೆಂಬರ್ ಮತ್ತು ಜನವರಿ ತಿಂಗಳಿನಲ್ಲಿ ದಕ್ಷಿಣ ಭಾರತದಾದ್ಯಂತ ಲಕ್ಷಾಂತರ ಸಂಖ್ಯೆಯಲ್ಲಿ ಭಕ್ತಾರು ಓಂ ಶಕ್ತಿ ಮಾಲೆಯನ್ನು ಧರಿಸಿ ಕಠಿಣ ವೃತವನ್ನು ಆಚರಿಸುತ್ತಾರೆ ಹಾಗಾಗಿ ಅಂತಹ ಭಕ್ತ ಸಮೂಹಗಳಿಗೆ ಉಪಕಾರಿಯಾಗಲಿ ಮತ್ತು ಸಮಸ್ತ ಲೋಕವು ಸನ್ಮಾಂಗಳದಿಂದ ಕೂಡಿರಲ್ಲಿ ಎಂಬಾ ಕಲ್ಪನೆಯೊಂದಿಗೆ ಬಸ್ ಸೇವೆಯನ್ನು ನೀಡಿದ್ದು ಮುಂದಿನ ದಿನಗಳಲ್ಲಿ ಇನ್ನಾಷ್ಟು ಕಾರ್ಯಗಳನ್ನು ಕೈಗೊಳ್ಳುತ್ತೇವೆ ಎಂದರು.

ಸರ್ಜಾಪುರ ಓಂ ಶಕ್ತಿ ಭಕ್ತ ಮಂಡಳಿಯ ಪಧಾಧಿಕಾರಿ ಅಮ್ಮಯ್ಯಮ್ಮ ಮಾತನಾಡಿ, ತಮಿಳುನಾಡಿನ ಓಂ ಶಕ್ತಿ ದೇವಾಲಯಕ್ಕೆ ತೆರಳಲು ಸಾಕಷ್ಟು ವೆಚ್ಚ ತಗಲುತ್ತಿದ್ದು ಈಗಾಗಲೇ ಈ ಭಾಗದಲ್ಲಿ ಬಡ ಮತ್ತು ಕೂಲಿ ಕಾರ್ಮಿಕರು ಪ್ರವಾಸ ಕೈಗೊಂಡಿದ್ದಾರೆ ಅವರಿಗೆ ಹೊರೆಯಾಗಬಾರದು ಎಂಬಾ ನಿಟ್ಟಿನಲ್ಲಿ ಮಂಜಣ್ಣನವರನ್ನು ಬಸ್ ವ್ಯವಸ್ಥೆ ಕಲ್ಪಿಸಿಕೊಡಿ ಎಂದು ಕೇಳಿಕೊಂಡಾಗ ಅವರು ನಮ್ಮಗೆ ಉಚಿತವಾಗಿ ಬಸ್ ವ್ಯವಸ್ಥೆಯನ್ನು ಮಾಡಿಕೊಟ್ಟಿದ್ದು ನಮ್ಮೆಲ್ಲರಿಗೂ ಸಂತಸದಾಯಕವಾದ ಸಂಗತಿಯಾಗಿದೆ ಅವರು ಮತ್ತು ಕುಟುಂಬಸ್ಥರಿಗೆ ದೇವರು ಒಳ್ಳಿತು ಮಾಡಲಿ ಎಂದು ಹಾರೈಸಿದರು.

ಇದೇ ವೇಳೆ ಓಂ ಶಕ್ತಿ ಭಕ್ತ ಮಂಡಳಿಯ ಪಧಾಧಿಕಾರಿಗಳಾದ ಪುಷ್ಪಮ್ಮ, ಲಕ್ಮೀ, ದೇವಮ್ಮ, ಗೀತಾ, ಭಾಗ್ಯ, ಚಂದ್ರಕಲಾ, ಶೃತಿ ಹಾಗೂ ಮತ್ತಿತ್ತರರು ಹಾಜರಿದ್ದರು.

# ಅಂಬೇಡ್ಕರ್ ಆದರ್ಶಗಳನ್ನು ಮೈಕೊಡಿಸಿಕೊಳ್ಳಲು ಸಲಹೆ

**ಕೆ.ಆರ್.ಪುರ:** ಮಹದೇವಪುರ ಕ್ಷೇತದ ಕಾಡುಬಿಸನಹಳ್ಳಿಯ ಡಾ.ಬಿ.ಆರ್.ಅಂಬೇಡ್ಕರ್ ವೃತ್ತ ಉದ್ಘಾಟನೆಯನ್ನು ಅಂಬೇಡ್ಕರ್ ಅಭಿಮಾನಿಗಳು ಅನಾವರಣ ಮಾಡಿದರು.

ಸ್ಥಳೀಯ ದಲಿತ ಮುಖಂಡ ಮುನಿಕೃಷ್ಣ ಮಾತನಾಡಿ, ಇಂದಿನ ಯುವ ಸಮುದಾಯ ಅಂಬೇಡ್ಕರ್ ಅವರ ಆದರ್ಶಗಳನ್ನು ಮೈಕೊಡಿಸಿಕೊಂಡ ಸ್ವಾಭಿಮಾನಿಗಳಾಗಿ ಬದುಕಬೇಕೆಂದು ನುಡಿದರು.

ಐಕ್ಯತವೇದಿಕೆಯ ಅಧ್ಯಕ್ಷ ಅಂಬರೀಶ್ ಗುಣ ಮಾತನಾಡಿ, ಕಾಡುಬಿಸನಹಳ್ಳಿ ನಿವಾಸಿಗಳಿಂದ ಮುಂದಿನ ದಿನಗಳಲ್ಲಿ ಅಂಬೇಡ್ಕರ್ ಅವರ ಹೆಸರಲ್ಲಿ ಬಡವರಿಗೆ, ದಿನದಲಿತರ ಅಭಿವೃದ್ಧಿಗೆ ಶ್ರಮಿಸಿ ಸಂಘಟನೆ, ಶಿಕ್ಷಣ ಮತ್ತು ಹೋರಾಟದ ಮಾರ್ಗವನ್ನು ಅನುಸರಿಸಲಾಗುತ್ತದೆ ಎಂದರು.

ಸಮಾಜಸೇವಕ ರಘುಪತಿ ಮಾತನಾಡಿ, ಇದೇ ಸ್ಥಳದಲ್ಲಿ ಸಂವಿಧಾನ ಶಿಲ್ಪಿ ಅಂಬೇಡ್ಕರ್ ಅವರ ಪ್ರತಿಮೆ ಸ್ಥಾಪಿಸಬೇಕೆಂದು ಹೇಳಿದರು.

ಕಾಡುಬಿಸನಹಳ್ಳಿ ಅಂಬೇಡ್ಕರ್ ಅಭಿಮಾನಿಗಳು ಹಾಗೂ ಸ್ಥಳೀಯರಾದ ಅಣ್ಣಯ್ಯಪ್ಪ, ಬಿ.ವಿ ಶಂಕರ್, ಸಂಪತ್ ಕುಮಾರ್, ಮಾರುತಿ, ರಾಮಾಂಜೀ, ಮಂಜುನಾಥರೆಡ್ಡಿ, ಕೆ. ಎಂ ಶ್ರೀನಿವಾಸ್, ಮೂರ್ತಿ, ರಘುಪತಿ, ಪ್ರಸನ್ನ, ಎಂ.ಆರ್. ಮಂಜು, ಕರ್ತಿಕ್, ಅಜಯ್ ಸೇರಿದಂತೆ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.



# ಕಾಂಗ್ರೆಸ್ ನಾಯಕರ ಬಡಿದಾಟ ಆಡಳಿತದ ಮೇಲೆ ದುಷ್ಪರಿಣಾಮ ಬೀರುತ್ತಿದೆ: ಜೋಶಿ

**ಧಾರವಾಡ:** "ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ನಾಯಕರ ಬಡಿದಾಟ ಆಡಳಿತದ ಮೇಲೆ ದುಷ್ಪರಿಣಾಮ ಬೀರುತ್ತಿದೆ" ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, "ಸಿಎಂ ಸೇರಿ ಹಲವರು ನಮ್ಮ ಪಕ್ಷದ ಬಗ್ಗೆ ಸಾಕಷ್ಟು ಮಾತನಾಡಿದ್ದಾರೆ. ಅವರು ಮಾತನಾಡಿದ್ದಕ್ಕಾಗಿಯೇ ನಾವೂ ಕೂಡ ಅವರ ಪಕ್ಷದ ಬಗ್ಗೆ ಮಾತನಾಡಬೇಕಾಗಿದೆ" ಎಂದರು.



" ಸಚಿವ ಸಂತೋಷ ಲಾಡ್ ಅವರು ಸ್ವಾಮಿತ್ವದ ಬಗ್ಗೆ ಮಾತನಾಡಿದ್ದಾರೆ. ಈ ಕಾಂಗ್ರೆಸ್ ಚಿಲ್ಲರೆ ರಾಜಕಾರಣ ಮಾಡುತ್ತಿದೆ. ಸ್ವಾಮಿತ್ವ ಎಂಬುದು ಭಾರತ ಸರ್ಕಾರದ ಯೋಜನೆ. ಇದನ್ನು ಆರಂಭ ಮಾಡಿದ್ದೇ ನಾವು. ಮೋದಿ ಅವರು ಬರುವ ಮೊದಲು ಹಳ್ಳಿಯಲ್ಲಿ ವಾಸ ಮಾಡುವ ಜನರ ಮನೆ ಹಾಗೂ ಸುತ್ತಮುತ್ತಲ ವಾತಾವರಣದ ಬಗ್ಗೆ ಇವರಿಗೆ ಲಕ್ಷ್ಯವೇ ಇರಲಿಲ್ಲ" ಎಂದು ಟೀಕಿಸಿದರು.

"60 ವರ್ಷ ಈ ದೇಶದಲ್ಲಿ ಕಾಂಗ್ರೆಸ್‌ನವರು ಆಡಳಿತ ನಡೆಸಿದರು, ರಸ್ತೆ ಬದಿ ವ್ಯಾಪಾರ ಮಾಡುವವರ, ಹಳ್ಳಿಯಲ್ಲಿ ರೈತರ ಜಾಗ ಬಿಟ್ಟು ಉಳಿದ ಜಾಗಕ್ಕೆ ಗುರುತು ಕೊಡುವುದು ಸ್ವಾಮಿತ್ವ ಯೋಜನೆಯ ಉದ್ದೇಶ. ಇದಾಗಿದ್ದೇ ನರೇಂದ್ರ ಮೋದಿ ಅವರ ಕಾಲದಲ್ಲಿ. ಆದರೆ, ಕಾರ್ಯಕ್ರಮದಲ್ಲಿ ಮೋದಿ ಭಾವಚಿತ್ರವನ್ನೇ ಹಾಕುವುದಿಲ್ಲ. ಇದರಿಂದ ಅಧಿಕಾರಿಗಳ ವರ್ತನೆ ಸಹ ಹೇಗಿದೆ ಎಂಬುದು ಗೊತ್ತಾಗುತ್ತದೆ" ಎಂದರು.

ನಕಲಿ ಕಾಂಗ್ರೆಸ್ಸಿನ ನಕಲಿ ಗಾಂಧಿಗಳ ಸಮಾವೇಶ: ಬೆಳಗಾವಿಯಲ್ಲಿ ಕಾಂಗ್ರೆಸ್‌ನ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಸಮಾವೇಶ ಕುರಿತು ಮಾತನಾಡಿ, "ಮಹಾತ್ಮ ಗಾಂಧಿ ಕಾಂಗ್ರೆಸ್ ಪಕ್ಷವನ್ನು ವಿಸರ್ಜನೆ ಮಾಡಲು ಹೇಳಿದ್ದರು. ಅವರು ಹೇಳಿದಂತಹ ಪಕ್ಷ ಈಗ ಅಸ್ತಿತ್ವದಲ್ಲಿ ಇಲ್ಲ. ಈಗಿನ ಕಾಂಗ್ರೆಸ್ ಪಕ್ಷದ್ದು ಎ ದಿಂದ ಝಡ್‌ವರೆಗೆ ಎಲ್ಲವೂ ಮುಗಿದು ಹೋಗಿದೆ. ಇದು ಒರಿಜಿನಲ್ ಕಾಂಗ್ರೆಸ್ ಅಲ್ಲ. ಇದು ಡುಪ್ಲಿಕೇಟ್. ಇದು ನಕಲಿ ಕಾಂಗ್ರೆಸ್ಸಿನ ನಕಲಿ ಗಾಂಧಿಗಳ ಸಮಾವೇಶ. ಇದಕ್ಕೆ ಸರ್ಕಾರದ ದುಡ್ಡು ಪೋಲು ಮಾಡುತ್ತಿದ್ದಾರೆ. ಸರ್ಕಾರದ ದುಡ್ಡಲ್ಲಿ ಜಾತ್ರೆ ಮಾಡಲು ಹೊರಟಿದ್ದಾರೆ" ಎಂದು ವಾಗ್ದಾಳಿ ನಡೆಸಿದರು.

"ಈ ಹಿಂದೆ ಇದೇ ರೀತಿಯ ಸಮಾವೇಶ ಮಾಡಲು ಮುಂದಾಗಿದ್ದರು. ದುರ್ದೈವದಿಂದ ಮನಮೋಹನ್ ಸಿಂಗ್ ಅವರ ಇಹಲೋಕ ತ್ಯಜಿಸಿದ್ದರಿಂದ ಅದನ್ನು ಮುಂದೂಡಿದರು. ಮತ್ತೆ ದುಡ್ಡನ್ನು ಖರ್ಚು ಮಾಡಿ ಕಾರ್ಯಕ್ರಮ ಮಾಡುತ್ತಿದ್ದಾರೆ. ದುಡ್ಡೇ ಇಲ್ಲದ ಕಾರಣ ಹಲವು ಕಾರ್ಯಕ್ರಮಗಳು ನಿಂತು ಹೋಗಿವೆ ಎಂದು ಮಾಧ್ಯಮವೊಂದು ವರದಿ ಮಾಡಿದೆ. ಈ ರೀತಿಯ ಸ್ಥಿತಿ ಇಟ್ಟುಕೊಂಡು ಹಣ ಪೋಲು ಮಾಡುತ್ತಿದ್ದಾರೆ" ಎಂದರು.

ಸೂಕ್ಷ್ಮತೆ ಇದ್ದ ಸಿಎಂ ಆಗಿದ್ದರೆ ರಾಜೀನಾಮೆ ಕೊಟ್ಟು ಹೋಗುತ್ತಿದ್ದರು: ಮತ್ತೊಂದೆಡೆ, ವಿಧಾನಸಭೆ ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ ಮಾತನಾಡಿ, "ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ಕುಟುಂಬ ಭಾಗಿಯಾಗಿದೆ ಎಂಬುದು ಇಡೀ ಜಗತ್ತಿಗೇ ಗೊತ್ತು. ಸೂಕ್ಷ್ಮತೆ ಇದ್ದ ಸಿಎಂ ಆಗಿದ್ದರೆ ಇಷ್ಟೊತ್ತಿಗೆ ರಾಜೀನಾಮೆ ಕೊಟ್ಟು ಹೋಗುತ್ತಿದ್ದರು. ಮುಡಾ ಹಗರಣದಲ್ಲಿ ಸಿಎಂ ಭಂಡತನ ತೋರಿಸುತ್ತಿದ್ದಾರೆ. ಮುಡಾ ಪ್ರಕರಣವನ್ನು ಯಾವುದೇ ಕೈವಾಡ ಇಲ್ಲದೇ ತನಿಖೆ ಮಾಡಬೇಕು ಎಂದರೆ ಸಿಎಂ ಆ ಸ್ಥಾನದಲ್ಲಿ ಇರಬಾರದು" ಎಂದು ಹೇಳಿದರು.

# ಭೂಮಿ ತಂತ್ರಾಂಶ ಜಿಲ್ಲಾಧಿಕಾರಿಗಳಿಂದ ಉದ್ಘಾಟನೆ

**ಚೇಳೂರು:** ರೈತಾಪಿ ಜನರ ಜಮೀನುಗಳ ಫವತಿ ಖಾತೆಗಳು. ತಿದ್ದಪಡಿಗಳು.ನೊಂದಣಿಯಾದ ಕ್ರಯ ಪತ್ರಗಳ ಖಾತೆಗಳು ಇನ್ನೂ ಮುಂದೆ ಚೇಳೂರು ತಾಲ್ಲೂಕು ಕಚೇರಿಯಲ್ಲೇ ಮಾಡುತ್ತಾರೆ ಆರು ತಿಂಗಳಿಂದ ನಿಂತ ಕೆಲಸ ಇನ್ನೂ ಮುಂದೆ ರೈತರಿಗೆ ಅನೂಕೂಲ ಆಗಲಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಹೇಳಿದರು.


ಅವರು ಚೇಳೂರು ತಾಲ್ಲೂಕು ಕಛೇರಿಯ ಮಿನಿ ವಿಧಾನಸೌಧ ಕಟ್ಟಡ ಕಟ್ಟಲು ಪುಲಗಲ್ ಕ್ರಾಸ್‌ನಲ್ಲಿ ಸ್ಥಳ ತನಿಖೆ ಮಾಡಿದ ನಂತರ ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿ, ಚೇಳೂರು ನೂತನ ತಾಲ್ಲೂಕು ರಚನೆಯಾಗಿದ್ದರಿಂದ ಚೇಳೂರು ತಾಲ್ಲೂಕಿಗೆ ಚಿಂತಾಮಣಿ ತಾಲ್ಲೂಕಿನ ಚಿಲಕಲನೇರ್ಪು. ಏನಿಗದಲೆ. ಟಿ.ಗೊಲ್ಲಹಳ್ಳಿ ಬುರುಡಗುಂಟೆ ಕಂದಾಯ ವೃತ್ತಗಳ ಗ್ರಾಮಗಳು ಬಾಗೇಪಲ್ಲಿ ತಾಲ್ಲೂಕಿನ ನಾರೇಮದ್ದೇಪಲ್ಲಿ ಕುರುಬರಹಳ್ಳಿ. ಸೋಮನಾಥಪುರ. ಪೋಲನಾಯಕನಹಳ್ಳಿ. 4 ಕಂದಾಯ ವೃತ್ತಗಳ ಗ್ರಾಮಗಳು ಮತ್ತು ಚೇಳೂರು ಹೋಬಳಿಯ 9 ಕಂದಾಯ ವೃತ್ತಗಳ ಗ್ರಾಮಗಳನ್ನ ಭೂಮಿ ತಂತ್ರಾಂಶದಲ್ಲಿ ಅಳವಡಿಸಲು ಚಿಂತಾಮಣಿ ತಾಲ್ಲೂಕನ್ನ ವಿಭಜಸಿ ಭೂಮಿಗೆ ಸೇರಿಸಲಾಗಿದೆ ಆದರೆ ಇಷ್ಟು ಸಮಯ ಭೂಮಿ ತಂತ್ರಾಂಶದ ಕೆಲಸ ಸ್ಥಗಿತ ಗೊಂಡಿತ್ತು ಆರು ತಿಂಗಳಿಂದ ಜಮೀನು. ಖಾಲಿನಿವೇಶನ ಮನೆಗಳು. ನೊಂದಣಿ. ಮತ್ತು ಫವತಿ. ಖಾತೆ. ವಿಭಾಗಗಳು. ನೊಂದಣಿ. ಖಾತೆಗಳು ಮಾಡದೇ ತೊಂದರೆ ಆಗಿತ್ತು ಇನ್ನ ಮುಂದೆ ಜನರಿಗೆ ಅನೂಕೂಲವಾಗಲಿದೆ ಎಂದರು.

ಚೇಳೂರು ತಾಲ್ಲೂಕು ಕಚೇರಿಯ ಕಟ್ಟಡ ಚೇಳೂರಿಗೆ ಬಲುದೂರದಲ್ಲಿ ನೋಡುತ್ತಿದ್ದು ತಾವು ಜಿಂಕಪಲ್ಲಿ ಗ್ರಾಮದ ಸ.ನಂ.2 ರಲ್ಲಿ 9–38 ಗುಂಟೆ ಜಮೀನು ಆದೇಶ ಬಂದಿದೆ ಎನ್ನುತ್ತಿದ್ದಾರೆ ಇದು ಜನವಿರೋಧಿಯಾಗಿದೆ ಚೇಳೂರು ಸನಂ 53 ಮತ್ತು ಷೇರ್ ಖಾನ್ ಕೋಟೆ ಸ.ನ> 48 ರಲ್ಲಿ 9–10 ಗುಂಟೆ ಜಮೀನಿದೆ ಅಲ್ಲದೇ ಚೇಳೂರಿನಲ್ಲಿರುವ ವಿದ್ಯುತ್ ಕಛೇರಿ ಪುಲಗಲ್ ಕ್ರಾಸ್ ಗೆ ಎತ್ತಿಹಾಕಿ ಗ್ರಾಮದ ಮದ್ಯೆದಲ್ಲಿ ಕಛೇರಿ ಕಟ್ಟಡ ಕಟ್ಟಬೇಕೆಂದು ನಾಗರೀಕರು ಡಿಸಿಗೆ ಮನವಿ ಮಾಡಿ ಹೇಳಿದಾಗ ನಿಮ್ಮ ಮನವಿಗೆ ತನಿಖೆ ಮಾಡುತ್ತೇನೆ ಎಂದರು.

ಜಿಲ್ಲಾಧಿಕಾರಿಗಳ ಜೊತೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲಾ ಉಪ–ವಿಭಾಗಧಿಕಾರಿ ಅಶ್ವಿನ್ ಚೇಳೂರು ತಹಸೀಲ್ದಾರ್ ಶ್ರೀನಿವಾಸನಾಯುಡು. ಅಧಿಕಾರಿಗಳ ತಂಡ ಹಾಜರಿದ್ದರು.

# ಕಂದಾಚಾರಕ್ಕೆ ಒಳಗಾದ ಅಧಿಕಾರಿಗಳು!

**ಚಾಮರಾಜನಗರ:** ಸರ್ಕಾರಿ ಕಚೇರಿಗಳಲ್ಲಿ ಯಾವುದೇ ಧಾರ್ಮಿಕ ಚಟುವಟಿಕೆ ನಡೆಸುವಂತಿಲ್ಲ ಎಂದಿದ್ದರೂ ಅದಿಕಾರಿಗಳು ಮಾತ್ರ ಸರ್ಕಾರಿ ಕಛೇರಿಗಳಲ್ಲಿ ಒಂದಾದ ಅರಣ್ಯ ಇಲಾಖೆಯಲ್ಲಿ ಭರ್ಜರಿ ಹೋಮ–ಹವನ ನಡೆಸಿರುವ ಅಧಿಕಾರಿಗಳು ನಡೆಸಿದ್ದಾರೆ.



ಬಂಡೀಪುರದಲ್ಲಿ ನೂತನ ಅರಣ್ಯ ಸಂರಕ್ಷಣಾಧಿಕಾರಿ ಕಚೇರಿ ಉದ್ಘಾಟನೆ ಅರಣ್ಯ ಸಚಿವರಿಂದ ಇದ್ದು ಆ ನೂತನ ಸಿಎಫ್ ಕಚೇರಿ ಉದ್ಘಾಟನೆಗೂ ಮುನ್ನ ಕಂದಾಚಾರಕ್ಕೆ ಒಳಗಾಗಿ ಸರ್ಕಾರಿ ನಿಯಮಗಳನ್ನು ಅಧಿಕಾರಿಗಳು ಗಾಳಿಗೆ ತೂರಿದ್ದಾರೆ ಎನ್ನಲಾಗಿದೆ.

# ಫೆ.7ರಂದು ಒಪಿಎಸ್ ಹಕ್ಕೊತ್ತಾಯ ಧರಣಿಗೆ ತೀರ್ಮಾನ

**ಬೆಂಗಳೂರು:** ಎನ್‌ಪಿಎಸ್ ಯೋಜನೆಯ ರದ್ದತಿಗೆ ಒತ್ತಾಯಿಸಿ ಫೆ.7ರಂದು 'ಒಪಿಎಸ್ ಹಕ್ಕೊತ್ತಾಯ' ಧರಣಿ ನಡೆಸಲು ಕರ್ನಾಟಕ ರಾಜ್ಯ ಸರ್ಕಾರಿ ಎನ್‌ಪಿಎಸ್ ನೌಕರರ ಸಂಘ ತೀರ್ಮಾನಿಸಿದೆ.

ಈ ಸಂಬಂಧ ಪತ್ರಿಕಾ ಪ್ರಕಟಣೆ ಹೊರಡಿಸಿರುವ ಸಂಘ, ಕರ್ನಾಟಕ ರಾಜ್ಯ ಸರ್ಕಾರಿ ಎನ್‌ಪಿಎಸ್ ನೌಕರರ ಸಂಘವು 2022ರ ಅ.13ರಿಂದ ಒಂದು ತಿಂಗಳು ಒಪಿಎಸ್ ಸಂಕಲ್ಪ ಯಾತ್ರೆ ಹಾಗೂ 14 ದಿನಗಳ ಕಾಲ ಒಪಿಎಸ್ ಜಾರಿಗಾಗಿ ಫ್ರೀಡಂ ಪಾರ್ಕ್‌ಲ್ಲಿ ಅಹೋ ರಾತ್ರಿ ಧರಣಿ ನಡೆಸಲಾಗಿತ್ತು. ಜನವರಿ ತಿಂಗಳಿಂದ ಮೂರು ತಿಂಗಳ ಕಾಲ ವೋಟ್ ಫಾರ್ ಒಪಿಎಸ್ ಅಭಿಯಾನ ಮಾಡಿತ್ತು. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷ ಎನ್‌ಪಿಎಸ್ ಯೋಜನೆ ರದ್ದುಗೊಳಿಸುವ ಭರವಸೆಯನ್ನು ತನ್ನ ಪ್ರಣಾಳಿಕೆಯಲ್ಲಿ ಸೇರಿಸಲಾಗಿತ್ತು ಎಂದಿದೆ.

ಮುಖ್ಯಮಂತ್ರಿಯವರು ಅಧಿಕಾರ ವಹಿಸಿಕೊಂಡ ತಕ್ಷಣ ನಮ್ಮ ಸಂಘದ ಪದಾಧಿಕಾರಿಗಳೊಂದಿಗೆ 2023ರ ಜೂ.13ರಂದು ಗೃಹ ಕಚೇರಿ ಕೃಷ್ಣಾದಲ್ಲಿ ಸಭೆ ನಡೆಸಿ ಭರವಸೆ ನೀಡಿದ್ದರು. ಎನ್‌ಪಿಎಸ್ ಯೋಜನೆಯನ್ನು ರದ್ದುಗೊಳಿಸುವ ಕುರಿತು ಕ್ರಮಕೈಗೊಳ್ಳುವುದಾಗಿ ತಿಳಿಸಿದ್ದರು. ಮುಖ್ಯಮಂತ್ರಿ 2024ರ ಜ.6 ರಂದು ಸಂಘದ ಪದಾಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಮುಂದಿನ ಸಂಪುಟ ಸಭೆಯಲ್ಲಿ ಎನ್‌ಪಿಎಸ್ ಯೋಜನೆಯ ರದ್ದತಿಯ ವಿಷಯವನ್ನು ಸಂಪುಟದ ಸಹದ್ಯೋಗಿಗಳೊಂದಿಗೆ ಚರ್ಚಿಸಿ, ತೀರ್ಮಾನ ಕೈಗೊಳ್ಳುವುದಾಗಿ ತಿಳಿಸಿದ್ದರು ಎಂದು ಪ್ರಕಟಣೆಯಲ್ಲಿ ಸಂಘ ತಿಳಿಸಿದೆ.

ಆದರೆ, ಈ ನಡುವೆ ಕೇಂದ್ರ ಸರ್ಕಾರ ಎನ್‌ಪಿಎಸ್ ಬದಲು ಯುಪಿಎಸ್ ಏಕೀಕೃತ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಲು ತೀರ್ಮಾನಿಸಿದ್ದು, ಇದನ್ನು ರಾಷ್ಟ್ರ ಮಟ್ಟದಲ್ಲಿ ಎನ್‌ಎಮ್‌ಒಪಿಎಸ್ ಮತ್ತು ರಾಜ್ಯದಲ್ಲಿ ನಮ್ಮ ಸಂಘಟನೆ ಈ ಪ್ರಸ್ತಾವನೆಯನ್ನು ಸಂಪೂರ್ಣವಾಗಿ ತಿರಸ್ಕರಿಸಿದ್ದು, ನಮ್ಮ ಬೇಡಿಕೆ ಕೇವಲ ಹಳೆ ಪಿಂಚಣಿ ಯೋಜನೆಯನ್ನು ಮರುಜಾರಿಗೊಳಿಸುವುದಾಗಿದೆ. ಈ ನಡುವೆ ರಾಜ್ಯ ಸರ್ಕಾರ ಕೆಲವು ರಾಜ್ಯಗಳಲ್ಲಿ ಒಪಿಎಸ್ ಜಾರಿಗೊಳಿಸಿದ್ದು, ಸಿದ್ದರಾಮಯ್ಯ ಆ ರಾಜ್ಯಗಳಿಗೆ ಭೇಟಿ ನೀಡಿ ವರದಿ ಪಡೆದು ಪರಿಶೀಲಿಸುವ ಬಗ್ಗೆ ಸಮಿತಿ ರಚಿಸಿದ್ದು, ಸರ್ಕಾರದ ಈ ಕ್ರಮವನ್ನು ಕರ್ನಾಟಕ ರಾಜ್ಯ ಸರ್ಕಾರಿ ಎನ್‌ಪಿಎಸ್ ನೌಕರರ ಸಂಘ ವಿರೋಧಿಸಿದೆ.

"ಕಾಂಗ್ರೆಸ್ ಪಕ್ಷ ಪ್ರಣಾಳಿಕೆಯಲ್ಲಿ ನೀಡಿರುವ ಭರವಸೆಯಂತೆ, ಎನ್‌ಪಿಎಸ್ ಯೋಜನೆಯನ್ನು 2025–26ನೇ ಸಾಲಿನ ಆಯವ್ಯಯದಲ್ಲಿ ರದ್ದುಗೊಳಿಸುವ ಭರವಸೆಯು ದೊರಕದೇ ಇದ್ದಲ್ಲಿ, 2025ರ ಫೆ.7ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ 'ಒಪಿಎಸ್ ಹಕ್ಕೊತ್ತಾಯ' ಧರಣಿ ನಡೆಸಲು ಬೆಂಗಳೂರಿನಲ್ಲಿ ಭಾನುವಾರ ನಡೆದ ವಿಶೇಷ ರಾಜ್ಯ ಕಾರ್ಯಕಾರಿಣಿ ಸಭೆಯಲ್ಲಿ ಸರ್ವಾನುಮತದ ನಿರ್ಣಯ ಕೈಗೊಳ್ಳಲಾಗಿದೆ ಎಂದು ಸಂಘ ಮಾಹಿತಿ ನೀಡಿದೆ.

# ವೇಮನ ಜಯಂತಿ ಆಚರಣೆ

**ಚೇಳೂರು:** ಚೇಳೂರು ತಾಲ್ಲೂಕು ಕಚೇರಿಯಲ್ಲಿ ಯೋಗಿ ವೇಮನ ಜಯಂತಿಯನ್ನು ಆಚರಿಸಿದರು.

ಈ ಆಚರಣೆಯಲ್ಲಿ ರಾಜಸ್ವ ನೀರೀಕ್ಷಕ ಎಂ.ಎನ್.ಈಶ್ವರ್ ಮಾತನಾಡಿ ಯೋಗಿ ವೇಮನನ ತತ್ವ ಸಿದ್ಧಾಂತಗಳು ಅಳವಡಿಸಿಕೊಳ್ಳಬೇಕಾಗಿದೆ ಚೇಳೂರು ನೂತನ ತಾಲ್ಲೂಕಾಗಿದ್ದು ಮುಂದಿನ ದಿನಗಳಲ್ಲಿ ಸಮುದಾಯದ ಸಹಕಾರದಿಂದ ಮತ್ತಷ್ಟು ವಿಜೃಂಭಣೆಯಿಂದ ಮಾಡಲಾಗುವುದೆಂದು ಹೇಳಿದರು.

ಯೋಗಿ ವೇಮನ ಜಯಂತಿ ಆಚರಣೆಯಲ್ಲಿ ಚೇಳೂರು ತಾಲ್ಲೂಕು ಕಛೇರಿಯ ಪಿ.ಎಸ್.ಜಗದೀಶ್. ಚೇಳೂರು ತಾಲ್ಲೂಕು ಕಚೇರಿ ಸಿಬ್ಬಂದಿ. ಗ್ರಾ.ಪಂ ಸದಸ್ಯರಾದ ಹೆಚ್.ವಿ.ನಾರಾಯಣಸ್ವಾಮಿ. ವಕ್ಕಲಿಗರ ಸಂಘದ ಪ್ರಕಾಶ್ ಸೀತಾ ಆಂಜನೇಯರೆಡ್ಡಿ ಇತರರು ಹಾಜರಿದ್ದರು.



# ಗ್ರಾಮೀಣ ಶಾಲೆಗಳ ಬೆಳವಣಿಗೆಗೆ ಸರ್ಕಾರಿ ಶಾಲೆಗೆ ಮಕ್ಕಳನ್ನು ಸೇರಿಸಿ ಶ್ರೀನಿವಾಸ್ ಕರೆ

**ನಾಗಮಂಗಲ:** ಗ್ರಾಮಾಂತರ ಪ್ರದೇಶಗಳಲ್ಲಿ ಸರ್ಕಾರಿ ಶಾಲೆಗಳ ಸರ್ವತೋಮುಖ ಬೆಳವಣಿಗೆಗೆ ಹಾಗೂ ಕಡ್ಡಾಯವಾಗಿ ಮಕ್ಕಳನ್ನು ಸರ್ಕಾರಿಗೆ ಶಾಲೆಗೆ ಸೇರಿಸುವಂತೆ ಉಪವಿಭಾಗಾಧಿಕಾರಿಗಳಾದ ಶ್ರೀನಿವಾಸ್ ಕರೆ ನೀಡಿದರು.

ಅವರು ನಾಗಮಂಗಲ ತಾಲೂಕು ದೇವಲಾಪುರ ಹೋಬಳಿ ಕೇಂದ್ರದಲ್ಲಿರುವ ಕರ್ನಾಟಕ ಪಬ್ಲಿಕ್ ಸ್ಕೂಲ್ ಸಿರಿ ಸಂಭ್ರಮ –25 ಶಾಲಾ ವಾರ್ಷಿಕೋತ್ಸವದ ನಗಾರಿ ಬಾರಿಸುವ ಮುಖಾಂತರ ಉದ್ಘಾಟನೆ ಮಾಡಿ ಮಾತನಾಡಿದರು. ಮಕ್ಕಳಿಗೆ ಶಿಕ್ಷಣ ಕೊಡಿಸುವ ಮುಖಾಂತರ ಶಿಕ್ಷಣ ಆಸ್ತಿ ನೀಡುವ ಜೊತೆಗೆ ಜ್ಞಾನ ಸಂಪತ್ತು ಕೂಡ ಮೈಗೂಡಿಸಿಕೊಳ್ಳುವುದರಿಂದ ಸಮಾಜ ಕಟ್ಟಲು ಅವರುಗಳು ಮಾದರಿಯಾಗಲು ಸಹಕಾರವಾಗುತ್ತದೆ.

ಗ್ರಾಮೀಣ ಪ್ರದೇಶದಲ್ಲಿ ವಿಧ್ಯಾರ್ಜನೆಯ ಕೊಡಿಸಲು ಖಾಸಗಿ ಶಾಲೆಯ ವ್ಯಾಮೋಹಗಳನ್ನ ಬಿಟ್ಟು ಸರ್ಕಾರಿ ಶಾಲೆಗೆ ತಮ್ಮ ಮಕ್ಕಳನ್ನು ಕಡ್ಡಾಯವಾಗಿ ಸೇರಿಸಿ ಅವರುಗಳ ಉಜ್ವಲ ಭವಿಷ್ಯಕ್ಕೆ ಹೊಸ ಮುನ್ನುಡಿ ಬರೆಯಲು ಪೋಷಕರು ಸಹಕರಿಸುವಂತೆ ಈ ಸಂದರ್ಭದಲ್ಲಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಮಂಡ್ಯ ಡಯಟ್ ಪ್ರಾಚಾರ್ಯರಾದ ಮಹೇಶ್ ತಾಲೂಕು ಶಿಕ್ಷಣಾಧಿಕಾರಿಗಳು ಯೋಗೇಶ್ ಸಂಪನ್ಮೂಲ ಸಮನ್ವಯಧಿಕಾರಿ ರವೀಶ್. ಜಿಲ್ಲಾ ಮತ್ತು ತಾಲೂಕು ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಸಮಾರಂಭದಲ್ಲಿ ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಜೆ ವೈ ಮಂಜುನಾಥ್ ಜಿಲ್ಲಾ ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ರಮೇಶ್ ತಾಲೂಕು ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ರಮೇಶ್ ಉಪಸ್ಥಿತರಿದ್ದರು

ಸಮಾರಂಭದ ಅಧ್ಯಕ್ಷತೆಯನ್ನು ಶಾಲಾ ಆಡಳಿತ ಮಂಡಳಿಯ ಡಿಕೆ ಸುರೇಶ್ ವಹಿಸಿದ್ದು ಸಮಾಜ ಸೇವಕರಾದ ಡಿ.ಕೆ ಕೋದಂಡರಾಮ.ಎನ್ ಜೆ ರಾಜೇಶ್ ಮಾಜಿ ತಾಲೂಕು ಪಂಚಾಯಿತಿ ಸದಸ್ಯೆ ಚಂದ್ರಕಲಾ ರಾಜೇಶ್. ಗ್ರಾಮ ಪಂಚಾಯತಿ ಸದಸ್ಯರಾದ ಶ್ರೀನಿವಾಸ್. ಮತ್ತು ಕುಮಾರ್ ಗ್ರಾಮ ಪಂಚಾಯಿತಿ ಅಧ್ಯಕ್ಷ ಬೋರಯ್ಯ. ಪತ್ರಕರ್ತರಾದ ಜಗದೀಶ್ ಅನೇಕ ಗಣ್ಯರು ಮುಖಂಡರು ಉಪಸ್ಥಿತರಿದ್ದರು. ಮುಖ್ಯ ಶಿಕ್ಷಕರಾದ ಎನ್‌ಸಿ ಶಿವಕುಮಾರ ಸ್ವಾಗತಿಸಿ ಶಿಕ್ಷಕರಾದ ನಾಗೇಗೌಡ ವಂದಿಸಿದರು

# ಮಹಿಳೆಯರಿಗೆ ಪ್ರತಿ ತಿಂಗಳು 1,100 ಯೋಜನೆ ಶೀಘ್ರ ಜಾರಿ

**ಮೊಗಾ:** ಮಹಿಳೆಯರಿಗೆ ಪ್ರತಿ ತಿಂಗಳು 1,100 ರೂ. ನೀಡುವ ಯೋಜನೆಯನ್ನು ಶೀಘ್ರವೇ ಪಂಜಾಬ್ ಸರ್ಕಾರ ಪ್ರಾರಂಭಿಸಲಿದೆ ಎಂದು ಮುಖ್ಯಮಂತ್ರಿ ಭಗವಂತ್ ಮಾನ್ ಘೋಷಿಸಿದ್ದಾರೆ.

ಮೊಗಾದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, "ಮುಂಬರುವ ಬಜೆಟ್‌ನಲ್ಲಿ ಈ ಯೋಜನೆ ಬಗ್ಗೆ ನಿರ್ಧಾರ ಕೈಗೊಳ್ಳಲಾಗುತ್ತದೆ. ದೆಹಲಿಯಲ್ಲಿ ನಮ್ಮ ಪಕ್ಷ ನೀಡಿದ್ದ ಎಲ್ಲಾ ಭರವಸೆಗಳನ್ನೂ ಈಡೇರಿಸಿದ್ದೇವೆ. ಪಂಜಾಬ್‌ನಲ್ಲೂ ಎಲ್ಲಾ ಭರವಸೆಗಳನ್ನು ಈಡೇರಿಸುತ್ತೇವೆ" ಎಂದು ತಿಳಿಸಿದರು.



**ದೆಹಲಿಯಲ್ಲಿ ಆಪ್‌ಗೆ 60ಕ್ಕೂ ಹೆಚ್ಚು ಸ್ಥಾನ:** ನಮ್ಮ ಆಮ್ ಆದ್ಮಿ ಪಕ್ಷ(ಎಎಪಿ) ಕೆಲಸದ ರಾಜಕಾರಣ ಮಾಡುತ್ತದೆ. ನಾವು ದುರಾಸೆಯ, ಧರ್ಮದ ರಾಜಕಾರಣ ಮಾಡುವುದಿಲ್ಲ, ನಾವು ಸಮಾಜವನ್ನು ಒಗ್ಗೂಡಿಸಲು ಯೋಜನೆಗಳನ್ನು ರೂಪಿಸುತ್ತೇವೆಯೇ ಹೊರತು ವಿಭಜಿಸುವುದಕ್ಕಲ್ಲ. ದೆಹಲಿಯಲ್ಲಿ ಎಎಪಿ ಸರ್ಕಾರ ಅಧಿಕಾರ ಹಿಡಿಯಲಿದೆ. ನಾಲ್ಕನೇ ಬಾರಿಗೆ, ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಪಕ್ಷವು 60ಕ್ಕೂ ಹೆಚ್ಚು ಸ್ಥಾನಗಳನ್ನು ಗಳಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.


**ರೈತರೊಂದಿಗೆ ಮಾತುಕತೆ:** ರೈತ ಪ್ರತಿಭಟನೆ ಕುರಿತು ಮಾತನಾಡಿದ ಅವರು, ಮಾತುಕತೆಯ ಮೂಲಕವೇ ರೈತರ ಸಮಸ್ಯೆಗಳನ್ನು ಬಗೆಹರಿಸಲಾಗುವುದು, ರೈತರೊಂದಿಗೆ ಚರ್ಚೆ ನಡೆಸಲು ಕೇಂದ್ರ ಸರ್ಕಾರ ಒಪ್ಪಿಗೆ ನೀಡಿರುವುದು ಸ್ವಾಗತಾರ್ಹ. ಈಗಾಗಲೇ ರೈತರೊಂದಿಗೆ ನಾಲ್ಕು ಸಭೆಗಳನ್ನು ನಡೆಸಿದ್ದೇನೆ. ರೈತರೊಂದಿಗೆ ಮಾತುಕತೆ ನಡೆಸುವಂತೆ ಈ ಹಿಂದೆಯೂ ಕೇಂದ್ರ ಸರ್ಕಾರವನ್ನು ಕೋರಿದ್ದೆವು. ರೈತರು ಮತ್ತು ಕೇಂದ್ರ ಸರ್ಕಾರದ ನಡುವಿನ ಮಾತುಕತೆಗೆ ನಾವು ಮಧ್ಯಸ್ಥಿಕೆ ವಹಿಸಿದ್ದೇವೆ. ದೇಶದ ಆಹಾರ ಒದಗಿಸುವವರ ಸಮಸ್ಯೆಗಳನ್ನು ಕೇಂದ್ರವು ಆಲಿಸಬೇಕು" ಎಂದರು.

ರಸ್ತೆ ಸುರಕ್ಷತಾ ಪಡೆ (ಎಸ್‌ಎಸ್‌ಎಫ್) ಕುರಿತ ಪ್ರಶ್ನೆಗೆ ಉತ್ತರಿಸಿ, "ರಸ್ತೆ ಸುರಕ್ಷತಾ ಪಡೆ ರಚನೆಯಿಂದ ಸಾಕಷ್ಟು ಪ್ರಯೋಜನವಾಗಿದೆ. ಈ ಹಿಂದೆ ಪಂಜಾಬ್‌ನಲ್ಲಿ ರಸ್ತೆ ಅಪಘಾತಗಳಲ್ಲಿ ಪ್ರತಿ ದಿನ ಸರಾಸರಿ 14 ಸಾವುಗಳು ವರದಿಯಾಗುತ್ತಿದ್ದವು. ಪ್ರಸ್ತುತ, ರಸ್ತೆ ಅಪಘಾತದಲ್ಲಿ ಸಾವಿನ ಸಂಖ್ಯೆ ಶೇ.47ರಷ್ಟು ಕಡಿಮೆಯಾಗಿದೆ. ಗಾಯಾಳುಗಳಿಗೆ ಸಕಾಲದಲ್ಲಿ ಚಿಕಿತ್ಸೆ ದೊರೆಯುತ್ತಿದೆ. ಎಸ್‌ಎಸ್‌ಎಫ್ ಇದನ್ನು ಸಾಧ್ಯವಾಗಿಸಿದೆ. ಅಪಘಾತ ನಡೆದಾಗ ಗಾಯಾಳುಗಳ ಆಭರಣ ಮತ್ತು ವಸ್ತುಗಳ ಬಗ್ಗೆ ಯಾರೂ ಗಮನ ಹರಿಸುವುದಿಲ್ಲ. ಆದರೆ ಎಸ್‌ಎಸ್‌ಎಫ್ ಒಂದು ವರ್ಷದಲ್ಲಿ ನಗದು ಸೇರಿದಂತೆ 5 ಕೋಟಿ ರೂಪಾಯಿ ಮೌಲ್ಯದ ಚಿನ್ನಾಭರಣವನ್ನು ಮಾಲೀಕರಿಗೆ ತಲುಪಿಸಿದೆ. ಎಲ್ಲಾ ರಸ್ತೆ ಸುರಕ್ಷತಾ ಪಡೆ ಸಿಬ್ಬಂದಿಗೆ ಸಲಾಂ. ಉತ್ತಮ ಕೆಲಸ ಮಾಡಿದವರನ್ನು ಗುರುತಿಸಿ ಗಣತಂತ್ರದ ದಿನ ಸನ್ಮಾನಿಸಲಾಗುವುದು" ಎಂದು ತಿಳಿಸಿದರು.

# ಕೇಜ್ರಿವಾಲ್ ಠೇವಣಿ ಕಳೆದುಕೊಳ್ಳುತ್ತಾರೆ: ಪ್ರವೇಶ್ ವರ್ಮಾ

**ನವದೆಹಲಿ:** ಕೇಜ್ರಿವಾಲ್ ಅವರು ಹೋದಲ್ಲೆಲ್ಲಾ ಜನರು ಕಪ್ಪು ಬಾವುಟ ತೋರಿಸಿ ಉತ್ತರಕ್ಕಾಗಿ ಆಗ್ರಹಿಸುತ್ತಿದ್ದಾರೆ. ಅವರೆಲ್ಲರೂ ಗೂಂಡಾಗಳಾಗಿದ್ದರೆ, ದೆಹಲಿಯ ಜನರೆಲ್ಲರೂ ಗೂಂಡಾಗಳು ಎಂದಾಗುತ್ತದೆ. ಯಾಕೆಂದರೆ ದೆಹಲಿಯ ಎಲ್ಲ ಜನರೂ ಕೇಜ್ರಿವಾಲ್ ಅವರನ್ನು ಪ್ರಶ್ನಿಸುತ್ತಿದ್ದಾರೆ.

ಈ ಬಾರಿ ಕೇಜ್ರಿವಾಲ್ ಠೇವಣಿ ಕಳೆದುಕೊಳ್ಳುತ್ತಾರೆ ಎಂದು ನವದೆಹಲಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪ್ರವೇಶ್ ವರ್ಮಾ ಅವರು ಮಾಜಿ ಸಿಎಂ ಅರವಿಂದ್ ಕೇಜ್ರಿವಾಲ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಕೇಜ್ರಿವಾಲ್ ಅವರ ಬೆಂಗಾವಲು ವಾಹನದ ಮೇಲಿನ ದಾಳಿ ಕುರಿತು ಪ್ರತಿಕ್ರಿಯಿಸಿ, "ದೆಹಲಿಯ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ಜನರು ಕಪ್ಪು ಬಾವುಟಗಳನ್ನು ತೋರಿಸಿ, ಉದ್ಯೋಗ ಹಾಗೂ ಮತ್ತಿತರ ಸಮಸ್ಯೆಗಳಿಗೆ ಉತ್ತರ ನೀಡುವಂತೆ ಕೇಳುತ್ತಿದ್ದಾರೆ" ಎಂದು ವಾಗ್ದಾಳಿ ನಡೆಸಿದರು.



"ವಾಲ್ಮೀಕಿ ಸಮುದಾಯದ ಮೂವರು ಯುವಕರು ಕೇಜ್ರಿವಾಲ್ ಅವರನ್ನು ಉದ್ಯೋಗದ ಬಗ್ಗೆ ಕೇಳಿ ತಪ್ಪು ಮಾಡಿದ್ದಾರೆ. ಯಾರಾದರೂ ಕೇಜ್ರಿವಾಲ್ ಅವರನ್ನು ಕೇಳಿದರೆ, ಆಪ್ ಕಾರ್ಯಕರ್ತರು ಅವರನ್ನು ಥಳಿಸುತ್ತಾರೆ. ನಂತರ ಕೇಜ್ರಿವಾಲ್ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಹೇಳುತ್ತಾರೆ. ಚುನಾವಣಾ ಆಯೋಗವಾಗಲಿ, ಪೊಲೀಸರಾಗಲಿ ಇದರ ಬಗ್ಗೆ ಗಮನ ಹರಿಸುತ್ತಿಲ್ಲ. ನಾನು ಚುನಾವಣಾ ಆಯೋಗಕ್ಕೆ ದೂರು ನೀಡಿದ್ದೇನೆ.

ಯುವಕರ ವಿರುದ್ಧ ಪೊಲೀಸರಿಗೂ ದೂರು ನೀಡಲಾಗುವುದು. ಕೊಲೆ ಯತ್ನ ಪ್ರಕರಣ ದಾಖಲಿಸಲಾಗುವುದು. ಕೇಜ್ರಿವಾಲ್ ಅವರನ್ನು ಬಂಧಿಸಬೇಕು, ಅವರ ಕಾರನ್ನು ವಶಪಡಿಸಿಕೊಳ್ಳಬೇಕು ಮತ್ತು ಅವರ ಚಾಲಕನ ವಿರುದ್ಧ ಕೊಲೆ ಯತ್ನ ಪ್ರಕರಣ ದಾಖಲಿಸಬೇಕು" ಎಂದು ಪ್ರವೇಶ್ ವರ್ಮಾ ಆಗ್ರಹಿಸಿದ್ದಾರೆ.

"ಸ್ಥಳೀಯ ಯುವಕರು ಕೇಜ್ರಿವಾಲ್ ಅವರನ್ನು ಪ್ರಶ್ನಿಸುವ ಧೈರ್ಯ ಮಾಡಿದ್ದರು. ಮತ್ತು ಕೇಜ್ರಿವಾಲ್ ಅವರನ್ನು ತಮ್ಮ ಕಾರಿನ ಕೆಳಗೆ ಹತ್ತಿಕ್ಕಲು ಸನ್ನೆ ಮಾಡಿದ್ದರು. ಅರವಿಂದ್ ಕೇಜ್ರಿವಾಲ್ ಈ ರೀತಿ ದಲಿತ ಸಮುದಾಯವನ್ನು ಹತ್ತಿಕ್ಕುತ್ತಾರೆಯೇ?" ಎಂದು ವರ್ಮಾ ಪ್ರಶ್ನಿಸಿದರು.

**ಏನಾಗಿತ್ತು:** ಅರವಿಂದ್ ಕೇಜ್ರಿವಾಲ್ ನವದೆಹಲಿ ವಿಧಾನಸಭಾ ಕ್ಷೇತ್ರದಲ್ಲಿ ಚುನಾವಣಾ ಪ್ರಚಾರಕ್ಕಾಗಿ ತೆರಳುತ್ತಿದ್ದಾಗ ಕೆಲವರು ಅವರಿಗೆ ಕಪ್ಪು ಬಾವುಟಗಳನ್ನು ತೋರಿಸಿ ಘೋಷಣೆಗಳನ್ನು ಕೂಗಿದ್ದರು. ಆಗ ಕೇಜ್ರಿವಾಲ್ ಅವರಿದ್ದ ಕಾರು ಡಿಕ್ಕಿಯಾಗಿ ಮೂವರು ಗಾಯಗೊಂಡಿದ್ದರು.

ಈ ದಾಳಿಗೆ ಆಮ್ ಆದ್ಮಿ ಪಕ್ಷ ವರ್ಮಾ ಅವರ ಮೇಲೆ ಆರೋಪ ಮಾಡಿತ್ತು. ಪ್ರವೇಶ್ ವರ್ಮಾ ಅವರ ಗೂಂಡಾಗಳು ಕೇಜ್ರಿವಾಲ್ ಅವರ ಮೇಲೆ ದಾಳಿ ಮಾಡಿದ್ದಾರೆ. ಸೋಲಿನ ಭಯದಿಂದ ಬಿಜೆಪಿ ಭಯಭೀತವಾಗಿದೆ ಎಂದು ಆಪ್ ದೂರಿತ್ತು.

# ಸೋಪೋರ್‌ನಲ್ಲಿ ಎನ್‌ಕೌಂಟರ್: ಇಬ್ಬರು ಭಯೋತ್ಪಾದಕರು ಸಿಲುಕಿರುವ ಸಾಧ್ಯತೆ

**ಜಮ್ಮು-ಕಾಶ್ಮೀರ:** ಜಮ್ಮು ಮತ್ತು ಕಾಶ್ಮೀರದ ಬಾರಾಮುಲ್ಲಾದ ಸೋಪೋರ್‌ನಲ್ಲಿ ಭದ್ರತಾ ಪಡೆ ಮತ್ತು ಭಯೋತ್ಪಾದಕರ ನಡುವೆ ಗುಂಡಿನ ಚಕಮಕಿ ನಡೆದಿದೆ.



ಸೋಪೋರ್‌ನಲ್ಲಿ ಗುಜ್ಜರ್ ಪೇತಿ ಜಾಲೂರು ಪ್ರದೇಶದಲ್ಲಿನ ಅರಣ್ಯ ಪ್ರದೇಶದಲ್ಲಿ ಭಯೋತ್ಪಾದಕ ವಿರೋಧಿ ಕಾರ್ಯಚಟುವಟಿಕೆಯ ನಡೆದಿದ್ದು, ಇದರಲ್ಲಿ ಸೋಪೋರ್ ಪೊಲೀಸರು ಮತ್ತು ರಾಷ್ಟ್ರೀಯ ರೈಫಲ್ಸ್ ಪಡೆಗಳು ಭಯೋತ್ಪಾದಕರ ಅಡಗುತಾಣದ ಮೇಲೆ ದಾಳಿ ನಡೆಸಿದ್ದು, ಮೂಲಗಳ ಪ್ರಕಾರ, ಇಬ್ಬರು ಭಯೋತ್ಪಾದಕರು ಸಿಲುಕಿದ್ದಾರೆ ಎನ್ನಲಾಗಿದೆ.

ಈ ಪ್ರದೇಶದಿಂದ ಹೊರ ಬಿದ್ದಿರುವ ವರದಿ ಅನುಸಾರ, ಕಳೆದ 24 ಗಂಟೆಗಳಿಂದ ಭಾರಿ ಕಾರ್ಯಾಚರಣೆ ನಡೆಸಿದ್ದು, ಭದ್ರತಾ ಪಡೆಗಳು ಗುಜ್ಜರ್ ಪೇತಿ ಜಾಲೂರ ಅರಣ್ಯದಲ್ಲಿನ ಶೋಧ ಕಾರ್ಯ ಮುಂದುವರೆದಿದೆ. ಅಡುಗುತಾಣವನ್ನು ಭದ್ರತಾ ಪಡೆ ಪತ್ತೆ ಮಾಡಿ ದಾಳಿಗೆ ಮುಂದಾಗಿದೆ. ಗುಂಡಿನ ಸದ್ದು ಕೇಳಿ ಬಂದಿದೆ ಎಂದು ಜಮ್ಮು ಮತ್ತು ಕಾಶ್ಮೀರ ಪೊಲೀಸರು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿದ್ದಾರೆ.

ಸದ್ಯ ಕಾರ್ಯಾಚರಣೆ ಸಾಗುತ್ತಿದ್ದು, ಭದ್ರತಾ ಪಡೆಗೆ ಮತ್ತುಷ್ಟು ಹೆಚ್ಚುವರಿ ಸಿಬ್ಬಂದಿಗಳನ್ನು ನಿಯೋಜಿಸುವ ಮೂಲಕ ಪ್ರದೇಶದಲ್ಲಿ ಹೆಚ್ಚಿನ ಭದ್ರತೆ ಒದಗಿಸಲಾಗಿದೆ. ಸೋಪೋರ್ ಪ್ರದೇಶದ ಪಾನಿಪೋರ್‌ನಲ್ಲಿ 2024ರ ನವೆಂಬರ್ 8ರ ರೀತಿಯ ಕಾರ್ಯಾಚರಣೆ ಬಳಿಕ ಈ ಬೆಳವಣಿಗೆ ಕಂಡು ಬಂದಿದೆ. ಈ ಕಾರ್ಯಾಚರಣೆಯಲ್ಲಿ ಭದ್ರತಾ ಪಡೆ ಇಬ್ಬರು ಭಯೋತ್ಪಾದಕರನ್ನು ಹೊಡೆದುರುಳಿಸಿದ್ದು, ಅವರ ಬಳಿಯಿದ್ದ ಶಸ್ತ್ರಾಸ್ತ್ರ, ಗುಂಡು ಮದ್ದುಗಳನ್ನು ವಶಕ್ಕೆ ಪಡೆದಿತ್ತು.

# ಐವರು ಅನುಮಾನಾಸ್ಪದ ಸಾವು: ವಿಷಪೂರಿತ ಮದ್ಯ ಸೇವನೆ ಶಂಕೆ

**ಬೆಟ್ಟಿಯಾ:** ಕಳೆದ 36 ಗಂಟೆಗಳಲ್ಲಿ ಕನಿಷ್ಠ ಐದು ಮಂದಿ ಅನುಮಾನಾಸ್ಪದವಾಗಿ ಸಾವನ್ನಪ್ಪಿರುವ ಘಟನೆ ಬಿಹಾರದ ಬೆಟ್ಟಿಯಾದಲ್ಲಿರುವ ಲೌರಿಯಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿರುವ ಮಥಿಯಾ ಗ್ರಾಮದಲ್ಲಿ ನಡೆದಿದೆ.

ಮೃತರ ಕುಟುಂಬ ಸದಸ್ಯರು ಮದ್ಯ ಹಾಗೂ ಗಾಂಜಾ ಸೇವಿಸಿದ ಬಳಿಕ ಸಾವು ಸಂಭವಿಸಿವೆ ಎಂದು ಆರೋಪಿಸಿದ್ದಾರೆ.

ಒಬ್ಬರ ಹಿಂದೆ ಒಬ್ಬರಂತೆ ಐವರ ಸಾವಿನಿಂದ ಗ್ರಾಮದಲ್ಲಿ ಭೀತಿ ಆವರಿಸಿದೆ. ಕುಟುಂಬ ಸದಸ್ಯರು ಎಲ್ಲಾ ಮೃತದೇಹಗಳ ಅಂತ್ಯಕ್ರಿಯೆ ಮುಗಿಸಿದ್ದಾರೆ. ಸಾವಿನ ಬಗ್ಗೆ ಮಾಹಿತಿ ಪಡೆದ ವೈದ್ಯಕೀಯ ತಂಡ ಸ್ಥಳಕ್ಕೆ ಭೇಟಿ ನೀಡಿ, ಸಾವಿಗೆ ಕಾರಣದ ಬಗ್ಗೆ ತನಿಖೆ ಆರಂಭಿಸಿದೆ.




**ವಿಷಕಾರಿ ಮದ್ಯ ಸೇವಿಸಿ ಸಾವು:** ಮೃತ ಪ್ರದೀಪ್ ಅವರ ಅಣ್ಣ ಮಾತನಾಡಿ, ನನ್ನ ಸಹೋದರ ಗ್ರಾಮದಲ್ಲಿ ಮದ್ಯ ಸೇವಿಸಿದ ಬಳಿಕ ಅವರ ಆರೋಗ್ಯ ಹದಗೆಟ್ಟು ಸಾವನ್ನಪ್ಪಿದರು ಎಂದು ಹೇಳಿದ್ದಾರೆ. ಮನೀಷ್ ಎಂಬ ಮತ್ತೊಬ್ಬ ವ್ಯಕ್ತಿ ಕೂಡ ಮದ್ಯ ಸೇವಿಸಿ ಸಾವನ್ನಪ್ಪಿದ್ದಾರೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ. ಸುರೇಶ್ ಚೌಧರಿ, ಶಿವ್ ರಾಮ್, ನರಸಿಂಗ್ ಶಾ ಅನುಮಾನಾಸ್ಪದವಾಗಿ ಸಾವನ್ನಪ್ಪಿದವರು. ಮೃತರಲ್ಲಿ ಹೆಚ್ಚಿನವರು ಯುವಕರಾಗಿದ್ದಾರೆ.

ಹೆಚ್ಚುವರಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಮುರ್ತಾಜಾ ಅನ್ಸಾರಿ, "ಮಾದಕ ದ್ರವ್ಯ ಸೇವನೆಯಿಂದ ಇಬ್ಬರು ಸಾವನ್ನಪ್ಪಿದ್ದಾರೆ. ಕುಟುಂಬ ಸದಸ್ಯರು ಎಲ್ಲಾ ಶವಗಳನ್ನು ಅಂತ್ಯಕ್ರಿಯೆ ಮಾಡಿದ್ದಾರೆ. ವೈದ್ಯಕೀಯ ತಂಡವು ಎಲ್ಲಾ ಸಾವುಗಳ ತನಿಖಾ ವರದಿಯನ್ನು ಸಿದ್ಧಪಡಿಸುತ್ತಿದೆ" ಎಂದು ತಿಳಿಸಿದ್ದಾರೆ.

ಕಳೆದ ವರ್ಷ ಅಕ್ಟೋಬರ್‌ನಲ್ಲಿ ಬಿಹಾರದ ಚಪ್ರಾದಲ್ಲಿ ಕಳ್ಳಭಟ್ಟಿ ದುರಂತ ಸಂಭವಿಸಿ 37 ಜನರು ಸಾವನ್ನಪ್ಪಿದ್ದರು. ಈ ಸಾವುಗಳು ಸಿವಾನ್, ಸರನ್ ಮತ್ತು ಗೋಪಾಲ್‌ಗಂಜ್‌ಗಳಲ್ಲಿ ಸಂಭವಿಸಿವೆ. ಪೊಲೀಸರು ಮತ್ತು ಆಡಳಿತ ಸಾವನ್ನಪ್ಪಿದವರ ಕುಟುಂಬಗಳು ತಮ್ಮ ಹೇಳಿಕೆಗಳನ್ನು ಬದಲಾಯಿಸುವಂತೆ ಒತ್ತಾಯಿಸಲು ಪ್ರಯತ್ನಿಸಿದೆ ಎಂದು ಸ್ಥಳೀಯರು ಆರೋಪಿಸಿದ್ದರು.

# 471 ದಿನಗಳ ಬಳಿಕ ಇಸ್ರೇಲ್‌ಗೆ ಆಗಮಿಸಿದ 3 ಮಹಿಳಾ ಒತ್ತೆಯಾಳುಗಳು

**ಜೆರುಸಲೇಂ/ಗಾಜಾ:** ಇಸ್ರೇಲ್ ಮತ್ತು ಹಮಾಸ್ ನಡುವಿನ ಕದನ ವಿರಾಮ ಒಪ್ಪಂದ ಜಾರಿಗೆ ಬಂದಿದೆ. ಒಪ್ಪಂದದ ಮೊದಲ ದಿನವೇ ಗಾಜಾದಲ್ಲಿ ಹಮಾಸ್ ಸೆರೆಯಲ್ಲಿದ್ದು, ಬಿಡುಗಡೆಯಾದ ಮೂವರು ಮಹಿಳೆಯರು ಇಸ್ರೇಲ್‌ಗೆ ಆಗಮಿಸಿದ್ದಾರೆ ಎಂದು ಇಸ್ರೇಲ್ ಅಧಿಕಾರಿಗಳು ತಿಳಿಸಿದ್ದಾರೆ.



**ಮೂವರ ಬಿಡುಗಡೆ:** ಬ್ರಿಟಿಷ್-ಇಸ್ರೇಲಿ 28 ವರ್ಷದ ಎಮಿಲಿ ದಮರಿ, 30 ವರ್ಷದ ಪಶುವೈದ್ಯಕೀಯ ನರ್ಸ್ ಡೊರೊನ್ ಸ್ಟೈನ್‌ಬ್ರೆಚರ್, 23 ವರ್ಷದ ರೋಮಿ ಗೊನೆನ್ ಬಿಡುಗಡೆಗೊಂಡ ಮಹಿಳೆಯರಾಗಿದ್ದಾರೆ. ನೋವಾ ಸಂಗೀತ ಉತ್ಸವದಿಂದ ಇವರೆಲ್ಲರನ್ನು ಹಮಾಸ್ ಉಗ್ರರು ಅಪಹರಿಸಿದ್ದರು. ಹಮಾಸ್‌ನಿಂದ ಅಪಹರಣಕ್ಕೆ ಒಳಗಾಗಿ 471 ದಿನಗಳ ಸೆರೆಯಲ್ಲಿದ್ದ ಇವರು ಅಂತಿಮವಾಗಿ ಭಾನುವಾರ ಬಿಡುಗಡೆಗೊಂಡಿದ್ದಾರೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.


**ಇನ್ನೂ 33 ಮಂದಿ ಬಿಡುಗಡೆ ನಿರೀಕ್ಷೆ:** ಮೂರು - ಹಂತದ ಒಪ್ಪಂದದ ಅಡಿಯಲ್ಲಿ ಭಾನುವಾರ ಒತ್ತೆಯಾಳುಗಳ ಬಿಡುಗಡೆ ಆಗಿದೆ. ಆರು ವಾರಗಳ ಶಾಂತಿ ಒಪ್ಪಂದ ಈ ಮೂಲಕ ಜಾರಿಗೆ ಬಂದಿದೆ. ಗಾಜಾದ ಆರೋಗ್ಯ ಅಧಿಕಾರಿಗಳ ಪ್ರಕಾರ, 46,900 ಕ್ಕೂ ಹೆಚ್ಚು ಪ್ಯಾಲೆಸ್ತೇನಿಯರು ಈ ಯುದ್ಧದಲ್ಲಿ ಮೃತಪಟ್ಟಿದ್ದಾರೆ.

ಹಮಾಸ್ ಪ್ರತಿ ವಾರ ಮೂರರಿಂದ ನಾಲ್ಕು ಒತ್ತೆಯಾಳುಗಳನ್ನು ಬಿಡುಗಡೆಗೊಳಿಸುತ್ತಾ ಬರುತ್ತದೆ. ಇದಕ್ಕೆ ಪ್ರತಿಯಾಗಿ, ಇಸ್ರೇಲ್ ತನ್ನ ಜೈಲಿನಲ್ಲಿರುವ ನೂರಾರು ಪ್ಯಾಲೆಸ್ತೀನ್ ಬಂಧಿತರನ್ನು ಬಿಡುಗಡೆ ಮಾಡುತ್ತದೆ. ಆಕ್ರಮಿತ ವೆಸ್ಟ್ ಬ್ಯಾಂಕ್ ಮತ್ತು ಪೂರ್ವ ಜೆರುಸಲೆಮ್‌ನ 90 ಜನರನ್ನು ಇಸ್ರೇಲ್ ಬಿಡುಗಡೆ ಮಾಡಿದೆ. ಇದರಲ್ಲಿ ಹೆಚ್ಚಾಗಿ ಮಹಿಳೆಯರು ಮತ್ತು ಮಕ್ಕಳಿದ್ದಾರೆ.

**ರೆಡ್ ಕ್ರಾಸ್ ನೇತೃತ್ವದಲ್ಲಿ ಒತ್ತೆಯಾಳುಗಳ ಬಿಡುಗಡೆ:** ಗಾಜಾದಲ್ಲಿನ ರೆಡ್‌ಕ್ರಾಸ್ ಮೂಲಕ ಹಮಾಸ್ ಮೂವರು ಮಹಿಳಾ ಒತ್ತೆಯಾಳುಗಳನ್ನು ಇಸ್ರೇಲಿ ಪಡೆಗಳಿಗೆ ಹಸ್ತಾಂತರಿಸಿದೆ ಎಂದು ಇಸ್ರೇಲಿ ಮಿಲಿಟರಿ ಹೇಳಿದೆ. ಸ್ವಲ್ಪ ಸಮಯದ ಹಿಂದೆ ಇಸ್ರೇಲ್ ರಕ್ಷಣಾ ಪಡೆಗಳು (ಐಡಿಎಫ್) ಮತ್ತು ಶಿನ್ ಬೆಟ್ ಪಡೆಗಳೊಂದಿಗೆ ಬಿಡುಗಡೆಯಾದ ಒತ್ತೆಯಾಳುಗಳು ಗಾಜಾ ಗಡಿಯನ್ನು ದಾಟಿದರು ಎಂದು ಇಸ್ರೇಲ್ ರಕ್ಷಣಾ ಪಡೆಗಳು ತಿಳಿಸಿವೆ.

# ಕರಡಿ ದಾಳಿಗೆ ತಂದೆ-ಮಗ ಸಾವು ಇನ್ನಿಬ್ಬರಿಗೆ ಗಂಭೀರ ಗಾಯ

**ಛತ್ತೀಸ್‌ಗಢ:** ಕರಡಿ ದಾಳಿಗೆ ತಂದೆ ಹಾಗೂ ಮಗ ಸಾವನ್ನಪ್ಪಿ, ಇನ್ನಿಬ್ಬರು ಗಾಯಗೊಂಡಿರುವ ಘಟನೆ ಛತ್ತೀಸ್‌ಗಢದ ಕಂಕೇರ್ ಜಿಲ್ಲೆಯಲ್ಲಿ ನಡೆದಿದೆ.



ಅರಣ್ಯಾಧಿಕಾರಿಗಳ ಪ್ರಕಾರ, ಕೋರಾರ್ ಅರಣ್ಯ ವ್ಯಾಪ್ತಿಯ ಡೊಂಗರಕಟ್ಟೆ ಗ್ರಾಮದ ಬಳಿಯ ಬೆಟ್ಟದಲ್ಲಿ ಶನಿವಾರ ಈ ಘಟನೆ ನಡೆದಿದೆ. ಕಟ್ಟಿಗೆ ಸಂಗ್ರಹಿಸಲು ಕಾಡಿಗೆ ಹೋಗಿದ್ದವರ ಮೇಲೆ ಕರಡಿ ದಾಳಿ ಮಾಡಿದೆ.

ಸಾವನ್ನಪ್ಪಿದ್ದ ಸುಕಲಾಲ್ ಡಾರೊ ಅವರ ದೇಹವನ್ನು ತೆಗೆಯುತ್ತಿದ್ದ ಅವರ ತಂದೆ ಶಂಕರ್ ಡಾರೊ ಅವರ ಮೇಲೆ ಕರಡಿ ದಾಳಿ ಮಾಡಿದೆ. ಶಂಕರ್ ಡಾರೊ ಅವರು ಕೂಡ ಸಾವನ್ನಪ್ಪಿದ್ದಾರೆ. ಅಜ್ಜು ಕುರೇಟಿ (22) ಅವರ ಮೇಲೆ ಕರಡಿ ಮಾರಣಾಂತಿಕವಾಗಿ ದಾಳಿ ಮಾಡಿದೆ. ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ದಾಳಿಯಲ್ಲಿ ಅರಣ್ಯ ರಕ್ಷಕ ನಾರಾಯಣ್ ಯಾದವ್ ಕೂಡ ಗಾಯಗೊಂಡಿದ್ದಾರೆ ಎಂದು ಅರಣ್ಯ ಅಧಿಕಾರಿ ತಿಳಿಸಿದ್ದಾರೆ.

ಕರಡಿಯ ಚಟುವಟಿಕೆಗಳನ್ನು ಮೇಲ್ವಿಚಾರಣೆ ಮಾಡಲು ಅರಣ್ಯ ಸಿಬ್ಬಂದಿಯನ್ನು ಈ ಪ್ರದೇಶದಲ್ಲಿ ನಿಯೋಜಿಸಲಾಗಿದ್ದು, ಗ್ರಾಮಸ್ಥರು ಕಾಡಿಗೆ ಹೋಗದಂತೆ ಸೂಚಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಅನಧಿಕೃತ ಒಡ್ಡು ನಿರ್ಮಾಣ: ಗಡಿ ಪ್ರದೇಶಕ್ಕೆ ತ್ರಿಪುರಾ ಎಂಜಿನಿಯರುಗಳ ಭೇಟಿ, ಪರಿಶೀಲನೆ

**ಅಗರ್ತಲಾ:** ತ್ರಿಪುರಾ ಸರಕಾರದ ಜಲಸಂಪನ್ಮೂಲ ಇಲಾಖೆಯ ಎಂಜಿನಿಯರ್ ಗಳು ರವಿವಾರ ಉನಕೋಟಿ ಜಿಲ್ಲೆಯ ಗಡಿ ಪ್ರದೇಶಗಳಿಗೆ ಭೇಟಿ ನೀಡಿ ಬಾಂಗ್ಲಾದೇಶ ಸರಕಾರವು ತನ್ನ ಭೂಮಿಯಲ್ಲಿ ನಿರ್ಮಿಸುತ್ತಿರುವ ವಿವಾದಾತ್ಮಕ ಡ್ಯಾಮ್‌ನ ಬಗ್ಗೆ ಅಧ್ಯಯನ ಮಾಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.





ಬಾಂಗ್ಲಾದೇಶವು ನಿರ್ಮಾಣ ಮಾಡುತ್ತಿರುವ ಈ ಒಡ್ಡಿನಿಂದ ಮಾನ್ಸೂನ್ ಸೀಸನ್‌ನಲ್ಲಿ ಜಿಲ್ಲಾ ಕೇಂದ್ರ ಕೈಲಾಶಹರ್ ಮತ್ತು ಗಡಿ ಗ್ರಾಮಗಳಲ್ಲಿ ಪ್ರವಾಹದ ಅಪಾಯ ಎದುರಾಗಬಹುದು ಎಂದು ತ್ರಿಪುರಾ ಎಂಜಿನಿಯರ್‌ಗಳು ಆತಂಕ ವ್ಯಕ್ತಪಡಿಸಿದ್ದಾರೆ.

ಇಲಾಖೆಯ ಎಂಜಿನಿಯರ್‌ಗಳು ಜಿಲ್ಲಾ ಮ್ಯಾಜಿಸ್ಟ್ರೇಟ್ ದಿಲೀಪ್ ಕುಮಾರ್ ಚಕ್ಮಾ ಅವರಿಗೆ ಡ್ಯಾಮ್ ನಿರ್ಮಾಣದ ಬಗ್ಗೆ ವಿವರವಾದ ವರದಿಯನ್ನು ಸಲ್ಲಿಸಲಿದ್ದು, ನಂತರ ಅವರು ರಾಜ್ಯ ಸರ್ಕಾರಕ್ಕೆ ವರದಿ ರವಾನಿಸಲಿದ್ದಾರೆ ಎಂದು ತ್ರಿಪುರಾ ಸರ್ಕಾರದ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಚಕ್ಮಾ ಅವರು ಇತರ ಹಿರಿಯ ಅಧಿಕಾರಿಗಳೊಂದಿಗೆ ಈಗಾಗಲೇ ಶುಕ್ರವಾರ ಗಡಿ ಪ್ರದೇಶಗಳಿಗೆ ಭೇಟಿ ನೀಡಿದ್ದು, ಸೂಕ್ತ ಕ್ರಮಗಳಿಗಾಗಿ ಈ ವಿಷಯದ ಬಗ್ಗೆ ಕೇಂದ್ರ ಸರ್ಕಾರದೊಂದಿಗೆ ಚರ್ಚಿಸಬಹುದು ಎಂದು ಅವರು ಹೇಳಿದರು.

ನೆರೆಯ ದೇಶದ ಮೌಲ್ವಿಬಜಾರ್ ಜಿಲ್ಲೆಯ ಶರಿಪುರ್ ಮತ್ತು ದೇವಿಪುರ ಪ್ರದೇಶಗಳಲ್ಲಿ ಬಾಂಗ್ಲಾದೇಶ ಸರ್ಕಾರ ನಿರ್ಮಿಸುತ್ತಿರುವ ವಿವಾದಾತ್ಮಕ ಡ್ಯಾಮ್‌ನ ಬಗ್ಗೆ ಜಿಲ್ಲಾ ಮ್ಯಾಜಿಸ್ಟ್ರೇಟ್ ಈಗಾಗಲೇ ರಾಜ್ಯ ಸರ್ಕಾರಕ್ಕೆ ಮಾಹಿತಿ ನೀಡಿದ್ದಾರೆ. ಮೌಲ್ವಿಬಜಾರ್ ಜಿಲ್ಲೆಯು ಉತ್ತರ ತ್ರಿಪುರಾದ ಉನಕೋಟಿ ಜಿಲ್ಲೆಯ ಪಕ್ಕದಲ್ಲಿರುವುದು ಗಮನಾರ್ಹ.

ಉಭಯ ದೇಶಗಳನ್ನು ವಿಭಜಿಸುವ ಮನು ನದಿಯ ಉದ್ದಕ್ಕೂ 20 ಅಡಿ ಎತ್ತರ ಮತ್ತು 10 ಅಡಿ ಅಗಲದ ಡ್ಯಾಮ್ ಒಂದನ್ನು ಬಾಂಗ್ಲಾದೇಶ ಸರ್ಕಾರ ನಿರ್ಮಾಣ ಮಾಡುತ್ತಿರುವುದು ಭಾರತಕ್ಕೆ ಆತಂಕ ಮೂಡಿಸಿದೆ. ಬಾಂಗ್ಲಾದೇಶ ಸರ್ಕಾರವು ಭಾರತೀಯ ಅಧಿಕಾರಿಗಳೊಂದಿಗೆ ಯಾವುದೇ ಚರ್ಚೆಯಿಲ್ಲದೆ ತಮ್ಮ ಪ್ರದೇಶಗಳನ್ನು ಪ್ರವಾಹ ನೀರಿನಿಂದ ರಕ್ಷಿಸಲು ಶೂನ್ಯ ರೇಖೆಯ ಉದ್ದಕ್ಕೂ 8 ರಿಂದ 10 ಕಿ.ಮೀ ಉದ್ದದ ಕಾಂಕ್ರೀಟ್ ಒಡ್ಡನ್ನು ನಿರ್ಮಿಸುವ ಕಾರ್ಯಗಳನ್ನು ಕೈಗೊಂಡಿದೆ ಎಂದು ಪ್ರಾಥಮಿಕ ಮಾಹಿತಿಯನ್ನು ಉಲ್ಲೇಖಿಸಿದ ಅಧಿಕಾರಿಯೊಬ್ಬರು ಹೇಳಿದರು. ಬಾಂಗ್ಲಾದೇಶವು ಈಗಾಗಲೇ ಸುಮಾರು 3 ಕಿ.ಮೀ ಒಡ್ಡನ್ನು ನಿರ್ಮಿಸಿದೆ ಮತ್ತು ಉಳಿದ ಭಾಗವನ್ನು ನಿರ್ಮಿಸುವ ಕೆಲಸ ನಡೆಯುತ್ತಿದೆ.

# ಗವರ್ನರ್ ಹುದ್ದೆಗೆ ಸ್ಪರ್ಧಿಸಲು ವಿವೇಕ್ ರಾಮಸ್ವಾಮಿ ಪ್ಲಾನ್

**ನ್ಯೂಯಾರ್ಕ್:** ಸರ್ಕಾರದ ದಕ್ಷತೆಯನ್ನು ಸುಧಾರಿಸುವ ಸಂಸ್ಥೆಯೊಂದರ ಸಹ ಮುಖ್ಯಸ್ಥರಾಗಿ ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೇಮಕ ಮಾಡಿರುವ ವಿವೇಕ್ ರಾಮಸ್ವಾಮಿ ಅವರು, ಓಹಿಯೋ ಗವರ್ನರ್ ಹುದ್ದೆಗೆ ಸ್ಪರ್ಧಿಸಲು ಯೋಜಿಸುತ್ತಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ.

ಮೂಲಗಳ ಪ್ರಕಾರ, ರಾಮಸ್ವಾಮಿ ಅವರು "ಶೀಘ್ರದಲ್ಲೇ" ಗವರ್ನರ್ ಹುದ್ದೆಗೆ ಸ್ಪರ್ಧಿಸುವ ಬಗ್ಗೆ ಘೋಷಿಸಲಿದ್ದಾರೆ ಎಂದು ಇಲ್ಲಿನ ಮಾಧ್ಯಮಗಳು ವರದಿ ಮಾಡಿವೆ. ಒಂದು ವೇಳೆ ಅವರು ಚುನಾಯಿತರಾದರೆ, ಅವರು ಲೂಯಿಸಿಯಾನದಲ್ಲಿ ಬಾಬಿ ಜಿಂದಾಲ್ ಮತ್ತು ದಕ್ಷಿಣ ಕೆರೊಲಿನಾದ ನಿಕ್ಕಿ ಹ್ಯಾಲಿ ನಂತರ ಚುನಾಯಿತರಾದ ಮೂರನೇ ಭಾರತೀಯ - ಅಮೆರಿಕನ್ ಗವರ್ನರ್ ಆಗಲಿದ್ದಾರೆ.

ಎಡಪಂಥೀಯ ವಿರೋಧಿ ಹೋರಾಟಗಾರ ರಾಮಸ್ವಾಮಿ (39) ರಿಪಬ್ಲಿಕನ್ ಪಕ್ಷದ ಅಧ್ಯಕ್ಷೀಯ ನಾಮ ನಿರ್ದೇಶನಕ್ಕಾಗಿ ಟ್ರಂಪ್ ವಿರುದ್ಧ ಸ್ಪರ್ಧಿಸಿದ್ದರು. ಆದರೆ, ನಂತರ ಅವರ ಬೆಂಬಲಿಗರಲ್ಲಿ ಒಬ್ಬರಾಗಲು ಆ ಸ್ಪರ್ಧೆಯಿಂದ ಹಿಂದೆ ಸರಿದಿದ್ದರು.

ಟ್ರಂಪ್ ಅವರು ರಾಮಸ್ವಾಮಿ ಅವರನ್ನ ಎಲೋನ್ ಮಸ್ಕ್ ಅವರೊಂದಿಗೆ ಸರ್ಕಾರದ ದಕ್ಷತೆಯ ವಿಭಾಗದ ಸಹ-ಮುಖ್ಯಸ್ಥರನ್ನಾಗಿ ನೇಮಕ ಮಾಡಿದ್ದರು. ಪ್ರಚಾರದ ಸಮಯದಲ್ಲಿ ಅವರನ್ನು ವಿದೇಶಾಂಗ ಕಾರ್ಯದರ್ಶಿಯಾಗಿಯೂ ಪರಿಗಣಿಸಬಹುದು ಎಂದು ಸುಳಿವು ನೀಡಿದ್ದರು. "ಅವರು ನಿಜವಾಗಿಯೂ ಬುದ್ಧಿವಂತರಾಗಿದ್ದಾರೆ ಮತ್ತು ಅವರು ನಮ್ಮ ಆಡಳಿತದಲ್ಲಿ ಭಾಗಿಯಾಗಲಿದ್ದಾರೆ ಎಂದು ನಾನು ಭಾವಿಸುತ್ತೇನೆ" ಎಂದು ಟ್ರಂಪ್ ಹೇಳಿದ್ದರು. ಅಷ್ಟೇ ಅಲ್ಲ. ನಾವು ಅವರಿಗೆ ಈ ದೊಡ್ಡ ಕೆಲಸಕ್ಕೆ ನೇಮಿಸಬಹುದು. ಮತ್ತು ನೀವೆಲ್ಲರೂ ಯೋಚಿಸುವುದಕ್ಕಿಂತ ಉತ್ತಮವಾಗಿ ಅವರು ಕೆಲಸ ಮಾಡುತ್ತಾರೆ ಎಂಬ ವಿಶ್ವಾಸ ನನಗಿದೆ ಎಂದಿದ್ದರು.

# ಪೊಲೀಸರಿಗೂ ಶಸ್ತ್ರಾಸ್ತ್ರ ನೀಡಬೇಕು ಎಂಬ ಕೂಗು

**ಹೈದರಾಬಾದ್:** ತೆಲಂಗಾಣದಲ್ಲಿ ಬಂದೂಕು ಸಂಬಂಧಿತ ಅಪರಾಧಿ ಕೃತ್ಯಗಳ ಸಂಖ್ಯೆ ಏರ ತೊಡಗಿದ್ದು, ಅಫ್ಜಲ್‌ಗಂಜ್ ಘಟನೆ ಬಳಿಕ ಪೊಲೀಸರು ಮತ್ತಷ್ಟು ಬಿಗಿಯಾದ ಕ್ರಮಕ್ಕೆ ಮುಂದಾಗಿದ್ದಾರೆ. ಹೆಚ್ಚುತ್ತಿರುವ ಅಪರಾಧ ಪ್ರಕರಣ ತಡೆ ಹಾಗೂ ರಕ್ಷಣೆಗಾಗಿ ತಮ್ಮ ಸಿಬ್ಬಂದಿಗಳಿಗೂ ಶಸ್ತ್ರಾಸ್ತ್ರ ನೀಡಿ ಅವರಿಗೆ ಬಲ ನೀಡಬೇಕು ಎಂಬ ಕುರಿತು ಚರ್ಚೆ ನಡೆದಿದೆ, ಈ ಕುರಿತು ಶೀಘ್ರವೇ ಆದೇಶ ಹೊರ ಬೀಳುವ ಸಾಧ್ಯತೆಗಳೂ ಇವೆ.

ಕಳೆದ 9 ವರ್ಷಗಳ ಹಿಂದೆ ಸೂರ್ಯಾಪೇಟ್ ಬಸ್ ನಿಲ್ದಾಣದಲ್ಲಿ ಎಸ್‌ಐಎಂಐ ಭಯೋತ್ಪಾದಕರು ಇಬ್ಬರು ಶಸ್ತ್ರಾಸ್ತ್ರ ಹೊಂದಿರದ ಪೊಲೀಸರ ಮೇಲೆ ದಾಳಿ ನಡೆಸಿದ ದುರ್ಘಟನೆ ನಡೆದಿತ್ತು. ಇದರ ಬೆನ್ನಲ್ಲೇ ಪೊಲೀಸ್ ಸಿಬ್ಬಂದಿಗೂ ಶಸ್ತ್ರಾಸ್ತ್ರ ನೀಡಬೇಕು ಎಂಬ ಪ್ರಸ್ತಾವನೆ ಆಗ ಕೇಳಿ ಬಂದಿತ್ತಾದರೂ ಬಳಿಕ ಅದು ತೆರೆಮರೆಗೆ ಸರಿಯಿತು.

ಹಿಂದೆ ಆಂಧ್ರಪ್ರದೇಶದಲ್ಲಿ ಎಡಪಂಥೀಯ ಉಗ್ರವಾದದ ಉತ್ತುಂಗದಲ್ಲಿದ್ದಾಗ, ಮಾವೋವಾದಿ ಪೀಡಿತ ಪ್ರದೇಶಗಳಲ್ಲಿನ ಪೊಲೀಸ್ ಠಾಣೆಗಳು ಶಸ್ತ್ರಾಸ್ತ್ರಗಳಿಂದ ಸುಸಜ್ಜಿತವಾಗಿದ್ದು, ಈ ರೀತಿಯ ದಾಳಿಗಳನ್ನು ಎದುರಿಸಲು ಸಜ್ಜಾಗಿದ್ದವು. ಹಿರಿಯ ಅಧಿಕಾರಿಗಳು ಮತ್ತು ಅಧೀನ ಅಧಿಕಾರಿಗಳು ಶಸ್ತ್ರಸಜ್ಜಿತರಾಗಿದ್ದು, ಸಶಸ್ತ್ರ ಗಾರ್ಡ್‌ಗಳೊಂದಿಗೆ ಸೆಂಟ್ರಿ ಪೋಸ್ಟ್‌ಗಳನ್ನು ಸನ್ನದ್ಧವಾಗಿಡಲಾಗುತ್ತಿತ್ತು. ಆದರೆ, ಮಾವೋವಾದಿಗಳ ಬೆದರಿಕೆ ಕಡಿಮೆಯಾದಂತೆ, ಈ ನೀತಿಯಲ್ಲಿ ಬದಲಾವಣೆ ಆಯಿತು.

ಮಾವೋ ಪೀಡಿತ ಪ್ರದೇಶದಲ್ಲಿ ಅಧಿಕಾರಿಗಳಿಗೆ ಪಿಸ್ತೂಲ್‌ನಂತಹ ಸಣ್ಣ ಶಸ್ತ್ರಾಸ್ತ್ರಗಳಿಗೆ ಸೀಮಿತವಾಗಿದೆ. ನಗರದಲ್ಲಿರುವ ಭದ್ರತಾ ಕರ್ತವ್ಯದಲ್ಲಿ ಸಿಬ್ಬಂದಿಗೆ ಶಸ್ತ್ರಾಸ್ತ್ರಗಳನ್ನು ನೀಡುತ್ತಿಲ್ಲ. ಪೊಲೀಸರಿಗೆ ಶಸ್ತ್ರಾಸ್ತ್ರ ಬೇಕು ಬೇಕು ಎಂಬ ಬೇಡಿಕೆ ಹೊಸದೇನಲ್ಲ. ಅನೇಕ ಹಳೆಯ ಘಟನೆಗಳು ಈ ಬೇಡಿಕೆಯನ್ನು ಪುಷ್ಟೀಕರಿಸಿದೆ.

ಇತ್ತೀಚಿನ ಬೆಳವಣಿಗೆಯಲ್ಲಿ ರಾಜ್ಯದಲ್ಲಿ ಶಸ್ತ್ರಾಸ್ತ್ರಗಳ ಕಳ್ಳಸಾಗಣೆ ಪ್ರಕರಣಗಳು ಕಂಡು ಬರುತ್ತಿದ್ದು, ಇದು ಪೊಲೀಸರು ಶಸ್ತ್ರಾಸ್ತ್ರಗಳಿಗೆ ಬೇಡಿಕೆ ಹೆಚ್ಚಿಸಿದೆ. ಕರ್ನಾಟಕದ ಬೀದರ್‌ನಲ್ಲಿ ದರೋಡೆ ಮತ್ತು ಹೈದರಾಬಾದ್ ಘಟನೆಗಳು ಈ ಕುರಿತು ತುರ್ತು ಕ್ರಮಕ್ಕೆ ಒತ್ತಾಯಿಸಿದೆ. ಅಧಿಕಾರಿಗಳು ಕೂಡ ಈ ಸಿಬ್ಬಂದಿಗಳಿಗೆ ಶಸ್ತ್ರಾಸ್ತ್ರ ನೀಡುವ ಕುರಿತು ಪ್ರಸ್ತಾವನೆಗೆ ಒತ್ತು ಕೊಟ್ಟಿದ್ದು, ಕಾನೂನು ಸುರಕ್ಷತೆ ಹೆಚ್ಚಿಸಲು ಮುಂದಾಗಿದ್ದಾರೆ.

# ಇಸ್ರೇಲ್ ರಾಷ್ಟ್ರೀಯ ಭದ್ರತಾ ಸಚಿವ ಇಟಾಮರ್ ಬೆನ್-ಗ್ವಿರ್ ರಾಜೀನಾಮೆ

**ಟೆಲ್ ಅವೀವ್:** ಹಮಾಸ್‌ನೊಂದಿಗೆ ಕದನ ವಿರಾಮ ಮಾಡಿಕೊಂಡಿರುವುದನ್ನು ವಿರೋಧಿಸಿ ಇಸ್ರೇಲ್‌ನ ರಾಷ್ಟ್ರೀಯ ಭದ್ರತಾ ಸಚಿವ ಇಟಾಮರ್ ಬೆನ್-ಗ್ವಿರ್ ಭಾನುವಾರ ರಾಜೀನಾಮೆ ಸಲ್ಲಿಸಿದ್ದು, ಅವರ ಪಕ್ಷವು ಪ್ರಧಾನಿ ಬೆಂಜಮಿನ್ ನೆತನ್ಯಾಹು ಸಮ್ಮಿಶ್ರ ಸರ್ಕಾರದಿಂದ ಹೊರಬಂದಿದೆ. ಕದನ ವಿರಾಮ ಮಾಡಿಕೊಂಡಿರುವುದು ಅಪಾಯಕಾರಿ ಮತ್ತು ಇದು ಭಯೋತ್ಪಾದನೆಗೆ ಶರಣಾಗತಿಯನ್ನು ಸೂಚಿಸುವ ಒಪ್ಪಂದವಾಗಿದೆ ಎಂದು ಬೆನ್-ಗ್ವಿರ್ ತಮ್ಮ ರಾಜೀನಾಮೆ ಪತ್ರದಲ್ಲಿ ತಿಳಿಸಿದ್ದಾರೆ.



ಯುದ್ಧ ನಿಲ್ಲಿಸುವುದು, ಸೇನಾ ಪಡೆಗಳನ್ನು ಹಿಂತೆಗೆದುಕೊಳ್ಳುವುದು ಮತ್ತು ಇಸ್ರೇಲಿಗಳ ವಿರುದ್ಧದ ದಾಳಿ ಪ್ರಕರಣಗಳಲ್ಲಿ ಶಿಕ್ಷೆಗೊಳಗಾದ ಪ್ಯಾಲೆಸ್ತೈನ್ ಕೈದಿಗಳ ಬಿಡುಗಡೆಯನ್ನು ತಾವು ವಿರೋಧಿಸುವುದಾಗಿ ಬೆನ್-ಗ್ವಿರ್ ಹೇಳಿದರು. ಇದಲ್ಲದೆ ಸ್ಥಳಾಂತರಗೊಂಡ ಪ್ಯಾಲೆಸ್ತೈನಿಯರು ಉತ್ತರ ಗಾಜಾದಲ್ಲಿನ ತಮ್ಮ ಮನೆಗಳಿಗೆ ಮರಳಲು ಇಸ್ರೇಲ್ ಒಪ್ಪಂದದಲ್ಲಿ ಅವಕಾಶ ನೀಡಿದ್ದನ್ನೂ ವಿರೋಧಿಸುವುದಾಗಿ ಅವರು ತಿಳಿಸಿದ್ದಾರೆ. ಒಂದೊಮ್ಮೆ ಇಸ್ರೇಲ್ ಹಮಾಸ್ ವಿರುದ್ಧದ ಯುದ್ಧವನ್ನು ಪುನಾರಂಭಿಸಿದರೆ ತಮ್ಮ ಪಕ್ಷವು ಮತ್ತೆ ಸರ್ಕಾರಕ್ಕೆ ಮರಳಬಹುದು ಎಂದು ಅವರು ಹೇಳಿದರು.

ಹಮಾಸ್‌ನ ಸಶಸ್ತ್ರ ವಿಭಾಗವು ಸಾಮಾಜಿಕ ಮಾಧ್ಯಮದಲ್ಲಿ ಹೆಸರುಗಳನ್ನು ಪ್ರಕಟಿಸಿದ ನಂತರ ಇಸ್ರೇಲ್ ಈ ಬಗ್ಗೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಅಕ್ಟೋಬರ್ 7, 2023ರಂದು ಪ್ರಾರಂಭವಾದ ಯುದ್ಧವು ಗಾಜಾದಲ್ಲಿ 46,000ಕ್ಕೂ ಹೆಚ್ಚು ಜನರನ್ನು ಬಲಿ ತೆಗೆದುಕೊಂಡಿದೆ. ಹೋರಾಟದಲ್ಲಿ ನೂರಾರು ಇಸ್ರೇಲಿ ಸೈನಿಕರು ಸಹ ಪ್ರಾಣ ಕಳೆದುಕೊಂಡಿದ್ದಾರೆ.

# ಭಾರತಕ್ಕೆ ಖೋ-ಖೋ ವಿಶ್ವಕಪ್ ಡಬಲ್ ಸಂಭ್ರಮ

## ಚೊಚ್ಚಲ ಪ್ರಶಸ್ತಿಗೆ ಮುತ್ತಿಕ್ಕಿದ ಮಹಿಳಾ, ಪುರುಷರ ತಂಡಗಳು






**ನವದೆಹಲಿ:** ಇಲ್ಲಿನ ದೆಹಲಿಯು ಇಂದಿರಾ ಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ ಖೋ – ಖೋ ವಿಶ್ವಕಪ್ ಫೈನಲ್ ಪಂದ್ಯದಲ್ಲಿ ಗೆಲುವು ಸಾಧಿಸುವ ಮೂಲಕ ಭಾರತದ ಮಹಿಳಾ ಹಾಗೂ ಪುರುಷರ ತಂಡಗಳು ಚೊಚ್ಚಲ ಟ್ರೋಫಿಗಳನ್ನು ಮುಡಿಗೇರಿಸಿಕೊಂಡಿವೆ.

ಭಾನುವಾರ ಮೊದಲು ನಡೆದ ಮಹಿಳೆಯರ ಫೈನಲ್ ಪಂದ್ಯದಲ್ಲಿ ನೇಪಾಳ ತಂಡವನ್ನು ಮಣಿಸಿದ ಭಾರತ ಟ್ರೋಫಿಯನ್ನು ಎತ್ತಿ ಹಿಡಿಯಿತು. ನಂತರ ನಡೆದ ಪುರುಷರ ಫೈನಲ್ ಪಂದ್ಯದಲ್ಲಿಯೂ ಕೂಡ ಭಾರತದ ಪುರುಷರ ತಂಡ ನೇಪಾಳ ತಂಡವನ್ನು ಮಣಿಸಿ ಪ್ರಶಸ್ತಿ ಗೆದ್ದುಕೊಂಡಿತು.

ಪ್ರಿಯಾಂಕಾ ಇಂಗ್ಲೆ ನಾಯಕತ್ವದ ಮಹಿಳಾ ತಂಡ ನೇಪಾಳವನ್ನು 78–40 ಅಂಕಗಳ ಅಂತರದಿಂದ ಸೋಲಿಸಿ ಚಾಂಪಿಯನ್ ಆಗಿ ಹೊರಹೊಮ್ಮಿತು. ಭಾರತ ಚೇಸ್ ಮತ್ತು ಡಿಫೆನ್ಸ್ ಎರಡರಲ್ಲೂ ಪ್ರಾಬಲ್ಯ ಮೆರೆಯಿತು.

ಟರ್ನ್–1ರಲ್ಲಿ ದಾಳಿಗಿಳಿದ ವುಮೆನ್ ಇನ್ ಬ್ಲೂ ತಂಡ ರಕ್ಷಣಾ ವಿಭಾಗದಲ್ಲಿ ನೇಪಾಳದ ಆಟಗಾರ್ತಿಯರು ಮಾಡಿದ ತಪ್ಪುಗಳ ಸಂಪೂರ್ಣ ಲಾಭ ಪಡೆದು, 34–0 ಅಂತರದ ಬೃಹತ್ ಮುನ್ನಡೆ ಸಾಧಿಸಿತು. ಎರಡನೇ ಟರ್ನ್‌ನಲ್ಲಿ ನೇಪಾಳ ತಂಡ ಪ್ರತಿರೋಧ ನೀಡಿತ್ತಾದರೂ ಭಾರತದ ಡಿಫೆಂಡರ್‌ಗಳು ಸುಲಭವಾಗಿ ಅಂಕ ಗಳಿಸಲು ಅವಕಾಶ ನೀಡಲಿಲ್ಲ. ಹೀಗಾಗಿ, ಎರಡನೇ ಟರ್ನ್ 35–24 ಅಂಕಗಳ ಮುನ್ನಡೆ ಸಾಧಿಸಿತು.

ಮೂರನೇ ಟರ್ನ್‌ನಲ್ಲಿ ಮತ್ತೊಮ್ಮೆ ದಾಳಿಗಿಳಿದ ಟೀಂ ಇಂಡಿಯಾ 49 ಅಂಕಗಳ ಭಾರಿ ಮುನ್ನಡೆ ಪಡೆದುಕೊಳ್ಳುವಲ್ಲಿ ಯಶಸ್ವಿಯಾಯಿತು.

4ನೇ ಮತ್ತು ಕೊನೆಯ ಟರ್ನ್‌ನಲ್ಲಿ ನೇಪಾಳ ತಂಡ ಭಾರತ ತಂಡದ ಡಿಫೆಂಡರ್‌ಗಳನ್ನು ಔಟ್ ಮಾಡಲು ತುಂಬಾ ಕಷ್ಟಪಟ್ಟರು. ಅಂತಿಮವಾಗಿ ಭಾರತ ಮಹಿಳಾ




ತಂಡ 78–40 ಅಂಕಗಳ ಅಂತರದಿಂದ ನೇಪಾಳವನ್ನು ಮಣಿಸಿ ಪ್ರಶಸ್ತಿ ಜಯಿಸಿತು.

ಪುರುಷರ ತಂಡ ಚಾಂಪಿಯನ್: ಚೊಚ್ಚಲ ಖೋ ಖೋ ವಿಶ್ವಕಪ್‌ನಲ್ಲಿ ರೋಚಕ ಫೈನಲ್‌ನಲ್ಲಿ ನೇಪಾಳವನ್ನು 54–36 ಅಂಕಗಳಿಂದ ಸೋಲಿಸಿದ ಭಾರತೀಯ ಪುರುಷರ ತಂಡವು ಕೂಡ ವಿಶ್ವ ಚಾಂಪಿಯಕನ್ ಆಗಿ ಹೊರ ಹೊಮ್ಮಿತು. ಭಾರತದ ಗೆಲುವಿನಲ್ಲಿ ನಾಯಕ ಪ್ರತೀಕ್ ವೈಕರ್ ಹಾಗೂ ರಾಮ್ ಜಿ ಕಶ್ಯಪ್ ಮಹತ್ವದ ಪಾತ್ರ ವಹಿಸಿದರು. ಶನಿವಾರ ನಡೆದ ಸೆಮಿ ಫೈನಲ್‌ನಲ್ಲಿ ದಕ್ಷಿಣ ಆಫ್ರಿಕಾ ತಂಡವನ್ನು 62–42 ಅಂಕಗಳಿಂದ ಮಣಿಸಿದ ಭಾರತ ಪುರುಷರ ತಂಡ ಫೈನಲ್‌ಗೆ ತಲುಪಿತ್ತು.

ಇನ್ನು, ಒಂದೇ ದಿನದಲ್ಲಿ ಮಹಿಳಾ ಮತ್ತು ಪುರುಷರ ತಂಡಗಳು ಚಾಪಿಯನ್ ಆಗುವ ಮೂಲಕ ಇತಿಹಾಸ ನಿರ್ಮಿಸಿವೆ.

### ಪ್ರಧಾನಿ ಅಭಿನಂದನೆ:

ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿ, "ಚೊಚ್ಚಲ ಖೋ – ಖೋ ವಿಶ್ವಕಪ್ ಗೆದ್ದ ಭಾರತೀಯ ಮಹಿಳಾ ತಂಡಕ್ಕೆ ಅಭಿನಂದನೆಗಳು. ಈ ಐತಿಹಾಸಿಕ ಗೆಲುವು ಅವರ ಅಪ್ರತಿಮ ಕೌಶಲ್ಯ, ದೃಢಸಂಕಲ್ಪವನ್ನು ಪ್ರದರ್ಶಿಸುತ್ತದೆ. ಈ ಜಯ ಭಾರತದ ಅತ್ಯಂತ ಹಳೆಯ ಸಾಂಪ್ರದಾಯಿಕ ಕ್ರೀಡೆಗೆ ಕಡೆಗೆ ತಿರುಗಿ ನೋಡುವಂತೆ ಮಾಡಿದೆ. ರಾಷ್ಟ್ರದಾದ್ಯಂತ ಅಸಂಖ್ಯಾತ ಯುವ ಕ್ರೀಡಾಪಟುಗಳನ್ನು ಇದು ಪ್ರೇರೇಪಿಸಿದೆ. ಈ ಸಾಧನೆಯು ಮುಂದಿನ ದಿನಗಳಲ್ಲಿ ಇನ್ನಷ್ಟು ಯುವಕರು ಈ ಕ್ರೀಡೆಯಲ್ಲಿ ಪಾಲ್ಗೊಳ್ಳಲು ದಾರಿ ಮಾಡಿಕೊಡಲಿ" ಎಂದಿದ್ದಾರೆ.

## ಚೊಚ್ಚಲ ಖೋ ಖೋ ವಿಶ್ವಕಪ್ ಮುಡಿಗೇರಿಸಿಕೊಂಡ ಭಾರತ ತಂಡಕ್ಕೆ ಶುಭಕೋರಿದ ಸಿಎಂ ಸಿದ್ದರಾಮಯ್ಯ

**ಬೆಂಗಳೂರು:** ಚೊಚ್ಚಲ ಖೋ ಖೋ ವಿಶ್ವಕಪ್ ಫೈನಲ್ ಪಂದ್ಯದಲ್ಲಿ ಭಾರತದ ಮಹಿಳಾ, ಮತ್ತು ಪುರುಷರ ತಂಡ ಗೆಲುವು ಸಾಧಿಸಿದ್ದು ಸಿಎಂ ಸಿದ್ದರಾಮಯ್ಯ ಟ್ವೀಟ್ ಮಾಡಿ ಶುಭಕೋರಿದ್ದಾರೆ.



ಈ ಕುರಿತು ಟ್ವಿಟ್ ಮಾಡಿರುವ ಸಿಎಂ ಸಿದ್ದರಾಮಯ್ಯ, ಮೊಟ್ಟ ಮೊದಲ ಖೊ □ ಖೊ ವಿಶ್ವಕಪ್ ಪಂದ್ಯಾಕೂಟದಲ್ಲಿ ನೇಪಾಳವನ್ನು ಬಗ್ಗುಬಡಿದು ಪ್ರಶಸ್ತಿ ಮುಡಿಗೇರಿಸಿಕೊಂಡಿರುವ ಭಾರತದ ಮಹಿಳಾ ಮತ್ತು ಪುರುಷರ ಖೊ–ಖೊ ತಂಡಕ್ಕೆ ಅಭಿನಂದನೆಗಳು. ಚೊಚ್ಚಲ ಖೊ–ಖೊ ವಿಶ್ವಕಪ್‌ನಲ್ಲಿ ಭಾರತೀಯ ತಂಡಗಳ ಈ ಅಮೋಘ ಸಾಧನೆ ಇತಿಹಾಸದ ಪುಟಗಳಲ್ಲಿ ಶಾಶ್ವತವಾಗಿ ಉಳಿಯಲಿದೆ.ಮೈಸೂರು ಜಿಲ್ಲೆಯ ಟಿ ನರಸೀಪುರ ತಾಲೂಕಿನ ಕುರುಬೂರಿನ ಯುವತಿ ಚೈತ್ರ. ಬಿ ಅವರು ವಿಶ್ವವಿಜೇತ ಮಹಿಳಾ ಖೊ–ಖೊ ತಂಡದ ಭಾಗವಾಗಿರುವುದು ನಾಡಿಗೆ ಹೆಮ್ಮೆಯ ಸಂಗತಿ. ಭಾರತೀಯರ ಪಾಲಿಗೆ ಇದೊಂದು ಐತಿಹಾಸಿಕ ದಿನ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

**ಸಂಸದರಿಂದ ಅಭಿನಂದನೆ:** ಚೊಚ್ಚಲ ಖೋ ಖೋ ವಿಶ್ವಕಪ್ ಫೈನಲ್ ಪಂದ್ಯದಲ್ಲಿ ಮಹಿಳಾ ತಂಡ ಭರ್ಜರಿ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಚಾಮರಾಜನಗರ ಸಂಸದ ಸುನಿಲ್ ಬೋಸ್ ಶುಭಕೋರಿದ್ದಾರೆ.

ಈ ಕುರಿತು ಟ್ವೀಟ್ ಮಾಡಿರುವ ಸುನೀಲ್ ಬೋಸ್, ವಿಶ್ವಕಪ್ ಖೋ–ಖೋ ಪಂದ್ಯಾವಳಿಯಲ್ಲಿ ನೇಪಾಳ ತಂಡವನ್ನು ಮಣಿಸಿ ಭರ್ಜರಿ ಗೆಲುವು ಸಾಧಿಸಿದ ಭಾರತ ಮಹಿಳಾ ಖೋ ಖೋ ತಂಡಕ್ಕೆ ಹೃದಯ ಪೂರ್ವಕ ಅಭಿನಂದನೆಗಳು.

ಇದೇ ವೇಳೆ ದೇಶದ ಪರವಾಗಿ ಆಡಿ ಗಮನ ಸೆಳೆದ ನಮ್ಮ ಟಿ ನರಸಿಪುರ ತಾಲೂಕಿನ ಬಿ ಚೈತ್ರ ಅವರಿಗೂ ಅಭಿನಂದನೆಗಳು. ಕ್ರೀಡಾ ಲೋಕದಲ್ಲಿ ಕನಸು ಹೊತ್ತಿರುವ ಲಕ್ಷಾಂತರ ಕ್ರೀಡಾಪಟುಗಳಿಗೆ ನಿಮ್ಮ ಸಾಧನೆ ಪ್ರೇರಣೆಯಾಗಲಿ ಮನದುಂಬಿ ಹಾರೈಸುತ್ತೇನೆ ಎಂದು ತಿಳಿಸಿದ್ದಾರೆ.

# ಯಕ್ಷಗಾನಕ್ಕೂ ಸೈ ಎಂದ ಉಮಾಶ್ರೀ



ಹೀಗೆ ವೇದಿಕೆ ಮೇಲೆ ನೀಲಿ ಬಣ್ಣದ ಸೀರೆಯುಟ್ಟು.. ನಿಬ್ಬೆರಗಾಗುವಂತೆ ನಟನೆ ಮಾಡ್ತಿರೋ ಮಹಿಳೆ.. ತನ್ನ ಅಭಿನಯದಿಂದಲೇ ಎಲ್ಲರನ್ನ ಹಿಡಿದಿಟ್ಟುಕೊಂಡಿದ್ದಾಳೆ.. ನಿಜವಾಗ್ಲೂ ಮಂಥರೇಯೇ ಆಹ್ವಾನ ಆಗಿದ್ದಾಳಾ ಅನ್ನೋ ಮಟ್ಟಿಗೆ ಎಲ್ಲರನ್ನ ತನ್ನತ್ತ ಸೆಳೆಯುತ್ತಿರೋ.. ಈಕೆ ಬೇರ್ಯಾರು ಅಲ್ಲಾ.. ಕನ್ನಡ ಸಿನಿರಂಗದಲ್ಲಿ ದಶಕಗಳಿಂದ ಅಭಿನಯಿಸುತ್ತಿರೋ ಕಲಾಪುತ್ರಿ ಪುಟ್ನಂಜನ ಪುಟ್ಮಲ್ಲಿ.. ಹಾಸ್ಯ ನಟಿ, ಡಾಕ್ಟರ್ ಉಮಾಶ್ರೀ..

ಹೌದು, .. ರಂಗಭೂಮಿ ಸಿನಿರಂಗ.. ರಾಜಕೀಯ.. ಸೀರಿಯಲ್‌ನಲ್ಲೂ ತನ್ನ ನೈಜ ನಟನೆಯಿಂದ ಯಾವುದೇ ಪಾತ್ರ ಕೊಟ್ರೂ ನಿರರ್ಗಳವಾಗಿ ಅಭಿನಿಯಿಸುವ ಈ ಅಭಿನೇತ್ರಿ ಈಗ ಯಕ್ಷರಂಗಕ್ಕೂ ಎಂಟ್ರಿ ಕೊಟ್ಟಿದ್ದಾರೆ. ನಟಿ ಉಮಾಶ್ರೀಗೆ ವಯಸ್ಸು 67 ಆಗಿದೆ. ಆದ್ರೆ ಬಣ್ಣ ಹಚ್ಚಿದ್ರು ಅಂದ್ರೆ ಮುಗೀತು. ಎಲ್ಲೆ ಇರಲಿ ಯಾವ್ದೆ ಸ್ಟೇಜ್ ಆಗ್ಲಿ ಉಮಾಶ್ರೀ ಮೈ ಮೇಲೆ ಅಭಿನಯ ಆಹ್ವಾನ ಆಗುತ್ತೆ. ಈಗ ಕರಾವಳಿ ಕಲೆಯ ಯಕ್ಷಗಾನದಲ್ಲೂ ಉಮಾಶ್ರೀ ಸೈ ಎನಿಸಿಕೊಂಡಿದ್ದಾರೆ. ಕನ್ನಡ ಸಿನಿರಂಗ ಕಂಡ ಅದ್ಭುತ ನಟಿ ಉಮಾಶ್ರೀ.. ಗ್ಲಾಮರ್ ಗೊಂಬೆಯಾಗಿ ಸಿನಿರಂಗಕ್ಕೆ ಎಂಟ್ರಿ ಕೊಟ್ಟಿದ ಉಮಾಶ್ರೀ ಆನಂತರ ಹಾಸ್ಯ ನಟಿಯಾಗಿ ಮಿಂಚಿದ್ರು.. ಒಂದು ಲೆಕ್ಕದಲ್ಲಿ ಹೇಳೋದಾದ್ರೆ ರಾರಾಜಿಸಿದ್ರು.. ಈಕೆ ಹಾಸ್ಯ ಕಲಾವಿಧೆಯಾಗಿ ಅಷ್ಟೇ ಅಲ್ಲ.. ಯಾವ ಪಾತ್ರ ಕೊಟ್ರೂ ಮಾಡಬಲ್ಲೇ ಅನ್ನೋದನ್ನ ಕ್ರೇಜಿಸ್ಟಾರ್ ರವಿಚಂದ್ರನ್ ಅವರ ಪುಟ್ನಂಜ ಸಿನಿಮಾದಲ್ಲಿ ವಟಗುಟ್ಟೋ ಅಜ್ಜಿಯ ಪಾತ್ರವನ್ನ ಮಾಡಿ ಸೈ ಎನಿಸಿಕೊಂಡಿದ್ರು..

ಅಳು, ನಗು, ಪ್ರೀತಿ, ಸಿಟ್ಟು ಆಕ್ರೋಶ, ಯಾವ ರೋಲ್ ಆದ್ರೂ ಉಮಾಶ್ರೀ ಮೀರಿಸೋ ಮತ್ತೊಬ್ಬ ನಟಿ ಇಲ್ಲ.. ಹಾಗೆ ನೋಡಿದ್ರೆ ಉಮಾಶ್ರೀ ಅವರಿಗೆ ರಂಗಭೂಮಿ ಹೊಸದೇನೂ ಅಲ್ಲ.. ಅವರು ಬಣ್ಣ ಹಚ್ಚಿದ್ದೇ ಇಲ್ಲಿಂದ ಆನಂತರ ಸಿನಿಮಾ.. ಸೀರಿಯಲ್‌ನಲ್ಲಿ ಪುಟ್ಟಕ್ಕ ಮಿಂಚಿದ್ರು.. ಆದ್ರೆ ಯಕ್ಷಗಾನ ಯಕ್ಷರಂಗ ಉಮಾಶ್ರೀಗೆ ಕಂಪ್ಲೀಟ್ ಹೊಸದೇ.. ಹೊನ್ನಾವರದ ಪೆರ್ಡೂರು ಮೇಳದಿಂದ ಆಯೋಜನೆಗೊಂಡಿದ್ದ ಶ್ರೀ ರಾಮ ಪಟ್ಟಾಭಿಷೇಕ, ಮಾಯಾಮೃಗಾವತಿ ಎಂಬ ಯಕ್ಷಗಾನದಲ್ಲಿ ಉಮಾಶ್ರೀ ಮಂಥರೇಯಾಗಿ ಅಭಿನಯಿಸಿದ್ದಾರೆ.. ಉಮಾಶ್ರೀ ಅಭಿನಯಕ್ಕೆ ಅಲ್ಲಿ ನೆರೆದಿದ್ದ ಪ್ರೇಕ್ಷಕರು ನಿಬ್ಬೆರಗಾಗಿದ್ದಾರೆ. 67 ರ ವಯಸ್ಸಿನಲ್ಲೂ ಅದೇ ಹುಮ್ಮಸ್ಸಿನಲ್ಲಿ ಇಂಥ ಪಾತ್ರ ಮಾಡಿದ್ದ ಉಮಾಶ್ರೀ ಅಭಿನಯ ಎಲ್ಲರೂ ಬಾಯಿ ಮೇಲೆ ಬೆರಳಿಡುವಂತೆ ಮಾಡಿದೆ.



ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-**54** Email-mussanje2010@gmail.com, Phone: **9448074878**